ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: **ರಮೇಶರೆಡ್ಡಿ** | **9448 604450**

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 148 ಸಂಚಿಕೆ- 148 | PAGE-8 ಪುಟ-8 | ಮಂಗಳವಾರ 22.07.2025 | RS.2/- ಬೆಲೆ 2/-

# ಚಿನ್ನದಂಗಡಿ ದರೋಡೆ

# ೩ ಅಂತರರಾಜ್ಯ ಆರೋಪಿಗಳ ಸೆರೆ

ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಜು.21: ನಗರದ ಸೂಪರ್ ಮಾರ್ಕೆಟ್‌ನಲ್ಲಿರುವ ಸರಾಫ್ ಬಜಾರ್‌ನಲ್ಲಿ ಕಳೆದ 11ರಂದು ಹಾಡುಹಗಲೇ ಮಹ್ಮದ್ ಸಬ್ಬಾತುಲ್ಲಾ ಮಲ್ಲಿಕ್ ತಂದೆ ಮಹ್ಮ ಕಿಬಾರಿಯಾ ಮುಲ್ಲಿಕ್ ಎಂಬುವವರ ಒಡೆತನಕ್ಕೆ ಸೇರಿದ ಚಿನ್ನದ ಅಂಗಡಿಯಲ್ಲಿ ಮೂರು ಕೋಟಿ ರೂ.ಗಳಿಗಿಂತಲೂ ಅಧಿಕ ಮೌಲ್ಯದ ಚಿನ್ನಾಭರಣಗಳನ್ನು ದೋಚಿ ಪರಾರಿಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಕುಖ್ಯಾತ ಅಂತರರಾಜ್ಯ ದರೋಡೆಕೋರರನ್ನು ಬಂಧಿಸಿ ಅವರಿಂದ ಸುಮಾರು 2.10 ಕೋಟಿ ರೂ.ಗಳ ಮೌಲ್ಯದ ಚಿನ್ನಾಭರಣಗಳು ಹಾಗೂ 4.80 ಲಕ್ಷ ರೂ.ಗಳ ನಗದು ಸೇರಿದಂತೆ ಒಟ್ಟು ಸುಮಾರು 2.15 ಕೋ. ರೂ. ಮೌಲ್ಯದ ಸ್ವತು ವಶಪಡಿಸಿಕೊಳ್ಳಲಾಗಿದೆ ಎಂದು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ತಿಳಿಸಿದರು.


ಅವರು ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರಕರಣಕ್ಕೆ ಸಂಬಂಧಿಸಿದಂತೆ ಮೂಲತ:



ಪಶ್ಚಿಮಬಂಗಾಳದ ಪರಗಣ ಜಿಲ್ಲೆಯ ಕನಸೋನಾ ಗ್ರಾಮದ, ಹಾಲಿ ವಸ್ತಿ ಮುಂಬಯಿಯ ಮನಕುರ್ದ ವೆಸ್ಟ್‌ನ ಪಿಎಂಜಿ ಕಾಲೋನಿ ನಿವಾಸಿ ಹಾಗೂ ಬಟ್ಟೆ ವ್ಯಾಪಾರಿ ಅಯೋದ್ಯಾ ಪ್ರಸಾದ್ ಚವ್ಹಾಣ್ ತಂದೆ ಸೀತಾರಾಮ್ ಚವ್ಹಾಣ್ (48), ಪಶ್ಚಿಮಬಂಗಾಳ್ ಜಿಲ್ಲೆಯ ಹೂಗ್ಲಿ ಜಿಲ್ಲೆಯ ಶಥಿತನ ಗ್ರಾಮದ ಚಿನ್ನದ ವ್ಯಾಪಾರಿ ಫಾರೂಕ್ ಅಹೆಮದ್ ಮುಲ್ಲಿಕ್ ತಂದೆ ಅಬ್ದುಲ್ ವಾಹಬ್ ಮುಲ್ಲಿಕ್ (40) ಮತ್ತು ಮಹಾರಾಷ್ಟ್ರದ ಮುಂಬಯಿ ನಗರದ ಪತ್ರಾಚಾಳ ಮಾನ್ ಕೂರ್ದನ ಟೇಲರ್ ಸೋಹೆಲ್ ಶೇಕ್ ಅಲಿಯಾಸ್ ಬಾದಶಾ ತಂದೆ ಮೊಹ್ಮದ್ ಇಸ್ಮಾಯಿಲ್ ಶೇಕ್ (30) ಅವರನ್ನು ಬಂಧಿಸಲಾಗಿದೆ ಎಂದರು.

ಪ್ರಕರಣದಲ್ಲಿ ಇನ್ನಿಬ್ಬರು ಪರಾ-ರಿಯಾಗಿದ್ದು, ಅವರ ಪತ್ತೆ ಕಾರ್ಯ ಮುಂದುವರೆದಿದೆ. ಬಂಧಿತರಿಂದ ಸುಮಾರು 2.10 ಕೋಟಿ ರೂ.ಗಳ ಮೌಲ್ಯದ ಚಿನ್ನಾಭರಣಗಳು ಜಾಗೂ ನಗದು 4.80 ಲಕ್ಷ ರೂ.ಗಳನ್ನು ವಶಪಡಿಸಿಕೊಳ್ಳಲಾಗಿದೆ. ದರೋಡೆಕೋರರ ಪತ್ತೆಗಾಗಿ ಐದು ವಿಶೇಷ ತಂಡಗಳನ್ನು ರಚಿಸಲಾಗಿತ್ತು. ಹೀಗಾಗಿ ಆ ತಂಡಗಳು ಕರ್ನಾಟಕ, ಮಹಾರಾಷ್ಟ್ರ, ಉತ್ತರ ಪ್ರದೇಶ, ಪಶ್ಚಿಮಬಂಗಾಳ್, ತೆಲಂಗಾಣ್ ರಾಜ್ಯಗಳಲ್ಲಿ ಕಾರ್ಯಾಚರಣೆ ಕೈಗೊಂಡಿತು ಎಂದು ಅವರು ಹೇಳಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಸಿ ಟಿವಿ ಕ್ಯಾಮೆರಾ ದೃಶ್ಯಾವಳಿಗಳು ಹಾಗೂ ತಾಂತ್ರಿಕ ಅಂಶಗಳ ಮೂಲಕ ಮೂವರು ದರೋಡೆಕೋರರನ್ನು





ಸೆರೆ ಹಿಡಿಯಲಾಗಿದೆ. ಆರೋಪಿಗಳು ದರೋಡೆ ಮಾಡಿದ ನಂತರ ನಗರದಿಂದ ಬಸ್‌ನಲ್ಲಿ ಮುಂಬಯಿಗೆ ಪ್ರಯಾಣ ಬೆಳೆಸಿದ್ದಾರೆ. ನಂತರ ರೈಲಿನ ಜನರಲ್ ಬೋಗಿಯಲ್ಲಿ ಪ್ರಯಾಣ ಮಾಡಿದ್ದಾರೆ. ಪೋಲಿಸ್ ವಿಶೇಷ ತಂಡವು ಆರೋಪಿಗಳ ಬೆನ್ನು ಬಿದ್ದಿದ್ದರಿಂದ ತಾವು ಕಳ್ಳತನ ಮಾಡಿದ ಚಿನ್ನಾಭರಣಗಳನ್ನು ಎಲ್ಲಿಯೂ ಮಾರಾಟ ಮಾಡಲು ಆಗಿಲ್ಲ. ಎಲ್ಲವನ್ನೂ ವಶಪಡಿಸಿಕೊಳ್ಳಲಾಗಿದೆ. ಇನ್ನೂ ಇಬ್ಬರು ಆರೋಪಿಗಳ ಪತ್ತೆ ಕಾರ್ಯ ಮುಂದುವರೆದಿದೆ ಎಂದು ಅವರು ತಿಳಿಸಿದರು.

ಪ್ರಕರಣದಲ್ಲಿ ಫಾರೂಕ್ ಅಹೆಮದ್ ಮುಲ್ಲಿಕ್ ತಂದೆ ಅಬ್ದುಲ್ ವಾಹಬ್ ಮುಲ್ಲಿಕ್ ಪ್ರಮುಖ ಆರೋಪಿಯಾಗಿದ್ದಾನೆ. ಈತ ನಗರದ ಮೋಮಿನಪುರದಲ್ಲಿ ಕಳೆದ ಮೂರು ವರ್ಷಗಳಿಂದ ಚಿನ್ನದಂಗಡಿಯನ್ನು ಹಾಕಿಕೊಂಡಿದ್ದ. ವ್ಯಾಪಾರ ಸರಿಯಾಗಿ ಆಗದೇ ಇದ್ದುದರಿಂದ ನಷ್ಟದಲ್ಲಿದ್ದ. ಸುಮಾರು 37ರಿಂದ 40 ಲಕ್ಷ ರೂ.ಗಳಷ್ಟು ಸಾಲ ಮಾಡಿಕೊಂಡಿದ್ದ. ಹೀಗಾಗಿ ಪರಿಚಿತ ಅಂಗಡಿಯ ಮಹ್ಮದ್ ಸಬ್ಬಾತುಲ್ಲಾ ಮಲ್ಲಿಕ್ ಅಂಗಡಿಯ ದರೋಡೆ ಕುರಿತು ಸಂಚು ರೂಪಿಸಿದ. ಹಾಗಾಗಿ ಆತ ಪಶ್ಚಿಮಬಂಗಾಳದ ಪರಗಣ ಜಿಲ್ಲೆಯ ಕನಸೋನಾ ಗ್ರಾಮದ, ಹಾಲಿ ವಸ್ತಿ ಮುಂಬಯಿಯ ಮನಕುರ್ದ ವೆಸ್ಟ್‌ನ ಪಿಎಂಜಿ ಕಾಲೋನಿ ನಿವಾಸಿ ಹಾಗೂ ಬಟ್ಟೆ ವ್ಯಾಪಾರಿ ಅಯೋದ್ಯಾಪ್ರಸಾದ್ ಚವ್ಹಾಣ್ ತಂದೆ ಸೀತಾರಾಮ್ ಚವ್ಹಾಣ್‌ನಿಗೆ ಸಂಪರ್ಕಿಸಿದ. ಆತನ ಪತ್ನಿಗೆ ಹೃದಯ ಕಾಯಿಲೆ ಇದ್ದುದರಿಂದ ಆತನೊಂದಿಗೆ ಅತನ ಪತ್ನಿಯನ್ನು ನಗರಕ್ಕೆ ಕರೆಸಿದ್ದು, ಖ್ವಾಜಾ ಬಂದೇ ನವಾಜ್ ದರ್ಗಾದಲ್ಲಿ ಆ ಕುರಿತು ವಿಶೇಷ ಪ್ರಾರ್ಥನೆಯನ್ನೂ ಸಲ್ಲಿಸಿದ್ದರು. ನಂತರ ಮೂರನೇ ಆರೋಪಿ ಪಶ್ಚಿಮಬಂಗಾಳ್ ಜಿಲ್ಲೆಯ ಹೂಗ್ಲಿ ಜಿಲ್ಲೆಯ ಶಥಿತನ ಗ್ರಾಮದ ಚಿನ್ನದ ವ್ಯಾಪಾರಿ ಫಾರೂಕ್ ಅಹೆಮದ್ ಮುಲ್ಲಿಕ್ ತಂದೆ ಅಬ್ದುಲ್ ವಾಹಬ್ ಮುಲ್ಲಿಕ್ ಅಲ್ಲದೇ ಇನ್ನಿಬ್ಬರು ಆರೋಪಿಗಳು ಸೇರಿ ಒಟ್ಟು ಐವರು ದರೋಡೆ ಪ್ರಕರಣದಲ್ಲಿ ತೊಡಗಿಸಿಕೊಂಡರು

(2ನೇ ಪುಟ ನೋಡಿ)

## ಕತ್ತಲಲ್ಲಿ ಹುಮನಾಬಾದ್!

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಜು.21: ನಗರವು ಸದಾ ಕತ್ತಲಿನಲ್ಲಿದೆಯೇ, ಎಂದರೆ ಹೌದು ಎಂಬ ಉತ್ತರ ದೊರಕುತ್ತಿದೆ, ಹುಮನಾಬಾದ್ ನಗರಕ್ಕೆ ಅಂದಿನ ಶಾಸಕ ರಾಜಶೇಖರ ಪಾಟೀಲರವರು. ಬೈಪಾಸ್ ದಿಂದ ಐಬಿ ವರೆಗೆ ಹಾಗೂ ಐಬಿ ದಿಂದ ಬಸವೇಶ್ವರ ಚೌಕ್ ವರೆಗೆ ಉತ್ತಮ ರೀತಿಯಲ್ಲಿ ವಿದ್ಯುತ್ ದೀಪಗಳನ್ನು ಅಲಂಕರಿಸಿದ್ದರು. ಹುಮನಾಬಾದ್ ನಗರಕ್ಕೆ ಬರುವವರಿಗೆ ಹೈಟೆಕ್ ನಗರದಂತೆ ಕಾಣುತ್ತಿತ್ತು. ಆದರೆ ಈವಾಗ ನೋಡಿದರೆ ಹುಮನಾಬಾದ್ ಕತ್ತಲಲ್ಲಿದೆ.

ನಗರವು ಕತ್ತಲ ಕಾರ್ಮೋಡದಂತಿದೆ. ಅನಾಥವಾದ

ಹಾಗೆ ಕಾಣುತ್ತಿದೆ. ಹೇಳುವವರು ಕೇಳುವವರು ಯಾರು ಇಲ್ಲದಂತಾಗಿದೆ. ಹಾವುಗಳು ರಸ್ತೆಯ ಮೇಲೆ ಓಡಾಡುತ್ತಿವೆ. ನಗರದ ಜನರು ರಸ್ತೆಯ ಮೇಲೆ ಓಡಾಡಲು ಭಯಭೀತರಾಗುವಂತಾಗಿದೆ. ತಕ್ಷಣ ಸಂಬಂಧಿಸಿದವರು ಈ ಬಗ್ಗೆ ಕ್ರಮ ಕೈಗೊಳ್ಳಲು ಸಾರ್ವಜನಿಕರು ಒತ್ತಾಯಿಸಿದ್ದಾರೆ.

## ಡಾ. ಮಲ್ಲಿಕಾರ್ಜುನ್ ಖರ್ಗೆ ಜನ್ಮದಿನ ಸಂಭ್ರಮಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಪಟ್ಟಣದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಯಲ್ಲಿ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ನೇತೃತ್ವದಲ್ಲಿ ಸೋಮವಾರ ರಾಜ್ಯಸಭಾ ವಿಪಕ್ಷ ನಾಯಕ ಮತ್ತು ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ ಜನ್ಮದಿನ ಕಾರ್ಯಕ್ರಮ ಸಂಭ್ರಮದಿಂದ ಆಚರಿಸಲಾಯಿತು.

ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಮಾತನಾಡಿ, ಡಾ. ಮಲ್ಲಿಕಾರ್ಜುನ್ ಖರ್ಗೆ ಅವರು ಜೀವನದುದ್ದಕ್ಕೂ ಪ್ರಜಾಪ್ರಭುತ್ವದ

(2ನೇ ಪುಟ ನೋಡಿ)

## ಕಿಂಚಿತ್ ನಾಚಿಕೆ ಉಳಿದುಕೊಂಡಿದ್ದರೆ ಅಶೋಕ ಹಾಗೂ ವಿಜಯೇಂದ್ರ ರಾಜೀನಾಮೆ ನೀಡಲಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.21:

"ಮತದಾರರಲ್ಲಿ ರಾಜಕೀಯ ಹೋರಾಟಗಳು ನಡೆಯಲಿ. ನಿಮ್ಮನ್ನು ಏಕೆ ಬಳಸಿಕೊಳ್ಳಲಾಗುತ್ತಿದೆ?" ಎಂದು ಮಾನ್ಯ ಸರ್ವೋಚ್ಚ ನ್ಯಾಯಾಲಯ ಇಡಿ ಸಂಸ್ಥೆಯನ್ನು ಕೇಳಿದೆ.

ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ



ಸಿದ್ದರಾಮಯ್ಯ ಅವರ ವಿರುದ್ಧದ ಇಡಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ತಿರಸ್ಕರಿಸಿದ್ದಲ್ಲದೆ,

ಇಡಿ ಬಿಜೆಪಿಯ ಕೈಗೊಂಬೆಯಾಗಿದೆ ಮತ್ತು ರಾಜಕೀಯ ಸೇಡು ತೀರಿಸಿಕೊಳ್ಳುತ್ತಿದೆ ಎಂದು ಟೀಕಿಸಿರುವ ಹಿನ್ನೆಲೆಯಲ್ಲಿ ವಿಧಾನಸಭೆಯಲ್ಲಿನ ಪ್ರತಿ ಪಕ್ಷದ ನಾಯಕರಾದ ಆರ್. ಅಶೋಕ ಮತ್ತು ಬಿಜೆಪಿ ಅಧ್ಯಕ್ಷ

(2ನೇ ಪುಟ ನೋಡಿ)

## ಕೆಮಿಕಲ್ ಕಾರ್ಖಾನೆ ಹಠಾವೊ ಹುಮನಾಬಾದ್ ಬಚಾವೊ ಆಂದೋಲನ ಯಾವಾಗ?

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಜು.21: ಇಲ್ಲಿನ ಹೊರ ವಲಯದ ಕೆಮಿಕಲ್ ಕಾರ್ಖಾನೆಗಳಿಂದ ಇಡಿ ಹುಮನಾಬಾದ್ ತಾಲ್ಲೂಕಿನ ಜನರು ತತ್ತರಿಸಿ ಹೋಗಿದ್ದಾರೆ. ಕಾರ್ಖಾನೆ ಹಠಾವೊ ಹುಮನಾಬಾದ್ ಬಚಾವೊ ಅಂದೊಲನ ಯಾವಾಗ ಚಾಲನೆ ಆಗಲಿದೆ ಎಂಬ ಪ್ರಶ್ನೆ ಜನರಲ್ಲಿ ಕಾಡುತ್ತಿದೆ.

ಪ್ರತಿನಿತ್ಯ ಜನರು ದುರ್ವಾಸನೆಯಿಂದ ನರಳುತ್ತಿದ್ದರೆ. ಮಾವಿನ ಗಿಡಗಳಿಗೆ ಮಾವು ಹತ್ತುತ್ತಿಲ್ಲ, ಬೆಳೆಗಳು ನಾಶವಾಗುತ್ತಿವೆ. ತಕ್ಷಣ ವಿಷ ಉಗುಳುವ ಕೆಮಿಕಲ್ ಕಾರ್ಖಾನೆಗಳನ್ನು ತಕ್ಷಣ ಸ್ಥಳಾಂತರಿಸಬೇಕು ಎಂಬ ಒತ್ತಾಯ ಜನರದ್ದಾಗಿದೆ.

## ಸುಪ್ರೀಂ ತೀರ್ಪು ಸ್ವಾಗತಿಸಿದ ಸಿಎಂ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜು.21: ಮೈಸೂರು ಅಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ನೀಡಿದ್ದ ನೋಟಿಸ್ ರದ್ದುಗೊಳಿಸಿದ ಕರ್ನಾಟಕ ಹೈಕೋರ್ಟ್ ತೀರ್ಪನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದ್ದು, ಈ ನಿರ್ಧಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಸ್ವಾಗತಿಸಿದ್ದಾರೆ. ಈ ಕುರಿತು ಟ್ವೀಟ್



ಮಾಡಿರುವ ಅವರು, ಮುಡಾ ನಿವೇಶನ ಹಂಚಿಕೆ ವಿಚಾರದಲ್ಲಿ ನನ್ನ ಪತ್ನಿ ಶ್ರೀಮತಿ ಪಾರ್ವತಿಯವರ ವಿರುದ್ಧ ತನಿಖೆ ನಡೆಸಲು ಇ.ಡಿ. ಸಲ್ಲಿಸಿರುವ ಮೇಲ್ಮನವಿಯನ್ನು ಸುಪ್ರೀಂ ಕೋರ್ಟ್ ವಜಾ ಮಾಡಿ ನೀಡಿರುವ ಐತಿಹಾಸಿಕ ಆದೇಶ ಕೇಂದ್ರ ಸರ್ಕಾರದ ಕಪಾಳಕ್ಕೆ ನ್ಯಾಯದಂಡ ಬಾರಿಸಿರುವ ತಪರಾಕಿಯಾಗಿದೆ ಎಂದಿದ್ದಾರೆ.

ಸುಪ್ರೀಂಕೋರ್ಟ್‌ನ ಗೌರವಾನ್ವಿತ ಮುಖ್ಯನ್ಯಾಯಮೂರ್ತಿಗಳಾದ ಬಿ.ಆರ್. ಗವಾಯಿ ಮತ್ತು ನ್ಯಾಯಮೂರ್ತಿಗಳಾದ ಕೆ.ವಿನೋದಚಂದ್ರ ಅವರ

(2ನೇ ಪುಟ ನೋಡಿ)

## ಆಪರೇಷನ್ ಸಿಂಧೂರ್, ಪಹಲ್ಗಾಮ್ ದಾಳಿ:ಚರ್ಚೆಗೆ ಕೇಂದ್ರ ಒಪ್ಪಿಗೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜು.21: ಲೋಕಸಭೆಯಲ್ಲಿ ಆಪರೇಷನ್ ಸಿಂಧೂರ್ ಮತ್ತು ಪಹಲ್ಗಾಮ್ ಉಗ್ರರ ದಾಳಿ ಕುರಿತು 16 ಗಂಟೆ ಚರ್ಚೆಗೆ ಕೇಂದ್ರ ಸರ್ಕಾರ ಸೋಮವಾರ ಒಪ್ಪಿಗೆ ನೀಡಿದೆ.

ಇದೇ ವಾರದಲ್ಲಿ

ಈ ಕುರಿತು ಚರ್ಚೆ ನಡೆಯಬೇಕು ಮತ್ತು ಪ್ರಧಾನಿ ನರೇಂದ್ರ ಮೋದಿ ಉತ್ತರಿಸಬೇಕು ಎಂದು ವಿರೋಧ ಪಕ್ಷಗಳು ಒತ್ತಾಯಿಸುತ್ತಿದ್ದರೂ ಮುಂದಿನ ವಾರ ಈ ವಿಚಾರವನ್ನು ಚರ್ಚೆಗೆ ತೆಗೆದುಕೊಳ್ಳುವ ಸಾಧ್ಯತೆಯಿದೆ.

ಈ ವಾರ ಪ್ರಧಾನಿ ನರೇಂದ್ರ ಮೋದಿ ಅವರು ವಿದೇಶ ಪ್ರವಾಸಕ್ಕೆ ತೆರಳುತ್ತಿದ್ದು, ಮುಂದಿನ ವಾರ ಚರ್ಚೆ ನಡೆದರೆ ಪ್ರಧಾನಿ ಸದನದಲ್ಲಿ ಹಾಜರಿರುವ ಮೂಲಕ ಉತ್ತರ ನೀಡಲಿದ್ದಾರೆ ಎಂದು ಕಾರ್ಯ ಕಲಾಪ ಸಮಿತಿ ಸಭೆಯಲ್ಲಿ ಸರ್ಕಾರದ ಪ್ರತಿನಿಧಿಗಳು ಹೇಳಿರುವುದಾಗಿ ಮೂಲಗಳು ಹೇಳಿವೆ.

ಇದೇ ವಾರ ಪಹಲ್ಗಾಮ್ ದಾಳಿ, ಆಪರೇಷನ್ ಸಿಂಧೂರ್ ಹಾಗೂ ಭಾರತ-ಪಾಕಿಸ್ತಾನ

ನಡುವಣ ಕದನ ವಿರಾಮ ಜಾರಿ ಕುರಿತು ಅಮೆರಿಕ

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆ ಕುರಿತು ಪ್ರಧಾನಿ ನರೇಂದ್ರ ಮೋದಿ ಇದೇ ವಾರ ಸಂಸತ್ತಿನಲ್ಲಿ ಉತ್ತರಿಸಬೇಕು ಎಂಬ ತಮ್ಮ ಬೇಡಿಕೆಯನ್ನು ಸರ್ಕಾರದ ಕಾರ್ಯಸೂಚಿಯಲ್ಲಿ ಉಲ್ಲೇಖಿಸಿಲ್ಲ ಎಂದು ಆರೋಪಿಸಿ ವಿಪಕ್ಷ ಸದಸ್ಯರು ಪ್ರತಿಭಟನೆ ನಡೆಸಿದ್ದಾರೆ.

ಪ್ರಧಾನಿ ಹೇಳಿಕೆ ನೀಡುವಾಗ ಗೃಹ ಹಾಗೂ ರಕ್ಷಣಾ ಸಚಿವರು ಕೂಡಾ ಸದನದಲ್ಲಿ ಇರಬೇಕು ಎಂದು ಪ್ರತಿಪಕ್ಷಗಳು ಒತ್ತಾಯಿಸಿವೆ.

ಕೆಲವು ವಿಪಕ್ಷಗಳ ಸದಸ್ಯರು ಬಿಹಾರದಲ್ಲಿ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಮಣಿಪುರದಲ್ಲಿನ ಸ್ಥಿತಿಗತಿ ಕುರಿತು ಚರ್ಚೆಗೆ ಒತ್ತಾಯಿಸಿದ್ದಾರೆ. ಇಂದಿನಿಂದ ಸಂಸತ್ತಿನ ಮುಂಗಾರು ಅಧಿವೇಶನ ಆರಂಭವಾಗಿದೆ.

## ಮುಡಾ ಹಗರಣ:ಸಿಎಂ ಪತ್ನಿಗೆ ಸುಪ್ರಿಂನಿಂದ ಬಿಗ್ ರಿಲೀಫ್

ಮಲ್ಲಮ್ಮ ನುಡಿ ವಾರ್ತೆ

ನವದಹೆಲಿ:ಜು.21: ಮುಡಾ ಕೇಸ್‌ನಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿಯವರಿಗೆ ಬಿಗ್ ರಿಲೀಫ್ ಸಿಕ್ಕಿದೆ.

ಮುಡಾದಲ್ಲಿ ನಡೆದಿದೆ ಎನ್ನಲಾದ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಬಿ.ಎಂ ಪಾರ್ವತಿ ಹಾಗೂ ಸಚಿವ ಬೈರತಿ ಸುರೇಶ್ ಅವರಿಗೆ ಜಾರಿ ನಿರ್ದೇಶನಾಲಯ ನೀಡಿದ್ದ ಸಮನ್ಸ್ ಅನ್ನು ರದ್ದು ಮಾಡಿದ ಕರ್ನಾಟಕ ಹೈಕೋರ್ಟ್‌ನ ತೀರ್ಪನ್ನು ಸುಪ್ರೀಂ ಕೋರ್ಟ್ ಎತ್ತಿ ಹಿಡಿದಿದೆ. ಇ.ಡಿ ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯ ವಿಚಾರಣೆ ನಡೆಸಿದ ಸಿಜೆಐ ಬಿ.ಆರ್ ಗವಾಯಿ ನೇತೃತ್ವದ ಪೀಠ, ಇ.ಡಿಯನ್ನು ಟೀಕಿಸಿದೆ.

ರಾಜಕಾರಣಿಗಳು ರಾಜಕೀಯ ಮಾಡಿಕೊಳ್ಳಲಿ, ಇದರಲ್ಲಿ ನಿಮಗೆ ಏನು ಕೆಲಸ ಎಂದು ಇಡಿ ಗೆ ಸುಪ್ರೀಂಕೋರ್ಟ್ ಪ್ರಶ್ನಿಸಿದೆ. ಬಾಯಿ



ತೆರೆಯಲು ನಮಗೆ ಬಲವಂತ ಮಾಡಬೇಡಿ. ಇಲ್ಲದಿದ್ದರೆ ಇ.ಡಿ ಬಗ್ಗೆ ತೀಕ್ಷ್ಣ ಟಿಪ್ಪಣಿ ಮಾಡಬೇಕಾದಿತು. ನನಗೆ ಇದರ ಬಗ್ಗೆ ಮಹಾರಾಷ್ಟ್ರದಲ್ಲಿ ಕೆಲವು ಅನುಭವಗಳಾಗಿವೆ. ದೇಶದಾದ್ಯಂತ ನೀವು ಇದನ್ನು ಮುಂದುವರಿಸಕೂಡದು ಎಂದು ಇ.ಡಿ ಪರವಾಗಿ ಹಾಜರಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ರಾಜು ಅವರೊಂದಿಗೆ ಸಿಜೆಐ ಕಠಿಣವಾಗಿ ಮಾತನಾಡಿದ್ದಾರೆ. ಮುಂದುವರಿದು, ಏಕಸದಸ್ಯ ಪೀಠದ ತೀರ್ಪಿನಲ್ಲಿ ನಮಗೆ ಲೋಪ ಕಂಡುಬಂದಿಲ್ಲ. ಹೀಗಾಗಿ ಇಡಿ

ಅರ್ಜಿಯನ್ನು ವಜಾಗೊಳಿಸುತ್ತಿದ್ದೇವೆ ಎಂದರು. ಇದರೊಂದಿಗೆ

ಇದೀಗ, ಮುಡಾ ಹಗರಣದಲ್ಲಿ ಸಿಎಂ ಪತ್ನಿ ಪಾರ್ವತಿ ಹಾಗೂ ಸಚಿವ ಬೈರತಿ ಸುರೇಶ್ ನಿರಾಳರಾದಂತಾಗಿದೆ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಇ.ಡಿ ಮೇಲ್ಮನವಿ ಸಲ್ಲಿಸಿತ್ತು.

ಈ ಅರ್ಜಿಯನ್ನು ನ್ಯಾಯಾಲಯ ವಿಚಾರಣೆ ನಡೆಸಿತು.

## ಕಾಂಗ್ರೆಸ್ ಸರಕಾರದಿಂದ ಜನಪರ ಆಡಳಿತ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.21: ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರಕಾರ ಕಳೆದ ಎರಡು ವರ್ಷಗಳಿಂದ ಜನಪರ ಆಡಳಿತ ನೀಡುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ಆಯೋಜಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾಂಗ್ರೆಸ್ ಪಕ್ಷ ಚುನಾವಣೆ ಪೂರ್ವದಲ್ಲಿ ನೀಡಿದ ಎಲ್ಲ ಭರವಸೆಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆಯುತ್ತಿದೆ.

ವಿಶೇಷವಾಗಿ ಐದು ಗ್ಯಾರಂಟಿ ಯೋಜನೆ ಅನುಷ್ಠಾನದಿಂದ ಮಹಿಳಾ ಸಬಲೀಕರಣ ಆಗಿದೆ ಎಂದರು.

ಅರಣ್ಯ ಇಲಾಖೆ ಸಚಿವ ಮತ್ತು ಜಿಲ್ಲೆಯ ಉಸ್ತುವಾರಿ ಸಚಿವನಾಗಿ ಜಿಲ್ಲೆಯ ಪ್ರಗತಿಗೆ ಅವಿರತವಾಗಿ ದುಡಿಯುತ್ತಿದ್ದೇನೆ. ಅನೇಕ ಯೋಜನೆಗಳನ್ನು ಜಾರಿಗೊಳಿಸಿ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮ ವಹಿಸುತ್ತಿದ್ದೇನೆ.




ತಾಲೂಕಿನಲ್ಲಿ ನೂತನ ಹೊರಾಂಗಣ ಕ್ರೀಡಾಂಗಣ, 150 ಹಾಸಿಗೆ ಆಸ್ಪತ್ರೆ ಕಟ್ಟಡ ನಿರ್ಮಾಣ ಸೇರಿ ಮುಂತಾದ ಅಭಿವೃದ್ಧಿ ಪರ ಕೆಲಸ ಪ್ರಗತಿಯಲ್ಲಿವೆ.

ಮುಂದೆಯು ಸರಕಾರದ ಇನ್ನಷ್ಟು ಯೋಜನೆಗಳನ್ನು ಜಾರಿಗೆ ತಂದು ರಾಜ್ಯದಲ್ಲಿ ಮಾದರಿ ತಾಲೂಕು, ಜಿಲ್ಲೆಯನ್ನಾಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷಕ್ಕೆ ನೂತನವಾಗಿ ಸೇರ್ಪಡೆಗೊಂಡ ಶ್ರಾವಣಕುಮಾರ ಗಾಯಕವಾಡ್ ಮಾತನಾಡಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಜನಪರ ಆಡಳಿತ ನೀಡುತ್ತಿದ್ದಾರೆ. ಅವರ ಅಭಿವೃದ್ಧಿ ಕಾರ್ಯಗಳನ್ನು ಕಂಡು ಕಾಂಗ್ರೆಸ್ ಸೇರಿದ್ದೇನೆ ಎಂದು ತಿಳಿಸಿದರು.

ಪುರಸಭೆ ಮಾಜಿ ಅಧ್ಯಕ್ಷ ಚಂದ್ರಕಾಂತ ಪಾಟೀಲ್ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಸಿಎಂ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟದಲ್ಲಿ ಕ್ರಿಯಾಶೀಲ ಸಚಿವರಾಗಿ ಕೆಲಸ ಮಾಡುತ್ತಿದ್ದಾರೆ. ಅವರಿಗೆ ಮತ್ತಷ್ಟು ಶಕ್ತಿ ತುಂಬಲು ಮರಳಿ ಕಾಂಗ್ರೆಸ್ ಪಕ್ಷ ಸೇರಿದ್ದೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# 3 ಅಂತರರಾಜ್ಯ ಆರೋಪಿಗಳ ಸೆರೆ

ಎಂದರು.ಬಂಧಿತ ಆರೋಪಿ ಅಯೋದ್ಯಾಪ್ರಸಾದ್ ಮೇಲೆ ಮುಂಬಯಿಯಲ್ಲಿ 12 ಬಟ್ಟೆ ಕಳ್ಳತನ ಪ್ರಕರಣಗಳು ದಾಖಲಾಗಿವೆ ಎಂದು ತಿಳಿಸಿದ ಅವರು, ಪ್ರಮುಖ ಆರೋಪಿಯ ಮೇಲೆ ಪ್ರಕರಣಗಳು ಕಂಡುಬಂದಿಲ್ಲ. ಕಲಬುರಗಿಯಲ್ಲಿ ಚಿನ್ನದ ಅಂಗಡಿಯನ್ನು ಆರಂಭಿಸುವ ಮೊದಲು ದುಬೈದಲ್ಲಿ ಕೆಲಸ ಮಾಡುತ್ತಿದ್ದ. ಟರ್ಕಿ ಗೋಲ್ಡ್ ವ್ಯಾಪಾರದಲ್ಲಿಯೂ ತೊಡಗಿಸಿಕೊಂಡಿದ್ದ. ಕಳೆದ ಮೂರು ವರ್ಷಗಳಿಂದ ನಗರದಲ್ಲಿ ಚಿನ್ನಾಭರಣ ತಯಾರಿಸುವ ಕಾರ್ಯಾಗಾರವನ್ನು ಹೊಂದಿದ್ದ ಎಂದು ಅವರು ಹೇಳಿದರು.ಬಂಧಿತ ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಿದಾಗ ತಾವು ಚಿನ್ನದಂಗಡಿಯ ಮಾಲಿಕನಿಗೆ ಚಾಕು ಹಾಗೂ ಲೈಟರ್ ಗನ್‌ನಿಂದ ಹೆದರಿಸಿ ಚಿನ್ನಾಭರಣ ದೋಚಿದ್ದಾಗಿ ಒಪ್ಪಿಕೊಂಡಿದ್ದಾರೆ. ಈಗಾಗಲೇ ದರೋಡೆಗೆ ಒಳಗಾಗಿರುವ ಮಾಲಿಕನು ದೂರು ಕೊಟ್ಟಿದ್ದು, ಬೇರೆಯವರ ಚಿನ್ನಾಭರಣಗಳನ್ನೂ ಸಹ ತನ್ನ ಅಂಗಡಿಯಲ್ಲಿ ಇಟ್ಟುಕೊಂಡಿದ್ದು, ಆ ಚಿನ್ನಾಭರಣಗಳ ಕುರಿತು ಮಾಹಿತಿ ಕಲೆಹಾಕಲಾಗುತ್ತಿದೆ. ಹೆಚ್ಚಿನ ಚಿನ್ನಾಭರಣ ಪತ್ತೆಯಾಗಿರುವುದರ ಹಿಂದೆ ಗೋಲ್ಡ್ ಸ್ಮಗ್ಲಿಂಗ್ ಆಗಿರುವ ಕುರಿತು ಸಹ ಪರಿಶೀಲನೆ ನಡೆಯಲಿದೆ ಎಂದು ಅವರು ತಿಳಿಸಿದರು.

ಪಶ್ಚಿಮಬಂಗಾಳ ಮತ್ತು ಉತ್ತರ ಪ್ರದೇಶ ತಂಡದಲ್ಲಿ ಪಿಐಗಳಾದ ರಾಘವೇಂದ್ರ, ಸೋಮಲಿಂಗ ಕಿರದಳ್ಳಿ, ಶಿವಾನಂದ್ ವಾಲಿಕಾರ್, ಸಿಬ್ಬಂದಿಗಳಾದ ಬಂದೇನವಾಜ್, ಕೇಸುರಾಯ್, ಗುರುನಾಥ, ಮುಂಬಯಿ ತಂಡದಲ್ಲಿ ಪಿಐ ಅರುಣಕುಮಾರ್, ಸಿಬ್ಬಂದಿಗಳಾದ ವೈಜನಾಥ, ಶಿವಲಿಂಗ, ನೀಲಕಂಠ, ಹೈದ್ರಾಬಾದ್ ತಂಡದಲ್ಲಿ ಪ್ರಬಾರ ಪಿಐ ದಿಲೀಪ್ ಸಾಗರ್, ಸಿಬ್ಬಂದಿಗಳಾದ ಮಲ್ಲನಗೌಡ, ಆತ್ಮಕುಮಾರ್, ಜಾವಿದ್, ಸಂಗಣ್ಣ, ಮಲ್ಲಣ್ಣ, ಚಂದ್ರಶೇಖರ್, ತಾಂತ್ರಿಕ ತಂಡದಲ್ಲಿ ಪಿಐಗಳಾದ ಸಂತೋಷ ತಟ್ಟೆಪಳ್ಳಿ, ಶಕೀಲ್ ಅಹ್ಮದ್ ಅಂಗಡಿ, ಸುಶೀಲಕುಮಾರ್, ಸಿಬ್ಬಂದಿಗಳಾದ ಚನ್ನವೀರೇಶ್, ಪ್ರಭಾಕರ್, ಸುಮೀತ್, ಶಶಿಕಾಂತ್ ಅವರು ಕಾರ್ಯಾಚರಣೆ ಕೈಗೊಂಡರು ಎಂದು ಅವರು ಹೇಳಿದರು.ಕಲಬುರಗಿ ನಗರ ತಂಡದಲ್ಲಿ ದಕ್ಷಿಣ ಸಹಾಯಕ ಪೋಲಿಸ್ ಆಯುಕ್ತ ಶರಣಬಸಪ್ಪ ಸುಬೇದಾರ್, ಮಡೋಳಪ್ಪ ಪಿಎಸ್., ಚಂದ್ರಶೇಖರ್, ಇಸ್ಮಾಯಿಲ್ ಶರೀಫ್, ಪಿಐ ಅನೀಸ್ ಅಹ್ಮದ್ ಮುಜಾವರ್, ಪಿಎಸ್‌ಐಗಳಾದ ಬಸವರಾಜ್, ಶ್ರೀಮತಿ ವಂದನಾ, ಎಎಸ್‌ಐ ಮಲ್ಲಿಕಾರ್ಜುನ್ ಗೌರಾ, ತಿಪ್ಪಣ್ಣ, ಸಿಬ್ಬಂದಿಗಳಾದ ಅಶೋಕ್ ಹಳಿಗೋದಿ, ಶಿವಪ್ರಕಾಶ್, ಶಶಿಕಾಂತ್, ದೇವಿಂದ್ರಪ್ಪ, ಸಂತೋಷ, ದೇವರಾಜ್ ಅರು ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡ ಎಲ್ಲರಿಗೂ ಪ್ರಶಂಸನಾ ಪತ್ರವನ್ನು ಶರಣಪ್ಪ ಎಸ್.ಡಿ., ಅವರು ನೀಡಿದರು. ಸುದ್ದಿಗೋಷ್ಠಿಯಲ್ಲಿ ಉಪ ಪೋಲಿಸ್ ಆಯುಕ್ತರಾದ ಶ್ರೀಮತಿ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್. ನಾಯಕ್, ಸಹಾಯಕ ಪೋಲಿಸ್ ಆಯುಕ್ತರಾದ ಶರಣಬಸಪ್ಪ ಸುಬೇದಾರ್, ಮಡೊಳಪ್ಪ ಪಿಎಸ್., ಚಂದ್ರಶೇಖರ್, ಇಸ್ಮಾಯಿಲ್ ಶರೀಫ್ ಮುಂತಾದವರು ಉಪಸ್ಥಿತರಿದ್ದರು.

# ಜನ್ಮದಿನ ಸಂಭ್ರಮಾಚರಣೆ

ಮೌಲ್ಯಗಳನ್ನು ಎತ್ತಿ ಹಿಡಿಯುವ ಮೂಲಕ ಕಾಂಗ್ರೆಸ್ ಪಕ್ಷದ ಅತ್ಯುನ್ನತ ಸ್ಥಾನವನ್ನು ಅಲಂಕರಿಸಿದ ದೊಡ್ಡ ನಾಯಕರಾಗಿದ್ದಾರೆ. ಪಕ್ಷದ ತತ್ವ, ಸಿಂದ್ಧಾಂತಗಳು ಮತ್ತು ಆದರ್ಶಗಳಿಗರ ಮಾದರಿಯಾದ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ನಮ್ಮ ಜಿಲ್ಲೆಯ ನಾಯಕರು ಎಂದು ಹೇಳಿಕೊಳ್ಳಲು ನನಗೆ ಹೆಮ್ಮೆಯಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ಓಂಕಾರ ತುಂಬಾ, ಯುವ ಕಾಂಗ್ರೆಸ್ ಅಧ್ಯಕ್ಷ ಉಮೇಶ ಜಮಗಿ, ಪುರಸಭೆ ಉಪಾಧ್ಯಕ್ಷ ಮುಕ್ರಮ್, ಜಿಪಂ. ಮಾಜಿ ಉಪಾಧ್ಯಕ್ಷ ಲಕ್ಷ್ಮಣರಾವ ಬುಳ್ಳಾ, ತಾಪಂ. ಮಾಜಿ ಸದಸ್ಯ ಬಾಬು ಟೈಗರ್, ರೇವಣಸಿದ್ದಪ್ಪ ಪಾಟೀಲ್, ತಾಪಂ. ಮಾಜಿ ಸದಸ್ಯ ಶ್ರೀಮಂತ ಪಾಟೀಲ್, ಘಾಂಗ್ರೆ, ಗ್ರಾಪಂ. ಅಧ್ಯಕ್ಷ ವೀರಪ್ಪ ಧುಮ್ಮನಸೂರ, ಕಂಟೆಪ್ಪ ದಾನ, ಪ್ರಭುರಾವ ತಾಳಮಡಗಿ, ಸಚೀನ್ ಮಠಪತಿ, ಪ್ರಕಾಶ ತಾಳಮಡಗಿ, ಸಚೀನ್ ಕಲ್ಲೂರ, ರಾಹುಲ್ ಉದ್ದಾ, ಪ್ರದೀಪ ಪಸಾರ್ಗಿ, ಲೋಕೇಶ ಧುಮ್ಮನಸೂರ, ಇದ್ದರು.

**ಹಣ್ಣು-ಹಂಪಲು ವಿತರಣೆ**

ರಾಜ್ಯಸಭೆ ವಿಪಕ್ಷ ನಾಯಕ ಮತ್ತು ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರ 83ನೇ ಜನ್ಮದಿನ ನಿಮಿತ್ತ ಹುಮಾನಾಬಾದ್ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಸೋಮವಾರ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿದರು.

# ಅಶೋಕ ಹಾಗೂ ವಿಜಯೇಂದ್ರ ರಾಜೀನಾಮೆ ನೀಡಲಿ

ಬಿ.ವೈ.ವಿಜಯೇಂದ್ರ ಅವರಲ್ಲಿ ಕಿಂಚಿತ್ತು ನಾಚಿಕೆ ಎನ್ನುವುದು ಉಳಿದಿದ್ದರೆ ತಕ್ಷಣ ರಾಜೀನಾಮೆ ನೀಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಒತ್ತಾಯಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಪ್ರಿಯಾಂಕ್ ಖರ್ಗೆ ಕರ್ನಾಟಕದ ಬಿಜೆಪಿ ಮುಡಾ ವಿಚಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸರ್ಕಾರದ ವಿರುದ್ಧ ದೆಹಲಿ ಯಜಮಾನರು ಹೇಳಿದಂತೆ ನಿರಂತರ ಅಪಪ್ರಚಾರ ನಡೆಸಿದರು. ಬಿಜೆಪಿ ಸುಳ್ಳು ಆರೋಪಗಳನ್ನು ಮಾಡಿ, ನಕಲಿ ಇಡಿ ದಾಳಿಗಳನ್ನು ಮಾಡಿಸಿತು ಮತ್ತು ರಾಜ್ಯಪಾಲರ ಕಚೇರಿಯನ್ನು ದುರುಪಯೋಗಪಡಿಸಿಕೊಂಡಿತು ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರಲ್ಲದೆ, ಈ ಸಂಬಂಧ ಹೈಕೋರ್ಟ್ ಮತ್ತು ಈಗ ಸುಪ್ರೀಂ ಕೋರ್ಟ್ ಎರಡೂ ಬಿಜೆಪಿ ಸುಳ್ಳುಗಳನ್ನು ಬಹಿರಂಗಪಡಿಸಿವೆ, ಇಡಿ-ಬಿಜೆಪಿ ನಡುವಿನ ಸಂಬಂಧ ಮತ್ತು ಪಿತೂರಿ ಬಹಿರಂಗಗೊಂಡಿದ್ದು ಬಿಜೆಪಿ ಹೂಡಿದ ಸಂಚು ಛಿದ್ರಗೊಂಡಿದೆ ಎಂದಿದ್ದಾರೆ.

# ತೀರ್ಪು ಸ್ವಾಗತಿಸಿದ ಸಿಎಂ

ಆದೇಶವನ್ನು ನಾನು ವಿನೀತನಾಗಿ ಸ್ವಾಗತಿಸುತ್ತೇನೆ. ನನ್ನ ಸುದೀರ್ಘ ರಾಜಕೀಯ ಜೀವನದಲ್ಲಿ ನಾನು ಸದಾ ಸಂವಿಧಾನ ಮತ್ತು ನೆಲದ ಕಾನೂನಿಗೆ ತಲೆಬಾಗುತ್ತಾ ಬಂದವನು. ಈ ನಂಬಿಕೆಯನ್ನು ಸುಪ್ರೀಂ ಕೋರ್ಟ್ ಆದೇಶ ಉಳಿಸಿಕೊಂಡು ಕಾಪಾಡಿದೆ ಎಂದು ತಿಳಿಸಿದರು.ಮುಡಾ ಪ್ರಕರಣದಲ್ಲಿ ಸಿದ್ದರಾಮಯ್ಯ ಅವರ ಪತ್ನಿ ಬಿಎಂ ಪಾರ್ವತಿ ಮತ್ತು ಸಚಿವ ಬೈರತಿ ಸುರೇಶ್ ಅವರಿಗೆ ಇ.ಡಿ ನೀಡಿದ್ದ ನೋಟಿಸ್ ಅನ್ನು ರದ್ದುಗೊಳಿಸಿದ ಹೈಕೋರ್ಟ್ ತೀರ್ಪನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ. ಇ.ಡಿ ಸಲ್ಲಿಸಿದ್ದ ರಜಾಕಾಲದ ವಿಶೇಷ ಅರ್ಜಿಯನ್ನು ವಜಾಗೊಳಿಸಿದೆ.ಜಾರಿ ನಿರ್ದೇಶನಾಲಯದ ಬಗ್ಗೆ ನಕಾರಾತ್ಮಕ ಟೀಕೆಗಳನ್ನು ಮಾಡದಂತೆ ನ್ಯಾಯಾಲಯ ಎಚ್ಚರಿಸಿದೆ. ಹೈಕೋರ್ಟ್‌ನ ಏಕಸದಸ್ಯ ಪೀಠ ನೀಡಿರುವ ಆದೇಶದಲ್ಲಿ ಯಾವುದೇ ದೋಷ ಕಂಡುಬಾರದ ಹಿನ್ನಲೆಯಲ್ಲಿ ಅರ್ಜಿಯನ್ನು ವಜಾಗೊಳಿಸಿದೆ.ಮುಡಾ ಪ್ರಕರಣದಲ್ಲಿ ನ್ಯಾಯವು ಮೇಲುಗೈ ಸಾಧಿಸಿದೆ ಮತ್ತು ಜಾರಿ ನಿರ್ದೇಶನಾಲಯದ ಹಸ್ತಕ್ಷೇಪವನ್ನು ಕೊನೆಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ.ಮೈಸೂರಿನ ಕೆಸರೆ ಗ್ರಾಮದಲ್ಲಿ ಸ್ವಾಧೀನಪಡಿಸಿಕೊಂಡ ಪಾರ್ವತಿ ಅವರ ಮೂರು ಎಕರೆ 16 ಗುಂಟೆ ಭೂಮಿಗೆ ಬದಲಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಸಿದ್ದರಾಮಯ್ಯ ಅವರು ತಮ್ಮ ರಾಜಕೀಯ ಪ್ರಭಾವ ಬಳಸಿ ಮೈಸೂರಿನಲ್ಲಿ 14 ನಿವೇಶನಗಳನ್ನು ಪಡೆದ ಆರೋಪವಿದೆ.ಈ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಮೊದಲ ಆರೋಪಿ ಎಂದು ಹೆಸರಿಸಲಾಗಿದ್ದು, ಅವರ ಪತ್ನಿ ಬಿಎಂ ಪಾರ್ವತಿ ಅವರನ್ನು ಎರಡನೇ ಆರೋಪಿಯನ್ನಾಗಿ ಮಾಡಲಾಗಿದೆ.ಜಾರಿ ನಿರ್ದೇಶನಾಲಯವು ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಪಾರ್ವತಿ ಮತ್ತು ಬೈರತಿ ಸುರೇಶ್ ಅವರಿಗೆ ನೋಟಿಸ್‌ಗಳನ್ನು ನೀಡಿತ್ತು. ನಂತರ ಅವುಗಳನ್ನು ಕರ್ನಾಟಕ ಹೈಕೋರ್ಟ್ ರದ್ದುಗೊಳಿಸಿತು. ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದ ಇ.ಡಿ ಹೈಕೋರ್ಟ್‌ನ ತೀರ್ಪನ್ನು ಪ್ರಶ್ನಿಸಿತ್ತು.

# ಸರಕಾರದಿಂದ ಜನಪರ ಆಡಳಿತ

ಪ್ರಕಾಶ ಮಾಶೆಟ್ಟೆ, ಡಿಸಿಸಿ ಬ್ಯಾಂಕ್ ನಿರ್ದೇಶಕ ಅಶೋಕರಾವ ಸೋನಜಿ, ತಾಲೂಕು ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಹಣಮಂತರಾವ ಚವ್ಹಾಣ, ದಲಿತಪರ ಸಂಘಟನೆಗಳ ಹಿರಿಯ ಮುಖಂಡ ವಿಲಾಸ ಮೋರೆ, ಜೈಪಾಲ ಬೋರಾಳೆ ಸೇರಿದಂತೆ ಹಲವರು ಇದ್ದರು.

**ಕಾಂಗ್ರೆಸ್‌ಗೆ ಸೇರ್ಪಡೆ**

ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಬಿಜೆಪಿಯ ಮುಖಂಡ ಶ್ರಾವಣಕುಮಾರ ಗಾಯಕವಾಡ್ ಮತ್ತು ಪುರಸಭೆ ಮಾಜಿ ಅಧ್ಯಕ್ಷ ಚಂದ್ರಕಾಂತ ಪಾಟೀಲ್ ಸೇರಿದಂತೆ ಹಲವರು ಕಾಂಗ್ರೆಸ್ ಪಕ್ಷ ಸೇರಿದರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಕಾಂಗ್ರೆಸ್ ಪಕ್ಷದ ಬಾವುಟ ನೀಡಿ ಪಕ್ಷಕ್ಕೆ ಬರಮಾಡಿಕೊಂಡರು.

ಕಾಂಗ್ರೆಸ್ ಪಕ್ಷ ತನ್ನದೇ ಐತಿಹಾಸಿಕ ಹಿನ್ನೆಲೆ ಹೊಂದಿದೆ. ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟಿದು ಕಾಂಗ್ರೆಸ್ ಇಂತಹ ಪಕ್ಷದ ತತ್ವ ಸಿದ್ಧಾಂತಗಳನ್ನು ಒಪ್ಪಿ ಬರುವವರನ್ನು ಕಾಂಗ್ರೆಸ್ ಪಕ್ಷ ಸದಾ ಸ್ವಾಗತಿಸಲಿದೆ.

**-ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಸಚಿವರು ಬೀದರ್**

## ಶಿವಲಿಂಗೇಶ್ವರ ಶಿವಯೋಗಿಗಳ 101ನೇ ಪುಣ್ಯ ಸ್ಮರಣೋತ್ಸವದ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ : ತಾಲೂಕಿನ ಮುಧೋಳ(ಬಿ) ಗ್ರಾಮದಲ್ಲಿ ಚರಮೂರ್ತಿ ಶಿವಲಿಂಗೇಶ್ವರ ಶಿವಯೋಗಿಗಳ 101ನೇ ಪುಣ್ಯ ಸ್ಮರಣೋತ್ಸವದ ನಿಮಿತ್ತ ಶಿವಲಿಂಗೇಶ್ವರ ಅವರ ಭಾವಚಿತ್ರದ ಭವ್ಯ ಮೆರವಣಿಗೆಣಟಿಜಜಜಿಟಿಜಜ ನಡೆಯಿತ್ತು. ಹೂವುಗಳಿಂದ ಅಲಂಕೃತ ಟೆಂಪೋದಲ್ಲಿ ಚರಮೂರ್ತಿ ಶಿವಲಿಂಗೇಶ್ವರ ಅವರ ಭಾವಚಿತ್ರವನ್ನು ಇಟ್ಟು ಅದ್ದೂರಿ ಯಾಗಿ ಮೆರವಣಿಗೆ ಮಾಡಲಾಯಿತು.ಶ್ರೀ ಮಠದ ಪೀಠಾಧಿಪತಿ ವೈಜಿನಾಥ ಶಿವಲಿಂಗ ಶಿವಾಚಾರ್ಯರು ಮೆರವಣಿಗೆಗೆ ಚಾಲನೆ ನೀಡಿದರು.ಗ್ರಾಮದಲ್ಲಿ ಹಬ್ಬದ ವಾತಾವರಣ ಸೃಷ್ಟಿಯಾಗಿತ್ತು, ಶಿವಲಿಂಗೇಶ್ವರ ಮಠದಿಂದ ಹೊರಟು ವಿಠ್ಠಲ ಮಂದಿರ, ಕಾಶಿ ವಿಶ್ವನಾಥ ಮಂದಿರ, ಬಸವೇಶ್ವರ ವೃತ್ತದ ಮೂಲಕ ಮಹಾದೇವ ಮಂದಿರದಿಂದ ಸಾಗಿ ಶಿವಲಿಂಗೇಶ್ವರ ಮಠಕ್ಕೆ ಬಂದು ತಲುಪಿತು.

# ಜಿಲ್ಲೆಯಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಉದ್ಯಮಿಗಳಿಗೆ ಎಲ್ಲ ರೀತಿಯ ಸಹಾಯ ಸೌಕರ್ಯ:ಸಚಿವ ಈಶ್ವರ ಬಿ.ಖಂಡ್ರೆ




ಮಲ್ಲಮ್ಮನುಡಿವಾರ್ತೆಬೀದರ. ಜು.21: ಬೀದರ ಜಿಲ್ಲೆಯಲ್ಲಿ ಕೈಗಾರಿಕಾ ಸ್ಥಾಪನೆಗೆ ಕೈಗಾರಿಕಾ ಉದ್ಯಮಿಗಳಿಗೆ ಅಗತ್ಯವಿರುವ ಎಲ್ಲ ರೀತಿಯ ಸಹಾಯ ಸೌಕರ್ಯಗಳನ್ನು ಒದಗಿಸಲು ಸರಕಾರವು ಬದ್ಧವಿದೆಯೆಂದು ಅರಣ್ಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ತಿಳಿಸಿದರು.

ಅವರು ನಿನ್ನೆ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ಬೆಂಗಳೂರು ಹಾಗೂ ಬೀದರ್ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಬೀದರ ಜಂಟಿಯಾಗಿ ಆಯೋಜಿಸುತ್ತಿರುವ ವಿಶೇಷ ಕಾರ್ಯಕಾರಿ ಸಮಿತಿ ಸಭೆ ಹಾಗೂ ಬೀದರ್ ಜಿಲ್ಲೆಯ ಕೈಗಾರಿಕಾ ಅಭಿವೃದ್ಧಿ ಮತ್ತು ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಯ ಬಗ್ಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕರ್ನಾಟಕ ವಾಣಿಜ್ಯ ಸಂಸ್ಥೆಯಾಗಲಿ, ಮಾಧ್ಯಮ ಅಥವಾ ಸಣ್ಣ ಕೈಗಾರಿಕಾ ಸಂಸ್ಥೆಗಳು ಕೈಗಾರಿಕೆಗಳ ಸ್ಥಾಪನೆಗೆ ಜಿಲ್ಲಾಡಳಿತವನ್ನು ಸಂಪರ್ಕಿಸಿ ತಮ್ಮ ಅಗತ್ಯತೆಗಳ ಪ್ರಸ್ತಾವನೆಗಳನ್ನು ಸಲ್ಲಿಸಿದಲ್ಲಿ ಎಲ್ಲ ರೀತಿಯ ಮೂಲಭೂತ ಸೌಕರ್ಯ ಒದಗಿಸಲಾಗುವುದೆಂದರು.

ಬೀದರ ಜಿಲ್ಲೆಗೆ ಅತ್ಯುತ್ತಮ ಸಂಪರ್ಕ ರಸ್ತೆಗಳಿವೆ, ಉತ್ತಮ ನೀರು, ಹವಮಾನ, ವಿದ್ಯುತ್ ಅಲ್ಲದೇ ವಿಮಾನಯಾನ ಸೌಕರ್ಯ ಇದೆ.ಬೆಂಗಳೂರಿನಷ್ಟೇ ಉತ್ತಮ ರಸ್ತೆಗಳಿವೆ. ಜಿಲ್ಲೆಯಲ್ಲಿ ವಿದ್ಯುತ್ ಕೊರತೆ ಇಲ್ಲ, ಜಿಲ್ಲೆಗೆ ಅಗತ್ಯ ಇರುವಷ್ಟು ವಿದ್ಯುತ್ ಉತ್ಪಾದನೆಯಾಗುತ್ತಿದೆ. ಹೆಚ್ಚಿನ ಸೌರವಿದ್ಯುತ್, 375 ಮೆಗಾವ್ಯಾಟ್ ಉತ್ಪಾದಿಸಲಾಗುತ್ತಿದೆ. 220ಕೆವಿ, ಎರಡು 400 ಕೆವಿ ಹಾಗೂ 700 ಕೆವಿ ಸ್ಟೇಶನ್‌ಗಳು ಸ್ಥಾಪನೆಯಾಗುತ್ತಿವೆ. ಒಟ್ಟು 5 ಸಾವಿರ ಮೆಗಾವ್ಯಾಟ್ ವಿದ್ಯುತ್ ಎರಡು ವರ್ಷದಲ್ಲಿ ಉತ್ಪಾದಿಸಲಾಗುವುದು. ಒಟ್ಟಾರೆಯಾಗಿ ಕೈಗಾರಿಕೋದ್ಯಮಗಳಿಗೆ ಎಲ್ಲ ರೀತಿಯ ಸೌಲಭ್ಯ ನೀಡುವುದಾಗಿ ಸಚಿವರು ಭರವಸೆ ನೀಡಿದರು.

ಬೆಂಗಳೂರು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ಅಧ್ಯಕ್ಷ ಎಂ.ಜಿ.ಬಾಲಕೃಷ್ಣ ಅವರು ಮಾತನಾಡಿ, ಬೀದರ್ ಜಿಲ್ಲೆ ಕೃಷಿ ಪ್ರಧಾನವಾದ ಸಮೃದ್ಧ ಜಿಲ್ಲೆಯಲ್ಲದೆ ವಿವಿಧ ಬಗೆಯ ಕೈಗಾರಿಕೆಗಳನ್ನು ಆರಂಭಿಸಲು ಸೂಕ್ತವಾದ ಜಿಲ್ಲೆಯಾಗಿದೆ. ಬೀದರ್ ಜಿಲ್ಲೆಯು ಕೃಷಿ ಪ್ರಧಾನವಾಗಿರುವುದರಿಂದ ಹಾಗು ಮಾನವ ಶಕ್ತಿಯು ಸಹ ಹೇರಳವಾಗಿದ್ದು, ಕೃಷಿಗೆ ಪೂರಕವಾಗಿರುವಂತಹ ಕೈಗಾರಿಕೆಗಳನ್ನು ಆರಂಭಿಸುವುದರಿಂದ ಈ ಭಾಗದ ಜನರಿಗೆ ಉದ್ಯೋಗವಕಾಶಗಳು ಸಿಗುವಂತಾಗುತ್ತದೆ. ಜಿಲ್ಲೆಯ ಕೃಷಿಕರು ಬೆಳೆಯುವ ಪ್ರಮುಖ ಬೆಳೆಗಳಲ್ಲಿ ಕಬ್ಬು ತೊಗರಿ (ಇನ್ನಿತರ ದ್ವಿದಳ ಧಾನ್ಯಗಳು), ಸೋಯಾಬಿನ್, ಶೂಂಟಿ ಜಿಂಜಿರ, ಅರಿಷಿಣ ಮುಂತಾದ ಬೆಳೆಗಳನ್ನು ಅಧಿಕವಾಗಿ ಉತ್ಪಾದಿಸುತ್ತಾರೆ. ಬೀದರ್ ಜಿಲ್ಲೆಯು ತೋಟಗಾರಿಕಾ ಕೃಷಿಗೆ ಹವಮಾನ ಉಪಯುಕ್ತವಾಗಿದೆ. ಏಕೆಂದರೆ ಫಲವತ್ತಾದ ಕಪ್ಪು ಮಣ್ಣು ಲಭ್ಯವಿದೆ ಮತ್ತು ಕೆಂಪು ಮಣ್ಣು ಇರುವುದರಿಂದ ಹಲವಾರು ತೋಟದ ಬೆಳೆಗಳಾದ ಹೂವು ವಿವಿಧ ಪ್ರಕಾರದ ಹಣ್ಣುಗಳಾದ ಮಾವು. ಬಾಳೆ, ದ್ರಾಕ್ಷಿ, ಮೊಸಂಬಿ, ಸೀತಾಫಲ, ನಿಂಬೆ ಹಣ್ಣು ಡ್ಯಾಗನ್ ಹಣ್ಣು, ಉತ್ತಮ ದರ್ಜೆಯ ಬಾರೆ ಹಣ್ಣು ಮತ್ತು ಸೇಬಿನಂತಹ ಇನ್ನಿತರ ಹಣ್ಣುಗಳನ್ನು ಬೆಳೆಯಬಹುದು. ಇವುಗಳಿಗೆ ಇಲ್ಲಿ ಒಳ್ಳೆ ಮಾರುಕಟ್ಟೆ ಮತ್ತು ಶೀತಲಗಾರ ಅವಶ್ಯಕತೆ ಇರುತ್ತದೆ. ಹೀಗಾಗಿ ಈ ಬೆಳೆಗಳಿಗಾಗಿ ಆಧುನಿಕತೆಯ ಸ್ಪರ್ಶವನ್ನು ನೀಡಿದಾಗ ಅಂ-ದರೆ ಇವುಗಳಿಗೆ ಸಂಬಂಧಿಸಿದ ವಿವಿಧ ಕೈಗಾರಿಕೆಗಳು ಸ್ಥಾಪಿಸಿ ಉತ್ತೇಜನವನ್ನು ನೀಡಿದಾಗ ಈ ಭಾಗವು ಸಹ ಕೈಗಾರಿಕೆ ವಲಯಗಳಲ್ಲಿ ಉತ್ತುಂಗಕ್ಕೆ ಬರಲು ಸಾಧ್ಯವಾಗುತ್ತದೆ ಎಂದರು.ಈ ಕಾರ್ಯಕ್ರಮದಲ್ಲಿ ಬೀದರ್ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಬಿ ಜಿ ಶೆಟ್ಟರ್, ಎಫ್ ಕೆ ಸಿ ಸಿ ಐ ನ ನಿರ್ದೇಶಕರು ಹಾಗೂ ಬಿಸಿಸಿಐನ ಗೌರವ ಕಾರ್ಯದರ್ಶಿ ಡಾ.ವೀರೇಂದ್ರ ಶಾಸ್ತ್ರಿ,ಹಿರಿಯ ಉಪಧ್ಯಾಕ್ಷರಾದ ಉಮಾರೆಡ್ಡಿ,ಟಿ.ಸಾಯಿ ರಾಂ ಪ್ರಸಾದ್, ಎಫ್ ಕೆ ಸಿ ಸಿ ಐ ನ ಜಿಲ್ಲಾ ಸಮನ್ವಯ ಸಮಿತಿಯ ಛೇರ್ಮನ್ ರಾದ ಅಂಡಾರು ದೇವಿ ಪ್ರಸಾದ್ ಶೆಟ್ಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೀದರ ಜಿಲ್ಲೆ ಭಿಕ್ಷಾಟನೆ ಮುಕ್ತ ಜಿಲ್ಲೆಯನ್ನಾಗಿಸಲು ಸಾರ್ವಜನಿಕರು ಸಹಕರಿಸಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.21 : ಜಿಲ್ಲೆಯ ಸಾರ್ವಜನಿಕರು ಭಿಕ್ಷೆ ಬೇಡುತ್ತಿರುವವರು ಕಂಡು ಬಂದರೆ ಅವರಿಗೆ ಭಿಕ್ಷೆ ನೀಡಿ ಪ್ರೋತ್ಸಾಹಿಸದೇ ಅದನ್ನು ಬಹಿಷ್ಕರಿಸಿ, ಬೀದರ ಜಿಲ್ಲೆಯನ್ನು "ಭಿಕ್ಷಾಟನೆ ಮುಕ್ತ" ಜಿಲ್ಲೆಯನ್ನಾಗಿಸಲು ಸಾರ್ವಜನಿಕರು ಸಹಕರಿಸಬೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಭಿಕ್ಷೆ ಬೇಡುತ್ತಿರುವವರು ಕಂಡು ಬಂದರೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಅಥವಾ ಟೋಲ್ ಫ್ರೀ ಸಂಖ್ಯೆ 10581 ಮತ್ತು ಸಹಾಯವಾಣಿ ಸಂಖ್ಯೆ:9482300400, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದಡಿ ನಡೆಯುವ ಮಕ್ಕಳ ಸಹಾಯವಾಣಿ 1098 ಹಾಗೂ ಪೊಲೀಸ ಸಹಾಯವಾಣಿ 112ಗೆ ಅಥವಾ ಸಮೀಪದ ಪೊಲೀಸ ಠಾಣೆಗೆ ಕರೆ ಮಾಡಿ ಮಾಹಿತಿ ನೀಡಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಭಿಕ್ಷಾಟನೆಯನ್ನು ತಡೆಗಟ್ಟಲು ಸರ್ಕಾರವು ಕರ್ನಾಟಕ ಭಿಕ್ಷಾಟನೆ ನಿಷೇಧ ಕಾಯ್ದೆ 1975ರ ಪ್ರಕಾರ ಮೂರು ತಿಂಗಳು ಕಠಿಣ ಕಾರಗೃಹವಾಸ ಹಾಗೂ ದಂಡವನ್ನು ವಿಧಿಸಲಾಗುವುದು. ಅದೇ ರೀತಿ ಮಕ್ಕಳನ್ನು ಭಿಕ್ಷಾಟನೆಗೆ ಬಳಸಿದ್ದಲ್ಲಿ ಬಾಲನ್ಯಾಯ (ಮಕ್ಕಳ ರಕ್ಷಣೆ ಮತ್ತು ಪೋಷಣೆ) ಕಾಯ್ದೆ 2015 ಮತ್ತು ತಿದ್ದುಪಡಿ ಕಾಯ್ದೆ 2021ರ 76ರ ಪ್ರಕಾರ 05 ವರ್ಷ ಕಾರಾಗೃಹ ವಾಸ ಮತ್ತು ರೂ. 1.00 ಲಕ್ಷದ ವರೆಗೆ ದಂಡವನ್ನು ವಿಧಿಸಲಾಗುವುದೆಂದರು.

ಬೀದರ ಜಿಲ್ಲೆಯಲ್ಲಿ ವಿವಿಧ ತಾಲ್ಲೂಕು ಮತ್ತು ನಗರ ಪ್ರದೇಶಗಳ ವಿವಿಧ ಪ್ರಮುಖ ವೃತ್ತಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣ ಮತ್ತು ಜನ ಸಂದಣಿಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಅಧಿಕ ಸಂಖ್ಯೆಯಲ್ಲಿ ಭಿಕ್ಷೆ ಬೇಡುತ್ತ, ಸಾರ್ವಜನಿಕರಿಗೆ ಉಪದ್ರವ ನೀಡುತ್ತಿರುವುದು ಕಂಡು ಬಂದಿರುತ್ತದೆ. ಅದರಲ್ಲಿ ವಿಶೇಷವಾಗಿ ಮಹಿಳೆಯರು ಹಣ ಸಂಪಾದನೆಗಾಗಿ ಶಿಶುಗಳನ್ನು ತಮ್ಮ ಮಡಿಲಲ್ಲಿ ಹಾಕಿಕೊಂಡು ಭಿಕ್ಷೆ ಬೇಡುವುದು ನಾಗರೀಕ ಸಮಾಜಕ್ಕೆ ತಲೆತಗ್ಗಿಸುವಂತಾಗಿದೆ ಹಾಗೂ ಅಮಾನವೀಯ ವಿಷಯವಾಗಿದೆ.

ಭಿಕ್ಷಾಟನೆ ಒಂದು ಸಾಮಾಜಿಕ ಪಿಡುಗು. ಇದು ಬಡತನ, ನಿರುದ್ಯೋಗ, ಸಾಮಾಜಿಕ ಅಸಮಾನತೆಯಿಂದ ಉಂಟಾಗಿರುತ್ತದೆ. ಭಿಕ್ಷಾಟನೆಯು ವ್ಯಕ್ತಿಗಳ ಆತ್ಮ ಗೌರವವನ್ನು ಕುಗ್ಗಿಸುತ್ತದೆ. ಮತ್ತು ಸಮಾಜದ ಮೇಲೆ ನಕಾರಾತ್ಮಕ ಪರಿಣಾಮಗಳನ್ನು ಬೀರುತ್ತದೆ.

ಭಿಕ್ಷಾಟನೆಯನ್ನು ತಡೆಗಟ್ಟಲು ಮತ್ತು ನಿರ್ಮೂಲನೆ ಮಾಡಲು ಸಾಮೂಹಿಕ ಪ್ರಯತ್ನಗಳು ಮತ್ತು ಪರಿಹಾರ ಕ್ರಮಗಳು ಅಗತ್ಯವಾಗಿವೆ. ಹಾಗಾಗಿ ಜಿಲ್ಲೆಯಲ್ಲಿ ಭಿಕ್ಷಾಟನೆಯನ್ನು ತಡೆಗಟ್ಟಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಈಗಾಗಲೇ ಪತ್ರ ಬರೆದು ಭಿಕ್ಷಾಟನೆಯನ್ನು ನಿರ್ಮೂಲನೆ ಮಾಡಲು ಕಾರ್ಯಪ್ರವೃತ್ತರಾಗುವಂತೆ ಸೂಚಿಸಲಾಗಿದೆ.

ಅದೇರೀತಿ ಸಾರ್ವಜನಿಕರು ಸಹ ಭಿಕ್ಷಾಟನೆಯನ್ನು ಪ್ರೋತ್ಸಾಹಿಸದೇ ಇದನ್ನು ನಿರ್ಮೂಲನೆಯನ್ನು ಮಾಡಲು ಭಿಕ್ಷಾಟನೆಯನ್ನು ಬಹಿಷ್ಕರಿಸಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಖೂಬಾ ಕುತಂತ್ರದಿಂದ ಆಯೋಗಕ್ಕೆ ದೂರು: ಶಾಸಕ ಪ್ರಭು ಚವಾಣ್ ಗಂಭೀರ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು. 21 : 'ನನ್ನನ್ನು ಮುಗಿಸಬೇಕೆಂಬ ಒಂದೇ ಉದ್ದೇಶದಿಂದ ಕೇಂದ್ರದ ಮಾಜಿ ಸಚಿವ, ಬಿಜೆಪಿ ಮುಖಂಡ ಭಗವಂತ ಖೂಬಾ ಅವರು ನನ್ನ ವಿರುದ್ಧ ಹುನ್ನಾರ ನಡೆಸುತ್ತಿದ್ದಾರೆ. ಅವರ ಕುತಂತ್ರದಿಂದಲೇ ನನ್ನ ಹಾಗೂ ನಮ್ಮ ಕುಟುಂಬ ಸದಸ್ಯರ ವಿರುದ್ಧ ಮಹಿಳಾ ಆಯೋಗ-ಕ್ಕೆ ದೂರು ಕೊಡಲಾಗಿದೆ' ಎಂದು ಔರಾದ್ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಪ್ರಭು ಚವಾಣ್ ಗಂಭೀರ ಆರೋಪ ಮಾಡಿದರು.

'ಭಗವಂತ ಖೂಬಾ ಸುಳ್ಳಿನ ಸರದಾರ. ಅವರ ಕೆಲಸವೇ ಸುಳ್ಳು ಹೇಳುವುದು. ಚುನಾವಣೆಯಲ್ಲಿ ನನ್ನನ್ನು ಎರಡು ಸಲ ಸೋಲಿಸಲು ವಿಫಲ ಯತ್ನ ನಡೆಸಿದ್ದಾರೆ. ನನ್ನ ಹೆಸರು ಕೆಡಿಸಲು ನಿರಂತರವಾಗಿ ಕೆಲಸ ಮಾಡುತ್ತಿದ್ದಾರೆ. ಆರ್.ಟಿ.ಇ. ಹಾಕಿಸುವುದು, ದೂರು ಕೊಡಿಸುವುದು, ಸರ್ಕಾರಿ ಕಾಮಗಾರಿ ಮಾಡುತ್ತಿರುವವರಿಗೆ ಕಿರಿಕಿರಿ ಕೊಡುವ ಕೆಲಸ ಮಾಡುತ್ತಿದ್ದಾರೆ. ಔರಾದ್‌ನಲ್ಲಿ ಅಭಿವೃದ್ಧಿ ಕೆಲಸಗಳಿಗೆ ಹಿನ್ನಡೆ ಉಂಟಾಗುತ್ತಿದೆ. ಖೂಬಾ ಅವರು ನೇರವಾಗಿ ಏನೂ ಮಾಡಲ್ಲ. ಅವರ 'ಟೀಮ್'ನಿಂದ ಮಾಡಿಸುತ್ತಾರೆ. ಇವರು ಟೀಮ್ ಲೀಡರ್, ಕ್ಯಾಪ್ಟನ್' ಎಂದು ನಗರದಲ್ಲಿ ಭಾನುವಾರ ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದರು.

'ಖೂಬಾ ಅವರು ನನ್ನ ವಿರುದ್ಧ ನಡೆಸುತ್ತಿರುವ ಸಂಚಿನ ಕುರಿತು ಬಿಜೆಪಿ ಪಕ್ಷದ ವರಿಷ್ಠರ ಗಮನಕ್ಕೆ ತಂದಿರುವೆ. ಈ ಕಾರಣದಿಂದ ಬಹಿರಂಗವಾಗಿ ಅವರ ಹೆಸರು ಹೇಳಿರಲಿಲ್ಲ. ಆದರೆ, ಅವರು ಇಂತಹ ನೀಚ ಕೆಲಸ ಮಾಡುತ್ತಾರೆ ಎಂದು ಗೊತ್ತಿರಲಿಲ್ಲ. ಅವರ ಕಿರಿಕಿರಿಗೆ ಮಾನಸಿಕವಾಗಿ ಬಹಳ ನೊಂದಿದ್ದೇನೆ. ಈ ಎಲ್ಲ ಕೆಲಸಗಳು ಪಕ್ಷದವರಿಗೆ ಹೇಗೆ ಗೊತ್ತಾಗುತ್ತದೆ. ಅವರಿಂದ ಬೇಸತ್ತು ಈಗ ಅವರ ಹೆಸರು ಹೇಳುತ್ತಿದ್ದೇನೆ' ಎಂದು ಆಕ್ರೋಶದಿಂದ ಹೇಳಿದರು.

'ಮಹಾರಾಷ್ಟ್ರ ಉದಗೀರನ ನಾಮದೇವ್ ರಾಠೋಡ್ ಅವರ ಮಗಳೊಂದಿಗೆ ನನ್ನ ಮಗ ಪ್ರತೀಕ್ ಜೊತೆ 2023ರಲ್ಲಿ ನಿಶ್ಚಿತಾರ್ಥ ನಿಶ್ಚಯವಾಗಿತ್ತು. ಹುಡುಗ-ಹುಡುಗಿ ಪರಸ್ಪರ ಒಪ್ಪಿದ್ದರಿಂದ ಮದುವೆಗೆ ನಿಶ್ಚಯಿಸಲಾಗಿತ್ತು. ಆದ-ರೆ, ಯುವತಿ ಬೇರೊಬ್ಬ ಯುವಕನೊಂದಿಗೆ ನಿರಂತರವಾಗಿ ಚಾಟ್ ಮಾಡುತ್ತಿದ್ದರು. ಈ ವಿಷಯ ಗೊತ್ತಾದ ನಂತರ ನಾಮದೇವ್ ರಾಠೋಡ್ ಅವರ ಕುಟುಂಬದವರನ್ನು ಕರೆಸಿ ವಿಷಯ ತಿಳಿಸಲಾಗಿದೆ. ಆನಂತರ ಬಂಜಾರ ಸಮಾಜದ ಪಂಚರು, ಸಮಾಜದ ಹಿರಿಯರ ಸಮ್ಮುಖದಲ್ಲಿ ಮದುವೆ ಮಾಡದಿರಲು 2024ರ ನವೆಂಬರ್‌ನಲ್ಲಿ ನಿರ್ಧರಿಸಲಾಯಿತು' ಎಂದು ವಿವರಿಸಿದರು. ಯುವತಿಯ ಚಾಟ್ ಸಂಭಾಷಣೆಯ ವಿವರ ತೋರಿಸಿದರು.

ಎರಡೂ ಕುಟುಂಬದವರ ಒಪ್ಪಿಗೆಯಿಂದ ಮದುವೆ ಕೈಬಿಡಲು ನಿರ್ಧರಿಸಲಾಗಿದೆ. ಆದರೆ, ಆ ಯುವತಿಗೆ ಏನು ಆಮಿಷವೊಡ್ಡಿದ್ದಾರೆ ಗೊತ್ತಿಲ್ಲ. ಅವರು ನನ್ನ ಮಗ, ನನ್ನ ಹಾಗೂ ಕುಟುಂಬದವರ ವಿರುದ್ಧ ಮಹಿಳಾ ಆಯೋಗಕ್ಕೆ ದೂರು ಕೊಟ್ಟಿದ್ದಾರೆ ಎಂದರು.

'ನನ್ನ ಮನೆಗೆ ರಾತ್ರಿ ಸಮಯದಲ್ಲಿ ಬಂದು ಜಗಳ ಮಾಡಿಸಲು ಕೂಡ 'ಕ್ಯಾಪ್ಟನ್' ಕಾರಣ. ಮದುವೆ ಮುಗಿದು ಹೋದ ವಿಷಯ. ಅವರನ್ನು ಎತ್ತಿ ಕಟ್ಟುವ ಕೆಲಸ ಮಾಡುತ್ತಿರುವುದು ಸರಿಯಲ್ಲ. ನನ್ನ ಮಗನೊಂದಿಗೆ ಮದುವೆಗೆ ನಿಶ್ಚಯ ಮಾಡಿದ್ದ ಯುವತಿ ನನ್ನ ಮಗಳಂತೆ. ಆದರೆ, ಬೇರೆಯವಕನೊಂದಿಗೆ ಚಾಟ್ ಮಾಡಿದ ವಿಷಯ ಗೊತ್ತಾದ ನಂತರವೂ ಮದುವೆ ಮಾಡಲು ಆಗುತ್ತದೆಯೇ? ಹೀಗಾಗಿ ಮದುವೆ ಕೈಬಿಡಲಾಯಿತು. ಆದರೆ, ಅವರ ಮೂಲಕ ಸತತವಾಗಿ ನನ್ನ ವಿರುದ್ಧ ಚಿತಾವಣೆ ಮಾಡಲಾಗುತ್ತಿದೆ. ಈ ರೀತಿ ಏಕೆ ಮಾಡುತ್ತಿದ್ದೀರಿ ಎಂದು ಯುವತಿಯನ್ನು ಕೇಳಿದರೆ, 'ನಿಮ್ಮ ಬೀದರ್ ದುಶ್ಮನ್ ಈ ರೀತಿ ಮಾಡಿಸುತ್ತಿದ್ದಾರೆ ಎಂದು ಹೇಳಿದ ವಿಡಿಯೊ ಕಾಲ್ ಕೇಳಿಸಿದರು. ನಾನೇ ಮೊದಲು ದೂರು ಕೊಡಬೇಕಿತ್ತು. ಮಹಿಳೆ ಎಂಬ ಕಾರಣದಿಂದ ಗೌರವಕ್ಕೆ ಧಕ್ಕೆ ಬರಬಾರದು ಎಂದು ಸುಮ್ಮನಾಗಿದ್ದೆ. ಆದರೆ, ಬೇರೆಯವರ ಚಿತಾವಣೆಗೆ ಈ ರೀತಿ ಮಾಡಿರುವುದು ಸರಿಯಲ್ಲ. ವಿರೋಧಿಗಳಿಗೆ ನನ್ನ ಮಗ ಪ್ರತೀಕ್ ಮುಖ್ಯ ಅಲ್ಲ, ಆತನ ಹೆಸರಿನ ಮೂಲಕ ನನ್ನ ಹಣಿಯುವ ಕುತಂತ್ರ ಮಾಡುತ್ತಿದ್ದಾರೆ. ನಾನೇ ಅವರ ಮುಖ್ಯ ಟಾರ್ಗೆಟ್. ನನ್ನ ಮಗನಾಗಲಿ, ನಾನಾಗಲಿ ಏನೂ ತಪ್ಪು ಮಾಡಿಲ್ಲ. ಒಂದುವೇಳೆ ತಪ್ಪು ಮಾಡಿದ್ದಾನೆ ಎಂಬ ಅನುಮಾನವಿದ್ದರೆ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಿ' ಎಂದು ಸವಾಲು ಹಾಕಿದರು.

ಮುಖಂಡರಾದ ಗುಂಡಪ್ಪ ವಕೀಲ, ಶಿವಾಜಿರಾವ್ ಪಾಟೀಲ್, ಧೋಂಡಿಬಾ, ಅರಿಹಂತ ಸಾವಳೆ, ಶಂಕರ್ ರಾಠೋಡ್, ಸುರೇಶ್ ಭೋಸ್ಲೆ, ಶಿವರಾಜ ಅಲ್ಮಾಜೆ, ರಂಗರಾವ್ ಜಾಧವ್, ಕಿರಣ ಪಾಟೀಲ್ ಇದ್ದರು.

ಪ್ರಭು ಚವಾಣ್ ಶಾಸಕಮಹಿಳಾ ಆಯೋಗ ಕೇಳುವ ನೋಟಿಸ್ ಎಲ್ಲ ಪ್ರಶ್ನೆಗಳಿಗೆ ಸಾಕ್ಷ್ಯ ಸಮೇತ ಉತ್ತರ ಕೊಡುವೆ'ರಾಜಕೀಯ ಎನ್ನುವುದು ಒಂದು ಹಂತದ ವರೆಗೆ ಇರಬೇಕು. ಆದರೆ ಮನೆ ತನಕ ಬೆಡ್ ರೂಮ್ ವರೆಗೆ ರಾಜಕೀಯ ಬರಬಾರದು' ಎಂದು ಪ್ರಭು ಚವಾಣ್ ಹೇಳಿದರು.'2014-15ರಿಂದ ಒಂದಿಲ್ಲೊಂದು ಕಾರಣದಿಂದ ನನ್ನ ಎಲ್ಲ ಕೆಲಸಗಳಿಗೆ ಅಡ್ಡಿಪಡಿಸುವ ಕೆಲಸ ಮಾಡಲಾಗುತ್ತಿದೆ. ಇದ-ರಿಂದ ಬಹಳ ನೊಂದಿದ್ದೇನೆ. ನಾನು ಎಂದೂ ಶಾಸಕನಂತೆ ನಡೆದುಕೊಂಡಿಲ್ಲ ಜನಸೇವಕನಾಗಿ ಜನರ ನಡುವೆ ಇದ್ದೇನೆ' ಎಂದರು. ನಿಮ್ಮ ಹಾಗೂ ಭಗವಂತ ಖೂಬಾ ನಡುವಿನ ದ್ವೇಷಕ್ಕೆ ಕಾರಣವೇನು ಎಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಇದನ್ನು ಖೂಬಾ ಅವರೇ ಹೇಳಬೇಕು ಎಂದು ತಿಳಿಸಿದರು.

# ಬಿಎಸ್‌ಎಸ್‌ಕೆ ಕಾರ್ಖಾನೆ ಲೀಸ್ ಕೊಡಲು ವಿಳಂಬಕ್ಕೆ ಮಲ್ಲಿಕಾರ್ಜುನ ಪಾಟೀಲ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ ಸಹಕಾರ ಸಕ್ಕರೆ ಕಾರ್ಖಾನೆಪುನರ್ ಆರಂಭಿಸುವಲ್ಲಿ ಜಿಲ್ಲೆಯ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಆಸಕ್ತಿ ವಹಿಸುತ್ತಿಲ್ಲ ಎಂದು ಬಿಎಸ್‌ಎಸ್‌ಕೆ ನಿರ್ದೇಶಕ ಮಲ್ಲಿಕಾರ್ಜುನ ಪಾಟೀಲ ಬೆಳಕೇರಾ ಗಂಭೀರವಾದ ಆರೋಪ ಮಾಡಿದರು.

ಪಟ್ಟಣದಲ್ಲಿ ಭಾನುವಾರ ಪತ್ರಿಕಾಗೋಷ್ಠಿಉದ್ದೇಶಿಸಿಮಾತನಾಡಿದ ಅವರು,ಹಳ್ಳಿಖೇಡ ಬಿ ಪಟ್ಟಣದ ಹೊರವಲಯದಲ್ಲಿರುವ ಬೀದರ ಸಹಕಾರ ಸಕ್ಕರೆ ಕಾರ್ಖಾನೆ ಜಿಲ್ಲೆಯ ರೈತರ ಜೀವನಾಡಿಯಾಗಿದೆ.ಈ ಕಾರ್ಖಾನೆ ಈಶ್ವರ ಖಂಡ್ರೆ ಅವರಿಗೆ ರಾಜಕೀಯ ಜೀವ ಕೊಟ್ಟಿದೆ. ಆದರೆ ಖಂಡ್ರೆ ಅವರು ಕಾರ್ಖಾನೆ ಆರಂಭಿಸುವ ವಿಷಯದಲ್ಲಿ ಹಿಂದೇಟು ಹಾಕುತ್ತಿರುವುದು ಹಲವಾರು ಅನುಮಾನಕ್ಕೆ ಎಡೆ ಮಾಡುಕೊಡುತ್ತಿದೆ.

ಕಾರ್ಖಾನೆ ಲಿಸ್ ಪಡೆಯಲು ಉದ್ಯಮಿಗಳು ಎಲ್ಲ ನಿಯಮಗಳನ್ನು ಒಪ್ಪಿಕೊಂಡು ಸಿದ್ದರಾಗಿದ್ದಾರೆ. ಕಾರ್ಖಾನೆ ಆರಂಭಿಸುವ ವಿಷಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಭೇಟಿ ನೀಡಲು ಸಮಯ ತೆಗೆದುಕೊಳ್ಳುವುದಾಗಿ ಹೇಳಿ ಸುಮಾರು ಇಪ್ಪತ್ತು ದಿನಗಳು ಕಳೆದರೂ ಕೂಡ ಇನ್ನೂ ಭೇಟಿ ನೀಡುವ ಬಗ್ಗೆ ಯಾವುದೇ ಮಾತನಾಡುತ್ತಿಲ್ಲ.ಇದು ಬಹಳ ನೋವಿನ ಸಂಗತಿಯಾಗಿದೆ. ರೈತರಿಗೆ ಮಹಾ ಮೋಸ ಮಾಡಿದಂತಾಗುತ್ತದೆ ಎಂದು ಸಚಿವ ಈಶ್ವರ ಖಂಡ್ರೆ ವಿರುದ್ಧ ಕಿಡಿಕಾರಿದರು.

ಈ ಸಂದರ್ಭದಲ್ಲಿ ಬಿಎಸ್‌ಎಸ್‌ಕೆ ಉಪಾಧ್ಯಕ್ಷ ವಿಶ್ವಾನಾಥ ಪಾಟೀಲ ಮಾತನಾಡಿ,ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಕಾರ್ಖಾನೆ ಆರಂಭಿಸುವಲ್ಲಿ ಪ್ರಮುಖ ಜವಾಬ್ದಾರಿ ವಹಿಸಬೇಕು.ಇಲ್ಲವಾದಲ್ಲಿ ಅವರ ವಿರುದ್ಧ ಪ್ರತಿಭಟನೆ ಮಾಡುವ ಅನಿವಾರ್ಯತೆ ಬರುತ್ತದೆ ಎಂದು ತಿಳಿಸಿದರು.

ಎರಡು ಸಲ ಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸಿ ಟೆಂಡರ್ ಕರೆದರೂ ಸಹ ಯಾವ ಬೀಡುದಾರರು ಟೆಂಡರ್ ಸಲ್ಲಿಸಿರದ ಪ್ರಯುಕ್ತ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಬೆಂಗಳೂರು ಇವರು ಬಿಡುದಾರರ ಕೋರಿಕೆಯಂತೆ ಸರ್ಕಾರವು ವಿಧಿಸಿರುವ ಕೆಲವು ಷರತ್ತು ಮತ್ತು ನಿರ್ಬಂಧನೆಗಳನ್ನು ಸಡಿಲಿಸುವಂತೆ ಮತ್ತು ಬ್ಯಾಂಕುಗಳ ಸಾಲಗಳ ಮೇಲಿನ ಬಡ್ಡಿನ್ನು ಮನ್ನಾ ಮಾಡುವಂತೆ ಸರ್ಕಾರ–ಕ್ಕೆ ದಿನಾಂಕ 16–3–2003 ಮತ್ತು 10–09–2024ರಂದು ಪತ್ರಗಳು ಬರೆದು ಶಿಫಾರಸ್ಸು ಮಾಡಿದ್ದಾರೆ. ಸದರಿ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. ಕಾರ್ಖಾನೆಯೂ 173.35 ಎಕರೆ ಜಮೀನು ಹೊಂದಿದೆ. ಬೀದರ್ ಡಿಸಿಸಿ ಬ್ಯಾಂಕಿನವರಿಗೆ ಸುಮಾರು 7–8 ಸಲ ಪತ್ರಗಳನ್ನು ಬರೆದು ಸಾಲಗಳ ಮೇಲಿನ ಬಡ್ಡಿ ಮನ್ನಾ ಮಾಡುವಂತೆ ಕೋರಿದ್ದು ಲೀಜ್‌ನಿಂದ ಬರುವ ಹಣದಿಂದ ಅವರ ಸಾಲದ ಮೊತ್ತವನ್ನು ಮರುಪಾವತಿಸಲಾಗುವುದೆಂದು ವಿನಂತಿಸಿಕೊಂಡಿದ್ದೇವೆ. ಆದರೂ ಸಹಿತ ಅವರು ನಮ್ಮ ದಿನಾಂಕ 25–06–2025 ರಂದು ಬೆಂಗಳೂರಿನ ವಿಧಾನಸೌಧದಲ್ಲಿ ಸಕ್ಕರೆ ಸಚಿವರ ಅಧ್ಯಕ್ಷತೆಯಲ್ಲಿ ಅರಣ್ಯ ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವರು, ಹಾಲಿ ಸಚಿವರು, ಸಹಕಾರ ಸಚಿವರು ಸಕ್ಕರೆ ನಿರ್ದೇಶಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಕಾರ್ಯದರ್ಶಿಗಳು, ಬೀದರ್ ಜಿಲ್ಲಾಧಿಕಾರಿಗಳು,ಬೀದರ್ ಜಿಲ್ಲೆಯ ಎಲ್ಲಾ ಶಾಸಕರುಗಳು, ಮಾಜಿ ಮಂತ್ರಿಗಳಾದ ರಾಜಶೇಖರ ಪಾಟೀಲ್,ಕಾರ್ಖಾನೆ ಅಧ್ಯಕ್ಷರು, ಡಿಸಿಸಿ ಬ್ಯಾಂಕ್ ನ ಅಧ್ಯಕ್ಷರು, ಉಪಸ್ಥಿತಿಯಲ್ಲಿ ಜರುಗಿರುವ ಸಭೆಯಲ್ಲಿ ಎಲ್ಲಾ ವಿಷಯಗಳು ಚರ್ಚೆಯಾಗಿ ಎನ್ ಸಿ ಡಿ ಸಿ ಇಂದ ಸಾಲ ಪಡೆದು ಡಿಸಿಸಿ ಬ್ಯಾಂಕ್ ಮತ್ತು ಅಪೇಕ್ಸ್ ಬ್ಯಾಂಕಿನ ಸಾಲಗಳನ್ನು ಓ ಟಿ ಎಸ್ ಯೋಜನೆಯಲ್ಲಿ ಪಾವತಿಸಲು ಸರ್ಕಾರದ ಖಾತ್ರಿ ನೀಡುವಂತೆ ಮುಖ್ಯಮಂತ್ರಿಗಳಿಗೆ ಭೇಟಿಯಾಗಿ ಕೋರಲು ಜಿಲ್ಲಾ ಉಸ್ತುವಾರಿ ಸಚಿವರು ಎರಡು ಮೂರು ದಿನಗಳಲ್ಲಿ ನಾನೇ ಸಮಯ ತೆಗೆದುಕೊಳ್ಳುತ್ತೇನೆ ಎಂದು ತಿಳಿಸಿದ್ದಾರೆ. ಆದರೆ ಸುಮಾರು 20 ದಿನಗಳಾದರೂ ಸಹ ಸಚಿವರು ಸಮಯ ನಿಗದಿಪಡಿಸಿರುವುದಿಲ್ಲ. ನಾವು ಕೇಳಿದಾಗಲೆಲ್ಲ ಎರಡು ಮೂರು ದಿನಗಳಲ್ಲಿ ಸಮಯ ತೆಗೆದುಕೊಳ್ಳುತ್ತೇನೆ ಎಂದು ಪತ್ರಿಕಾ ಗೋಷ್ಠಿಯಲ್ಲಿ ಮಲ್ಲಿಕಾರ್ಜುನ ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀನಿವಾಸ ಪೋತ್ತರ,ಬಕ್ಕಪ್ಪ ಬಸರೆಡ್ಡಿ,ಅಪ್ಪಣ್ಣ ಡಾಕುಳಗಿ,ರಾಜಪ್ಪ ಭಾರತಣ್ಣ,ಪ್ರಕಾಶ ತಿಬ್ಬಶೆಟ್ಟಿ ಇದ್ದರು.

" ಬೀದರ ಸಹಕಾರ ಸಕ್ಕರೆ ಕಾರ್ಖಾನೆ ನಮ್ಮ ತಾಯಿ ಇದ್ದಂತೆ"



ಇತರೆ ಕಾರ್ಖಾನೆಗಳಿಂದಲೇ ಡಿಸಿಸಿ ಬ್ಯಾಂಕ್ ನಡೆಯುತ್ತಿದೆ. ಬಿಎಸ್‌ಎಸ್‌ಕೆ ಕಾರ್ಖಾನೆ ಶೀಘ್ರದಲ್ಲೆ ಲೀಸ್ ಕೊಟ್ಟು ಬರುವ ಹಂಗಾಮಿನಲ್ಲಿ ಆರಂಭಿಸಲು ಆಗ್ರಹಿಸಿದರು.

–ಮಲ್ಲಿಕಾರ್ಜುನ ಪಾಟೀಲ ಚಿಟಗುಪ್ಪ
ಬಿಎಸ್‌ಎಸ್‌ಕೆ ನಿರ್ದೇಶಕರು

# ಬೀದರ್ ದಕ್ಷಿಣ ಕಾಂಗ್ರೆಸ್ ಪಕ್ಷದ ಸಂಘಟನಾ ಕಾರ್ಯದರ್ಶಿಯಾಗಿ ತುರಾಬ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಬೀದರ್ ದಕ್ಷಿಣ ಕ್ಷೇತ್ರದ ಮಾಜಿ ಶಾಸಕ ಅಶೋಕ ಖೇಣಿ ಅವರ ಆದೇಶದಂತೆ ಬೀದರ ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಲ್ಪಸಂಖ್ಯಾತರ ವಿಭಾಗದ ಸಂಘಟನಾ ಕಾರ್ಯದರ್ಶಿಯಾಗಿ ತುರಾಬ ಖಾನ್ ನಿರ್ಣಾ ಹಾಗೂ ದಕ್ಷಿಣ ಕ್ಷೇತ್ರದ ಕಾರ್ಮಿಕ ವಿಭಾಗದ ಸಂಘಟನಾ ಕಾರ್ಯದರ್ಶಿಯಾಗಿ ಕಲ್ಲಪ್ಪಾ ರೇವನಿಕ್ ನಿರ್ಣಾ ಮತ್ತು ಖಾದರ್ ಅಲಿ ಮನ್ನಾಎಖೇಳ್ಳಿ ಅವರನ್ನು ಬೀದಿ ಬದಿ ವ್ಯಾಪಾರಿಗಳ ವಿಭಾಗದ ಬೀದರ್ ದಕ್ಷಿಣ ಗ್ರಾಮೀಣ ಅಧ್ಯಕ್ಷರಾಗಿ ಅಶೋಕ ಖೇಣಿ ಅವರು ನೇಮಕ ಮಾಡಿ ಆದೇಶ ಪತ್ರ ನೀಡಿ ಅವರನ್ನು ಸನ್ಮಾನಿಸಿ ಕೂಡಲೇ ತಮ್ಮ ಅಧಿಕಾರ ವಹಿಸಿಕೊಂಡು ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ ಮತ್ತು ಶಿಸ್ತಿಗೆ ಒಳಪಟ್ಟು ಕಾರ್ಯನಿರ್ವಹಿಸಲು ಸೂಚಿಸಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಕಮಿಟಿಯ ಅಧ್ಯಕ್ಷ ಚಂದ್ರಶೇಖರ ಚನಶೆಟ್ಟಿ,ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.



ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ ಪೇದೆಗಳಾಗಿ 5 ವರ್ಷಗಳ ಕಾಲ ಅತ್ಯುತ್ತಮವಾಗಿ ಸೇವೆ ಸಲ್ಲಿಸಿ ವರ್ಗಾವಣೆಗೊಂಡಿರುವ ನಾಮನಂದ, ದುಂಡಪ್ಪ, ಸಿದ್ದರೊಡ ಇವರನ್ನು ಪಟ್ಟಣದ ಯುವ ಉದ್ಯಮಿ ನರಸಪ್ಪ ನರನಾಳ ಸನ್ಮಾನಿಸಿ ಬೀಳ್ಕೊಟ್ಟರು.
(ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ :– ಖ್ಯಾತ ಸಾಹಿತಿಗಳಾದ ಕೆ. ನೀಲಾ ಹಾಗೂ ಮೀನಾಕ್ಷಿ ಬಾಳಿ ಅವರು ಹಾರಕೂಡ ಶ್ರೀಮಠಕ್ಕೆ ಆಗಮಿಸಿದಾಗ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ. ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶಾಂತಿ ಸುವ್ಯವಸ್ಥೆ ಕಾಪಾಡುವಲ್ಲಿ ಬಾಷುಮಿಯಾ ಅವರ ಸೇವೆ ಮೆಚ್ಚುವಂತದ್ದು – ಜೆ ಎಸ್ ನ್ಯಾಮೆಗೌಡ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ ಪೊಲೀಸ್ ಠಾಣೆ–ಯ ಪಿಎಸ್ಐ ಆಗಿ 2 ವರ್ಷ ಅತ್ಯುತ್ತಮ ಸೇವೆ ಸಲ್ಲಿಸಿ ಜನರ ಹೃದಯ ಗೆದ್ದಿರುವ ಬಾಷುಮಿಯಾ ಅವರ ಸೇವೆ ಅವಿಸ್ಮರಣೀಯವಾಗಿದೆ ಎಂದು ಹುಮನಾಬಾದ ಪೊಲೀಸ್ ಠಾಣೆ–ಯ ಉಪ ವಿಭಾಗದ ಡಿವೈಎಸ್ಪಿ ಜೆ.ಎಸ್. ನ್ಯಾಮೇಗೌಡ ಇಲ್ಲಿಯ ರಘೋಜಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಹಾಗೂ ಸ್ವಾಗತ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ತಿಳಿಸಿದರು. ಎರೆಡು ವರ್ಷ ಅತ್ಯುತ್ತಮವಾಗಿ ಕಾನೂನು ಸುವ್ಯವಸ್ಥೆ ಕಾಪಾಡಿಕೊಂಡು ಬಂದು ಇಲಾಖೆಗೆ ಒಳ್ಳೆಯ ಹೆಸರು ತಂದಿದ್ದಾರೆ ಎಂದರು. ಸಮಾಜದಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಇಲಾಖೆಯ ಮಹತ್ವದ ಜವಾಬ್ದಾರಿಯಾಗಿರುತ್ತದೆ. ಈ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರವೂ ಸಹ ಅಗತ್ಯವಾಗಿರುತ್ತದೆ ಎಂದು ಹೇಳಿದರು. ತಹಶೀಲ್ದಾರ್ ಮಂಜುನಾಥ್ ಪಂಚಾಳ ಮಾತನಾಡಿ, ಪಟ್ಟಣ ಸೇರಿದಂತೆ ತಾಲೂಕಿನಲ್ಲಿ ಯಾವುದೇ ಕಾನೂನು ಸುವ್ಯವಸ್ಥೆ ಸಮಸ್ಯೆಗಳು ಉದ್ಭವವಾದಾಗ ಪೊಲೀಸ್ ಇಲಾಖೆಯೊಂದಿಗೆ ಚರ್ಚಿಸಿ ಸಮಸ್ಯೆಗಳು ಇತ್ಯರ್ಥಗೊಳಿಸಲು ಬಾಷುಮಿಯಾ ಅವರು ಬಹಳಷ್ಟು ಸಹಕಾರ ನೀಡಿದ್ದಾರೆ ಎಂದು ತಿಳಿಸಿದರು. ಸಿಪಿಐ ಶ್ರೀನಿವಾಸ ಅಲ್ಲಾಪುರ್ ಮಾತನಾಡಿ, ವೃತ್ತದಲ್ಲಿ ಅತ್ಯುತ್ತಮವಾಗಿ ಸೇವೆ ಸಲ್ಲಿಸಿ ವೃತ್ತಕ್ಕೆ ಹೆಸರು ತಂದಿದ್ದಾರೆ ಎಂದರು. ಪೊಲೀಸ್ ಇಲಾಖೆ ಅನೇಕ ಸವಾಲುಗಳ ನಡುವೆ ಸಮಾಜದ ಹಿತಕ್ಕಾಗಿ ಕಾರ್ಯನಿರ್ವಹಿಸುವ ಪೊಲೀಸ್ ವೃತ್ತಿಯಲ್ಲಿ ವರ್ಗಾವಣೆ ಎಂಬುದು ಸಹಜ ಪ್ರಕ್ರಿಯೆಯಾಗಿದೆ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಸಿಬ್ಬಂದಿಗಳ ನಡುವೆ ಸಹೋದರತೆಯ ಬಾಂಧವ್ಯ ಬೆಳೆದಿರುತ್ತದೆ. ಮೇಲಧಿಕಾರಿಗಳ ಆದೇಶ ಪಾಲಿಸುತ್ತಾ ಶಿಸ್ತು ಬದ್ಧವಾಗಿ ಕಾರ್ಯನಿರ್ವಹಿಸಿಕೊಂಡು ಬರಲಾಗುತ್ತಿರುತ್ತದೆ. ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿ ವರ್ಗಾವಣೆಯಾದ ಬಾಷುಮಿಯಾ ಅವರು ಮತ್ತೆ ಬೀದರ್ ಜಿಲ್ಲೆಯಲ್ಲಿ ಸೇವೆ ಸಲ್ಲಿಸುವ ಅವಕಾಶ ದೊರೆಯಲ್ಲಿ ಎಂದು ನುಡಿದರು. ವರ್ಗಾವಣೆಗೊಂಡ ಪಿಎಸ್ಐ ಬಾಷುಮಿಯಾ ಮಾತನಾಡಿ, ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ 2 ವರ್ಷ ಸೇವೆ ಮಾಡಲು ಪೊಲೀಸ್ ಸಿಬ್ಬಂದಿಗಳು ಮತ್ತು ಸಾರ್ವಜನಿಕರು,ಸಂಘ ಸಂಸ್ಥೆಗಳು ನನಗೆ ಅತ್ಯುತ್ತಮವಾಗಿ ಸೇವೆ ಸಲ್ಲಿಸಲು ಸಹಕಾರ ನೀಡಿದ–ಕ್ಕೆ ಧನ್ಯವಾದಗಳು ಸಲ್ಲಿಸಿದರು. ಚಿಟಗುಪ್ಪ ಪಟ್ಟಣದ ಜನರ ಪ್ರೀತಿ, ವಿಶ್ವಾಸ, ನಂಬಿಕೆ ಯಾವತ್ತು ಮರೆಯುದ್ದಿಲ್ಲ,ನಿಮ್ಮೆಲ್ಲರ ಪ್ರೀತಿ, ವಿಶ್ವಾಸ ಸಹಕಾರದಿಂದ ಸಿಪಿಐ ಆಗಿ ನಿಮ್ಮ ಸೇವೆ ಸಲ್ಲಿಸಲು ಬರುತ್ತೇನೆ ಎಂದು ಹೇಳಿದರು. ನೂತನವಾಗಿ ಆಗಮಿಸಿದ ಪಿಎಸ್ಐ ಬಸಲಿಂಗಪ್ಪ ಎಂ. ಗೋಧಿಹಾಳ ಮಾತನಾಡಿ, ನನಗೆ ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ ಸೇವೆ ಸಲ್ಲಿಸಲು ಅವಕಾಶ ದೊರಕಿರುವುದು ನನ್ನ ಪುಣ್ಯ ಎಂದು ತಿಳಿದಿದ್ದೇನೆ. ತಾಲೂಕಿನಲ್ಲಿ ನಾವೆಲ್ಲರೂ ಉತ್ತಮವಾಗಿ ಸೇವೆ ಸಲ್ಲಿಸಲು ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ನಾವೆಲ್ಲರೂ ಸೇವೆ ಸಲ್ಲಿಸೋಣ ಎಂದು ಸಿಬ್ಬಂದಿಗಳಿಗೆ ಕಿವಿಮಾತು ಹೇಳಿದರು. ಈ ಹಿಂದೆ ಬಾಷುಮಿಯಾ ಅವರಿಗೆ ಹೇಗೆ ಸಹಕಾರ ನೀಡಿದ್ದೀರಿ ಹಾಗೆ ಮುಂದೆ ನನಗೂ ಕೂಡ ಇದೇ ರೀತಿ ಸಹಕಾರ ನೀಡಿ ಎಂದು ಹೇಳಿದರು. ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ. ವಿಜಯ ಹಿರಸ್ಕರ್, ಮನ್ನಾಖೇಳ್ಳಿ ಪಿಎಸ್ಐ ಮಹೇಂದ್ರಕುಮಾರ್,ಬೆಮಳಖೇಡಾ ಪಿಎಸ್ಐ ನಿಂಗಪ್ಪ ಮಣ್ಣೂರ್, ಪುರಸಭೆ ಉಪಾಧ್ಯಕ್ಷ ನಸೀರ್ ಖಾನಸಾಬ್, ಅಶೋಕ ಸ್ವಾಮಿ ಫಾತ್ಮಪುರ್, ಮಲ್ಲಿಕಾರ್ಜುನ ಪಾಟೀಲ, ರಾಶೀದ್ ಪಟೇಲ್ ಸೇರಿದಂತೆ ಪೊಲೀಸ್ ಇಲಾಖೆಯ ಸಿಬ್ಬಂದಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.ಕಾರ್ಯಕ್ರಮವನ್ನು ವಿಜಯಕುಮಾರ ಬರ್ಮಾ ನಿರೂಪಿಸಿ ವಂದಿಸಿದರು.

ಚಿಟಗುಪ್ಪ ಪೊಲೀಸ್ ಠಾಣೆಯಲ್ಲಿ ಪೇದೆಗಳಾಗಿ 5 ವರ್ಷಗಳ ಕಾಲ ಸೇವೆ ಸಲ್ಲಿಸಿ ಇಲ್ಲಿಂದ ವರ್ಗಾವಣೆಗೊಂಡಿರುವ ನಾಮನಂದ, ದುಂಡಪ್ಪ, ಸಿದ್ದರೊಡ ಇವರುಗಳು ಅತ್ಯುತ್ತಮವಾಗಿ ಸೇವೆ ಸಲ್ಲಿಸಿ ವರ್ಗಾವಣೆಗೊಂಡಿದ್ದಕ್ಕೆ ಅವರುಗಳನ್ನು ಕೂಡ ಸನ್ಮಾನಿಸಿ ಬೀಳ್ಕೊಡಲಾಯಿತ್ತು.

# ಕನ್ನಡ ನಾಡು, ನುಡಿಯ ಸಂರಕ್ಷಣೆಗೆ ಕನ್ನಡ ಸೇನೆ ಕಾರ್ಯಕರ್ತರು ಮುಂದಾಗಿರಿ:– ಸಿಪಿಐ ಅಲ್ಲಾಪುರ್



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಕಾರ್ಯಕರ್ತರು ಕನ್ನಡ ನಾಡು, ನುಡಿಯ ಸಂರಕ್ಷಣೆಯ ಹೋರಾಟಕ್ಕೆ ಶ್ರಮಿಸಬೇಕು ಎಂದು ಸಿಪಿಐ ಶ್ರೀನಿವಾಸ ಅಲ್ಲಾಪುರ್ ಹೇಳಿದರು. ಪಟ್ಟಣದ ಗಣೇಶ ಮಂದಿರದಲ್ಲಿ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಗ್ರಾಮ ಘಟಕಗಳು ಉದ್ಘಾಟಿಸಿ ಮಾತನಾಡಿ, ಕನ್ನಡ ನಾಡು, ನುಡಿ, ಭಾಷೆ, ನೆಲ, ಜಲ, ಸಂರಕ್ಷಣೆಗೆ ಕನ್ನಡ ಮನಸ್ಸು ಮುಂದಾಗಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ, ಪಿಎಸ್ಐ ಬಸಲಿಂಗಪ್ಪ ಎಂ. ಗೋಧಿಹಾಳ, ಪ್ರೊಫೆಷನರಿ ಪಿಎಸ್ಐ ಪುಟ್ನಂಜ, ಬಿಎಸ್‌ಎಸ್‌ಕೆ ನಿರ್ದೇಶಕ ಮಲ್ಲಿಕಾರ್ಜುನ್ ಪಾಟಿಲ್, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕ ಅಧ್ಯಕ್ಷ ಅನೀಲಕುಮಾರ್ ಸಿಂಧೆ, ಜಿಲ್ಲಾಧ್ಯಕ್ಷ ಸುಭಾಷ ಕೆನಡೆ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಸಾಕ್ಷಿ ಆರ್. ಹಿರೇಮಠ, ತಾಲೂಕಾಧ್ಯಕ್ಷ ಪವನ ಪೂಜಾರಿ, ಸಂಗಮೇಶ ಜವಾದಿ, ಮಹಮ್ಮದ್ ಅಸ್ಲಾಂಮಿಯ, ಸತೀಷ ಗಂಜಿ, ರಮೇಶ ಧೂಳ, ತಿಪ್ಪಣ್ಣ, ಮುಜೀಬ್ ಸೇರಿದಂತೆ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಒಂದು ದಿವಸ ತರಬೇತಿ ಶಿಬಿರ



(ವರದಿ. ಡಿ. ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 21 ನಗರದ ಸುಮಾರು 55 ಮಹಿಳೆಯರಿಗೆ ಕೃಷಿ ವಿಜ್ಞಾನ ಕೇಂದ್ರ ಕಲಬುರಗಿಯಲ್ಲಿ ಕೈತೋಟ ಮತ್ತು ಮನೆಯ ಮೇಳಿಗೆಯ ಮೇಲೆ ತರಕಾರಿ, ಹಣ್ಣು ಮತ್ತು ಹೂ ಬೆಳೆಯುವ ವಿಧಾನದ ಬಗ್ಗೆ ಒಂದು ದಿವಸದ ತರಬೇತಿ ಶಿಬಿರವನ್ನು ಅಮೃತ ವಾಹಿನಿ ರೈತ ಉತ್ಪಾದಕ ಕಂಪನಿ ಖೇರ್ಡಾ(ಬಿ) ಸಂಯೋಗದಲ್ಲಿ ಆಯೋಜನೆ ಮಾಡಲಾಯಿತು. ತೋಟಗಾರಿಕೆ ತಜ್ಞರಾದ ಡಾ ಸನ್ಮತಿಯವರು ಮಾತನಾಡಿ

ಕೈ ತೋಟಗಾರಿಕೆ ಎಂದರೆ ಮನೆಯ ಸುತ್ತಲೂ ಇರುವ ಸಣ್ಣ ಸ್ಥಳದಲ್ಲಿ ಮನೆಗೆ ಬೇಕಾದ ತರಕಾರಿ ಹಣ್ಣು ಮತ್ತು ಹೂ ಬೆಳೆಯುವುದು.ಮನೆಯ ಮೇಳಿಗೆಯ ಮೇಲೆ ಬಾಲ್ಕನಿಯಲ್ಲಿ ಅಥವಾ ವರಂಡದಲ್ಲಿಯೂ ಕೂಡ ನಾವು ತರಕಾರಿ ಹೂ ಹಣ್ಣುಗಳನ್ನ ಬೆಳೆಯಬಹುದಾಗಿದೆ. ಇದರಿಂದ ಸಾಕಷ್ಟು ಲಾಭ ಪಡೆಯಬಹುದಾಗಿದೆ. ಮನೆಯಲ್ಲಿ ಬೆಳೆದ ತರಕಾರಿಗಳು ಮತ್ತು ಹಣ್ಣುಗಳು ತಾಜಾ ಮತ್ತು ಆರೋಗ್ಯಕರವಾಗಿರುತ್ತವೆ, ಖರ್ಚು ಉಳಿತಾಯ, ಮಾನಸಿಕ ಆರೋಗ್ಯ, ಮನೆಯ ತೋಟವು ಪರಿಸರಕ್ಕೆ ಒಳ್ಳೆಯದು ಎಂದು ಹೇಳಿದರು ಮತ್ತು ಮಹಿಳೆಯರಿಗೆ ಕುಂಡಲದಲ್ಲಿ ಹೇಗೆ ಸಸಿ ನೆಡುವ ವಿಧಾನದ ಬಗ್ಗೆ ಕೃತಕವಾಗಿ ಮಾಡಿ ತೋರಿಸಿದರು. ಕೃ.ವಿ.ಕೆ ಮುಖ್ಯಸ್ಥರಾದ ಡಾ ರಾಜು ತೆಗ್ಗಳ್ಳಿಯವರು ಔಷಧಿ ಸಸ್ಯಗಳ ಬಗ್ಗೆ ಮಾಹಿತಿ ನೀಡಿದರು. ಬಾ ಮಹಾಂತೇಶ್ ಜೋಗಿಯವರು ವರ್ಮಿ ಕಾಂಪೋಸ್ಟ್ ಮತ್ತು ಕಾಂಪೋಸ್ಟ್ ಬಗ್ಗೆ ವಿವರಣೆ ನೀಡಿದರು. ಡಾ ರಾಜಶೇಖರ್ ಬಸ್ ನಾಯಕ್ ಅವರು ಸಸಿ ತಯಾರು ಮಾಡುವ ವಿಧಾನದ ಬಗ್ಗೆ ವಿವರಣೆ ನೀಡಿದರು ಮತ್ತು ಕೃಷಿ ಮಹಾವಿದ್ಯಾಲಯ ಕಲಬುರಗಿಯ ಬಗ್ಗೆ ಮಾಹಿತಿ ನೀಡಿದರು. ವಾಣಿಜ್ಯ ತೆರಿಗೆಯ ಸಹಾಯಕ ಆಯುಕ್ತರಾದ ಡಾ ಮಹೇಶ್ ಪಾಟೀಲ್ ಕೃ.ವಿ.ಕೆ ಕಾರ್ಯದ ಬಗ್ಗೆ ವಿವರಣೆ ನೀಡಿದರು. ಈ ಶಿಬಿರದಲ್ಲಿ ಬಸವಕಲ್ಯಾಣ ನಗರದ ವೈದ್ಯರಾದ ಜ್ಯೋತಿ ಹಂಚಾಟೆ ಡಾ ಸಂಗೀತ ಮಂಠಾಳ, ಡಾ ಶ್ರೀಷ್ಟಿ, ಡಾ ಕಾವ್ಯ ಮತ್ತು ಪ್ರಮುಖರಾದ ರಾಜೇಶ್ವರಿ ಖುಬಾ, ಜ್ಯೋತಿ. ನಿರ್ಮಲಾ ಶಿವಣಕರ್ , ನಿರ್ಮಲಾ ಶೆಟ್ಟಗಾರ್, ಸುನೀತಾ ರೆಡ್ಡಿ, ಚಂದನ ದೇಶಪಾಂಡೆ, , ಮಮತಾ ಭೂಸೆ, ಸುಲೋಚನಾ ಗುದಗೆ, ಮುಂತಾದವರು ಶಿಬಿರದಲ್ಲಿ ಭಾಗವಹಿಸಿದರು.

# ಕ. ಕಾ.ನಿ. ಪತ್ರಕರ್ತ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರವರಿಗೆ ಸನ್ಮಾನ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಜು 21 ಇಲ್ಲಿನ ಯಾತ್ರಿನಿವಾಸದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕ ಘಟಕದಿಂದ ಆಯೋಜಿಸಿದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಘದ ರಾಜ್ಯ ಅಧ್ಯಕ್ಷರಾದ ಶಿವಾನಂದ ತಗಡೂರವರಿಗೆ ತಾಲೂಕ ಘಟಕದಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಶಾಸಕರಾದ ಶರಣು ಸಲಗರ್. ಸಂಘದ ಉಪಾಧ್ಯಕ್ಷರಾದ ಭವಾನಿ ಸಿಂಗ್ ಠಾಕೂರ್. ಪ್ರಧಾನ ಕಾರ್ಯದರ್ಶಿಗಳಾದ ಜಿ ಸಿ ಲೋಕೇಶ್. ಹಿರಿಯ ಪತ್ರಕರ್ತರಾದ ಬಿ. ವಿ. ಮಲ್ಲಿಕಾರ್ಜುನಯ್ಯ ಜಿಲ್ಲಾಧ್ಯಕ್ಷರಾದ ಡಿ ಕೆ ಗಣಪತಿ ಕಾರ್ಯದರ್ಶಿಗಳಾದ ಶಿವಕುಮಾರ್ ಸ್ವಾಮಿ ನಾಗಶೆಟ್ಟಿ ದರಂಪುರೆ ಸರ್ಕಾರಿ ನೌಕರ ಸಂಘದ ತಾಲೂಕ ಅಧ್ಯಕ್ಷರಾದ ' ದಿಲೀಪ್ ಕುಮಾರ್ ಉತ್ತಮ. ನಗರಸಭೆ ಅಧ್ಯಕ್ಷರಾದ ಎಂ.ಡಿ. ಸಗೀರೋದ್ದಿನ. ಕ. ಕಾ.ನಿ ಪತ್ರ ಸಂಘದ ತಾಲೂಕ ಅಧ್ಯಕ್ಷರಾದ ಮಾರ್ತಂಡ ಜೋಶಿ. ಉಪಾಧ್ಯಕ್ಷರಾದ ಡಿ.ಕೆ.ಪ್ರಹ್ಲಾದ. ಪ್ರಧಾನ ಕಾರ್ಯದರ್ಶಿಗಳಾದ ಉದಯಕುಮಾರ್ ಮೂಳೆ. ಖಜಾಂಚಿ ಪ್ರದೀಪ್ ವಿಸಾಜಿ. ವಿರಶೇಟ್ಟಿ ಮಲಶೇಟ್ಟಿ. ಕಲ್ಯಾಣರಾವ ಮದರಗಾಂವಕರ್. ಕುತಬೊದ್ದೀನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

**PROCLAMATION:**
**IN THE COURT OF THE PRI. CIVIL JUDGE, AT BASAVAKALYAN**
**O.S. No. 51/2025**

Saroja W/o. Mukesh Durge
……….. Plaintiff
// Versus //
To whomsoever it may concerned
………… Defendant.

**Claim: Suit for declaration and rectification of ROR.**

This is to inform to the public at large that the plaintiff has filed suit of declaration and injunction against to whosoever it may concerned for suit land Sy. No. 204/6, measuring to the extent of 01 Acre 10 guntas, situated at village Ujalamb, Tq: Basavakalyan, Dist Bidar, declaring the plaintiff as owner and possessor by virtue of registered will deed bearing Doc No- BK-3-11/21-22, dated 09/02/2022 executed by deceased Sojarbai W/o. Keshavrao in favour of the plaintiff. Therefore, if anybody having any objection for declaration with respect to the suit land, are hereby summoned to appear before this court personally or through advocate on 23/08/2025 at 11 am by order of this court, failing which this case will be decided on merits. Issued under the seal of the court on this 21ST July 2025.

BY ORDER OF COURT
Chief Ministerial Officer
Prl. Civil Judg and JMFC
Basavakalyan.

**CITATION**
**IN THE COURT OF THE PRL. CIVIL JUDGE AND JMFC HUMNABAD AT HUMNABAD**
**CRL.MISC.NO. 737/2025**

PETITIONERS :-
1. Vithal S/o Late Shankarappa Age 69 R/o Chitguppa R/o. Hippargaon villege
RESPONDENT:-
The Registrar of Birth and Death-through, Tahasildhar., Chitguppa.

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate of their father LATE Hanmanth S/O Manikappa Who died on dated 10- 09-1974 at Hippargaon Tq. Chitguppa The petitioner claiming the death certificate of deceased Vithal for transfer of property and other official purpose and home record. Therefore it is hereby proclaimed that if any person or person have got any objection in this regard he/ they may approach to this Honorable court on 07/08/2025 at 11.00 AM in person or authorized pleader to answer such claim otherwise the matter will be heard and determined in your absence as per law.

Given under my hand and seal of he court, this 9th day of JUNE -2025.

//By order of the court//
Chief Ministerial Officer,
Prl. Civil Judge and JMFC Court
Humnabad

# ಗೋ ಸಂರಕ್ಷಣೆಯಿಂದ ಆರೋಗ್ಯ ರಕ್ಷಣೆ: ತಮಲೂರು ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 21 : ಗೋ ಸಂರಕ್ಷಣೆಯಿಂದ ಆರೋಗ್ಯ ರಕ್ಷಣೆಸಾಧ್ಯಎಂದುತಮಲೂರು ಶ್ರೀಮಠದ ಪೂಜ್ಯ ಷ.ಬ್ರ ಶಿವಾನಂದ ಶಿವಾಚಾರ್ಯ ಮಹಾಸ್ವಾಮಿಗಳುನುಡಿದರು.

ಶನಿವಾರ ತಾಲೂಕಿನ ನಾಗೂರಗ್ರಾಮದಲ್ಲಿಶ್ರೀಮಠದ ಆಶ್ರಯದಲ್ಲಿ ಸ್ಥಾಪಿತವಾದ ಕಾಮಧೇನು ಗೋಶಾಲೆಯ ಐದನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದರು.

ದೇವಾನು ದೇವತೆಗಳ ಕಾಲದಿಂದಲೂಹಸುವನ್ನುಪೂಜ್ಯ ಭಾವದಿಂದಪೂಜಿಸಲಾಗುತ್ತಿದೆ. ಗೋವನ್ನು ಪೂಜಿಸಿದರೆ 36 ಕೋಟಿ ದೇವತೆಗಳ ಪೂಜೆ ಮಾಡಿದ ಹಾಗೆ. ಅದರ ಗೋಮುತ್ರದಿಂದ ನೂರಾರು ಪ್ರಯೋಜನಗಳು,ಸಗಣಿಯಿಂದ ಹಲವಾರುಉಪಯೋಗಗಳಿವೆ. 10 ಎಕರೆ ಜಾಗದಲ್ಲಿ ಕಳೆದ ಐದು ವರ್ಷಗಳ ಹಿಂದೆ 40 ಗೋವುಗಳನ್ನುಸಾಕಿ ಇಂದು ಅವುಗಳ ಗೋಮುತ್ರಹಾಗೂ ಸಗಣಿಯಿಂದ 50ಕ್ಕೂಅಧಿಕ ನಿತ್ಯಉಪಯೋಗಕ್ಕೆಬರುವ ಉತ್ಪನ್ನಗಳನ್ನುಸಿದ್ಧಪಡಿಸಲಾಗಿದೆ. ಗೋಮುತ್ರದಿಂದ ಸಾವಯವ ಕೃಷಿಗೆ ಉತ್ತೇಜನ, ಅದರಿಂದ ತಯ್ಯಾರಿಸುವಸಿಂಪಡಣೆಯಿಂದ ಭೂಮಿಯ ಫಲವತ್ತತೆ ಹೆಚ್ಚಿಸುವುದರ ಜೊತೆಗೆ ಕೃಷಿ ಇಳುವರಿ ಜಾಸ್ತಿಯಾಗಿ ರೈತ ಸ್ವಾವಲಂಬಿಯಾಗಿ ಜೀವಿಸಬಹುದಾಗಿದೆ ಎಂದರು.

ಇಂದು ಪ್ರತಿಯೊಬ್ಬರು ನಾಯಿಗಳನ್ನು ಶೋಕಿಗಾಗಿ ಸಾಕಿ ನೆರೆ ಹೊರೆಯವರ ಕಿರಿಕಿರಿ,ಸಂಬಂಧಿಕರಬೇಸರಕ್ಕೆ ಗುರಿಯಾಗುತ್ತಿರುವರು. ಅವುಗಳಿಗೆ ಪ್ರತಿ ತಿಂಗಳು ಕನಿಷ್ಟ 3 ಸಾವಿರಕ್ಕೂ ಅಧಿಕ ಹಣ ಖರ್ಚು ಮಾಡುತ್ತಾರೆ. ಕ್ಯಾನ್ಸರ್ ಆದಿಯಾಗಿಮನುಷ್ಯನಿಗೆ ಕಾಡುವ ದೀರ್ಘ ಕಾಲದ ಕಾಯಿಲೆಗಳಿಗೆರಾಮಬಾಣವಾಗಿರುವ ಗೋಮಾತೆಯನ್ನುಸಲಹಬೇಕೆಂದು ಕಿವಿ ಮಾತು ಹೇಳಿದರು.

ಮುಂಬರುವ ದಿನಗಳಲ್ಲಿ ಇದುಕೇವಲಗೋಶಾಲೆಯಾಗಿ ಗುರ್ತಿಸದೇ ಮಾದರಿ ಆಯುವೇದಪಂಚಗವ್ಯಯುಳ್ಳ ಚಿಕಿತ್ಸಾಲಯವನ್ನಾಗಿ,ಉಪಚಾರ ಕೇಂದ್ರವನ್ನಾಗಿ ನಿರ್ಮಿಸಲು ಉದ್ದೇಶಿಸಲಾಗಿದೆ. ಕಳೆದ ವರ್ಷ ಆಕಳ ಸಗಣಿಯಿಂದ ಗಣೇಶ ಚತುರ್ಥಿಗೆ 2 ಸಾವಿರ ಗಣೇಶ ವಿಗ್ರಹಗಳನ್ನು ನಿರ್ಮಿಸಲಾಗಿತ್ತು. ಈ ವರ್ಷ ಅವನ್ನುಹೆಚ್ಚಿಸಲಾಗುವುದು. ಗಣೇಶನ ವಿಗ್ರಹದ ಜೊತೆಗೆ ಒಂದು ಗಿಡದ ಕುಂಡವನ್ನು ನೀಡಲಾಗುವುದು. ಅದರಲ್ಲಿಯೆ ಗಣೇಶನ ವಿಸರ್ಜನೆ ಮಾಡಿ, ಪರಿಸರಪ್ರಜ್ಞೆಮೆರೆಯಬೇಕೆಂದು ಪೂಜ್ಯರು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ತೋಟಗಾರಿಕೆಮಹಾವಿದ್ಯಾಲಯದ ಡೀನ್ ಡಾ.ಎಸ್.ವಿ ಪಾಟೀಲ ಮಾತನಾಡಿ,ಗೋಶಾಲೆಯಿಂದ ಸಾವಯವ ಕೃಷಿಯನ್ನು ಅಭಿವೃದ್ಧಿಪಡಿಸಬಹುದಾಗಿದೆ. ಗೋಮುತ್ರಹಾಗೂಗೋಸಗಣಿ ಇವು ಈಗಿನ ಕಾಲಕ್ಕೆಆರೋಗ್ಯದ ವಜ್ರಗಳಿದ್ದಂತೆ. ಕೌಟೊಂಬಿಕ ಆರೋಗ್ಯದ ಬೆಳವಣಿಗೆ ಹಾಗೂ ದೇಶದ ಆರ್ಥಿಕ ಅಭಿವೃದ್ಧಿಯಲ್ಲೂ ಗೋವಿನ ಪಾಲನೆ, ಪೋಷಣೆ ಅಗತ್ಯವಿದೆ ಎಂದರು.

ಪಶು ವೈದ್ಯಕೀಯ, ಪಶು ಹಾಗೂಮೀನುಗಾರಿಕೆವಿಜ್ಞಾನಗಳ ವಿಶ್ವವಿದ್ಯಾಲಯದಸಹಪ್ರಾಧ್ಯಾಪಕ ಡಾ.ಚನ್ನಪ್ಪಗೌಡ ಬಿರಾದಾರ ಮಾತನಾಡಿ, ಪ್ರತಿ ಮನೆಯಲ್ಲಿ ಏನಿಲ್ಲದಿದ್ದರೂ ಒಂದು ಗೋವು ಇರಬೇಕು. ಅದರಲ್ಲೂ ದೇಶಿ ತಳಿಯ ಗೋವು ಸಾಕಬೇಕು. ದೀರ್ಘಾಯುಷ್ಯ ಹಾಗೂ ಪರಿಪೂರ್ಣ ಆರೋಗ್ಯವಂತನಾಗಿ ಬಾಳಲು ಆಕಳ ಹಾಲು, ತುಪ್ಪ, ಗೋಮುತ್ರ ಸೇವನೆ ಅಗತ್ಯವೆಂದು ಪ್ರತಿಪಾದಿಸಿದರು.

ತೋಟಗಾರಿಕೆಮಹಾವಿದ್ಯಾಲಯದ ಸಹ ಪ್ರಾಧ್ಯಾಪಕರಾದ ಡಾ.ವಿಜಯ ಮಹಾಂತೇಶ, ಡಾ.ವಿ.ಪಿ.ಸಿಂಗ್,ಡಾ.ಎಂ.ಡಿ ಫಾರೂಕ್, ಚನ್ನಬಸವಂತ ರೆಡ್ಡಿ, ಶ್ರೀಕಾಂತ ಮೋದಿ ಮಾತನಾಡಿದರು.

ಗೋಶಾಲೆಯ ಉಸ್ತುವಾರಿ ಶಿವಕುಮಾರಹಿರೇಮಠಪ್ರಾಸ್ತಾವಿಕ ಮಾತನಾಡಿ, ಗೋಮೂತ್ರ ಹಾಗೂ ಸಗಣಿಯಿಂದ ವಿವಿಧ 50 ಪದಾರ್ಥಗಳನ್ನು ತಯ್ಯಾರಿಸಲಾಗುತ್ತಿದೆ.ಮುಂದಿನ ದಿನಗಳಲ್ಲಿ ಅವುಗಳ ಪ್ರಮಾಣ ಹೆಚ್ಚಿಸಲಾಗುವುದು. ಈ ಸಂಬಂಧ ವಿವಿಧ ಶಾಲೆ, ಕಾಲೇಜು ಮಕ್ಕಳಿಗೆ ಈ ಉತ್ಪನ್ನಗಳ ಬಗ್ಗೆ ಜಾಗೃತಿ ಮೂಡಸಲಾಗಿದೆ. ಈಲ್ಲೆಯ ಸಾರ್ವಜನಿಕರು ಇವನ್ನು ಖರಿದಿಸಿ ತಮ್ಮ ಜೀವನ ಬದಲಾಯಿಸಿಕೊಳ್ಳುವಂತೆ ಕರೆ ನೀಡಿದರು.

ನಿವೃತ್ತಜೆಸ್ಕಾಂ ಇಇಕಾಶಿನಾಥ ಬೆಲ್ದಾಳೆ,ಬೆಂಗಳೂರಿನಕ್ಯಾನ್ಸರ್ ರೋಗ ತಜ್ಞ ಡಾ.ರಮೇಶ ಹಾಗೂಪಶುವಿಶ್ವವಿದ್ಯಾಲಯದ ಡಾ.ಸರಿತಾವೇದಿಕೆಯಲ್ಲಿದ್ದರು. ಈ ಸಂದರ್ಭದಲ್ಲಿ ಹಲವರು ಗೋಮೂತ್ರ ಹಾಗೂ ಸಗಣಿಯಿಂದಾದಉಪಯೋಗಗಳ ಬಗ್ಗೆ ಮೆಲುಕು ಹಾಕಿದರು. ಕಾಮಧೇನು ಗೋಶಾಲೆಗೆ ಸಹಾಯಮಾಡಿದಹಲವರನ್ನು ಇದೇವೇಳೆಸನ್ಮಾನಿಸಲಾಯಿತು.

ಆರಂಭದಲ್ಲಿ ಶೀವಲೀಲಾ ಚಿದ್ರಿ ಪ್ರಾರ್ಥನೆ ಸಲ್ಲಿಸಿದರು. ಪತ್ರಕರ್ತ ಶಿವಕುಮಾರ ಸ್ವಾಮಿ ಸ್ವಾಗತಿಸಿ, ಸಹಕಾರಿ ದುರೀಣ ಶ್ರೀಕಾಂತ ಸ್ವಾಮಿ ಸೋಲಪುರ ಕಾರ್ಯಕ್ರಮ ನಿರೂಪಿಸಿ,ಕಾರ್ತಿಕ ಮಠಪತಿ ವಂದಿಸಿದರು.

# ಪ್ರಭು ಚವ್ಹಾಣ ನನ್ನ ಮೇಲೆ ಮಾಡುತ್ತಿರುವ ಆರೋಪ ನಿರಾಧಾರ

## ನಂಬಿಸಿ ಮೋಸ ಮಾಡಿದ ಪ್ರತೀಕ್ ಚವ್ಹಾಣಗೆ ಶಿಕ್ಷೆಯಾಗಲಿ: ಸಂತ್ರಸ್ತ ಮಹಿಳೆ ಸಂಧ್ಯಾ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 21 : ಪ್ರತೀಕ್ ಪ್ರಭು ಚವ್ಹಾಣ ಮಾಧ್ಯಮದ ಮುಂದೆ ಬರದೆ ತನ್ನ ತಂದೆ ಪ್ರಭು ಚವ್ಹಾಣ ಮೂಲಕ ಮಾತನಾಡಿಸುತ್ತಿರುವುದನ್ನು ನೋಡಿದರೆ ಪ್ರತೀಕ್ ತಪ್ಪು ಒಪ್ಪಿಕೊಂಡಂತಿದೆ. ನಾವು ಬಡವರು, ನಾಗಲಕ್ಷ್ಮಿ ಅವರು ನಮಗೆ ಸಹಕಾರ ನೀಡಿದ್ದಕ್ಕೆ ಇಂದು ನಾವು ಧೈರ್ಯದಿಂದ ಪತ್ರಿಕಾಗೋಷ್ಠಿಮಾಡುತ್ತಿದ್ದೇವೆ. ಇಲ್ಲದಿದ್ದರೆ ನಾನು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೆ ಎಂದು ಸಂತ್ರಸ್ತ ಮಹಿಳೆ ಸಂಧ್ಯಾ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಮಾಜಿ ಸಚಿವ ಹಾಲಿ ಶಾಸಕ ಪ್ರಭು ಚವ್ಹಾಣ ಅವರು ಪತ್ರಿಕಾಗೋಷ್ಠಿ ಮಾಡಿದ ಎಲ್ಲಾ ವಿಡಿಯೋ ನೋಡಿದ್ದೇನೆ. ಒಂದು ಕಡೆ ಮಗಳು ಎಂದು ಹೇಳುತ್ತಾರೆ. ಇನ್ನೊಂದು ಕಡೆ ನಾನು ಯಾರದ್ದೋಹುಡುಗನ ಜೊತೆ ಚಾಟ್ ಮಾಡಿದ್ದೇನೆ ಎಂದು ಹೇಳುತ್ತಾರೆ. ಪ್ರಭು ಚವ್ಹಾಣ ನನ್ನ ಮೇಲೆ ಮಾಡುತ್ತಿರುವ ಆರೋಪ ನಿರಾಧಾರ. ಸ್ವತಃ ಪ್ರತೀಕ್ ಚವ್ಹಾಣ ನನ್ನ ಕಾಲ್ ಹಿಸ್ಟರಿ ಪರಿಶೀಲನೆ ಮಾಡಿದ್ದಾರೆ. ನನ್ನ ಎರಡು ಮೊಬೈಲ್‌ಗಳು ಸುಮಾರು ನಾಲ್ಕು ತಿಂಗಳಿನಿಂದ ಚವ್ಹಾಣ ಕುಟುಂಬಸ್ಥರ ಹತ್ತಿರವೇ ಇವೆ. ಹೀಗಾಗಿ ಅವರು ಫೇಕ್ ಚಾಟಿಂಗ್ ತೋರಿಸುತ್ತಿದ್ದಾರೆ ಎಂದು ಸಂತ್ರಸ್ತೆ ಸಂಧ್ಯಾ ಆರೋಪವನ್ನು ಅಲ್ಲಗಳೆದರು.

ನನ್ನ ಹಾಗೂ ಪ್ರತೀಕ್ ಚವ್ಹಾಣ ಜೊತೆಗೆ ನಡೆದಿದೆ ಎನ್ನಲಾದ ದೈಹಿಕ ಸಂಪರ್ಕದ ಬಗ್ಗೆ ನಾನು ಪೊಲೀಸ್ ಇಲಾಖೆಗೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ದಾಖಲಾತಿಗಳನ್ನು ಸಲ್ಲಿಸಿದ್ದೇನೆ. ತಮಗೂ ನೀಡುತ್ತೇನೆ. ಒಂದು ವೇಳೆ ಬೇರೆ ಹುಡುಗನ ಜೊತೆ ನನಗೆ ಅನೈತಿಕ ಸಂಬಂಧ ಇದ್ದರೆ ನಾನೇಕೆ ಪ್ರತೀಕ್ ಚವ್ಹಾಣ ಮೇಲೆ ದೂರು ನೀಡುತ್ತಿದ್ದೆ? ನಾನೇಕೆ ಬಹಿರಂಗವಾಗಿ ಹೇಳಿಕೆ ನೀಡುತ್ತಿದ್ದೆ ಎಂದರು.

ಶಾಸಕ ಪ್ರಭು ಚವ್ಹಾಣ ಮಗ ಪ್ರತೀಕ್ ಚವ್ಹಾಣ ನನ್ನ ಹಾಗೆ ಇನ್ನೂ ಅನೇಕ ಜನ ಹುಡುಗಿಯರಿಗೆ ಮೋಸ ಮಾಡಿದ್ದಾರೆ. ಸಾಕ್ಷಿಗಳನ್ನು ಪೊಲೀಸ್ ಇಲಾಖೆಗೆ ಸಲ್ಲಿಸಿದ್ದೇನೆ ಎಂದು ಒಂದಿಷ್ಟು ಆಡಿಯೋ ಸಾಕ್ಷಿಗಳನ್ನು ಕೇಳಿಸಿದರು.

ಪ್ರತೀಕ್ ಚವ್ಹಾಣ ನನ್ನ ಮೇಲೆ ಏಳೆಂಟು ಬಾರಿ ಅತ್ಯಾಚಾರ ಮಾಡಿದ್ದಾರೆ. ನಾನು ನಿರಾ–ಕರಣೆ ಮಾಡಿದರೂ ಕೂಡಾ 'ನಿನಗೆ ಕೈ ಕೊಡುವುದಿಲ್ಲ. ಖಂಡಿತ ಮದುವೆಯಾಗುತ್ತೇನೆ.' ದಯವಿಟ್ಟು ಬಾ ಎಂದು ಕ–ರೆದಾಗ ನಾನು ಹೋಗಿದ್ದೇನೆ. ಅಕ್ಟೋಬರ್ 6, 2023ರಂದು ಬೆಂಗಳೂರಿನ ಹಾಲಿಡೆ ಇನ್ ಹೊಟೇಲ್‌ನಲ್ಲಿ ನನ್ನ ಮೇಲೆ ಅತ್ಯಾಚಾರ ಎಸಗಿದ್ದಾನೆ. ಬೆಂಗಳೂರು, ಲಾತೂರ, ಶಿರಡಿಯಲ್ಲಿ ನಾನು ಬೇಡ ಬೇಡ ಎಂದರೂ ನನಗೆ ಹಾಳು ಮಾಡಿದ್ದಾನೆ ಎಂದು ಸಂಧ್ಯಾ ತಿಳಿಸಿದರು.

ಈ ಹಿಂದೆಯೂ ಗಂಗಾಧರ ರಾಠೋಡ್ ಎನ್ನುವವರ ಮಗಳಿಗೆ ಮದುವೆಯಾಗುತ್ತೇನೆ ಎಂದು ಸುಳ್ಳು ಹೇಳಿ ಅವರಿಗೂ ಕೈ–ಕೊಟ್ಟಿದ್ದಾರೆ. ನನ್ನ ಹಾಗೂ ಪ್ರತೀಕ ಚವ್ಹಾಣ ನಿಶ್ಚಿತಾರ್ಥದ ನಂತರ ಈ ವಿಷಯ ಪ್ರತೀಕ ಚವ್ಹಾಣಗೆ ಕೇಳಿದ್ದಕ್ಕೆ ನನ್ನ ಮೇಲೆ ಹಲ್ಲೆಯೂ ಮಾಡಿದ್ದಾರೆ. ಕೈ ಕೊಯ್ದಿದ್ದಾರೆ. ಕಿವಿ ಪರದೆ ಹರಿಯುವಂತೆ ಹೊಡೆದಿದ್ದಾರೆ. ಈ ಎಲ್ಲಾ ಘಟನೆಗಳನ್ನು ನಾನು ಮಹಿಳಾ ಆಯೋಗದ ಮುಂದೆ ಮತ್ತು ಪೊಲೀಸ್ ಇಲಾಖೆ ಮುಂದೆ ತಿಳಿಸಿದ್ದೇನೆ ಎಂದರು. ಏಪ್ರಿಲ್ 2025 ರಲ್ಲಿ ನನ್ನ ಅಣ್ಣನ ಮದುವೆ ಸಂದರ್ಭದಲ್ಲಿ ಲಗ್ನಪತ್ರಿಕೆಯಲ್ಲಿ ಪ್ರಭು ಚವ್ಹಾಣ ಹೆಸರು ಹಾಕಿದ್ದೇವೆ ಎಂದರು.

ಈ ಎಲ್ಲಾ ಘಟನೆಗಳ ಕುರಿತು ಹೊಕ್ರಾಣಾ ಪೊಲೀಸ್ ಠಾಣೆಗೆ ದೂರು ನೀಡಲು ಹೋದರೆ ಅಲ್ಲಿರುವ ಪಿಎಸ್ಐ ಮತ್ತು ಸಿಪಿಐ ದೂರು ಸ್ವೀಕಾರ ಮಾಡಿಲ್ಲ. ನಾನು ಲಾಕೇಟ್ ಮತ್ತು ಮೊಬೈಲ್ ವಾಪಸ್ ಕೊಡಿಸುತ್ತೇನೆಂದು ಪಿಎಸ್ಐ ಆಶ್ವಾಸನೆ ಕೊಟ್ಟಿದ್ದ–ಕ್ಕೆ ಅಂದು ನಾವು ಅಲ್ಲಿಂದ ಹೋಗಿದ್ದೇವೆ. ನಂತರ ಕರೆ ಮಾಡಿದರೆ ಪಿಎಸ್ಐ ಕರೆ ಸ್ವೀಕಾರ ಮಾಡಲಿಲ್ಲ ಎಂದು ಸಂಧ್ಯಾ ಆರೋಪಿಸಿದರು.

ಈ ಎಲ್ಲಾ ಘಟನೆಗಳಿಂದ ಮನನೊಂದು, ಪ್ರಭು ಚವ್ಹಾಣ ಒಬ್ಬ ಪ್ರಭಾವಿ ಶಾಸಕ. ಎಲ್ಲರ ಮೇಲೆ ಪ್ರಭಾವ ಬೀರಿ ನಮಗೆ ನ್ಯಾಯ ಸಿಗದಂತೆ ಮಾಡುತ್ತಾರೆ ಎನ್ನುವ ಕಾರಣಕ್ಕಾಗಿ ನಾವು ಬೆಂಗಳೂರಿನ ಕರ್ನಾಟಕ ರಾಜ್ಯ ಮಹಿಳಾ ಆಯೋಗ–ಕ್ಕೆ ಹೋಗಿದ್ದೇವೆ. ಇದೀಗ ಬೀದರನಲ್ಲಿ ಚವ್ಹಾಣ ವಿರುದ್ಧ ಎಫ್ಐಆರ್ ದಾಖಲಿಸಿದ್ದೇವೆ. ನನಗೆ ಸಹಕರಿಸಿದ ಕರ್ನಾಟಕ ರಾಜ್ಯ ಮಹಿಳಾ ಆಯೋಗಕ್ಕೆ ಹಾಗೂ ಪೊಲೀಸ್ ಇಲಾಖೆಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಎಂದರು.

ನನಗಾದ ಅನ್ಯಾಯ ಇನ್ನೂ ಯಾವ ಮಹಿಳೆಗೂ ಇನ್ನುಮುಂದೆ ಆಗಬಾರದು ಎನ್ನುವ ಒಂದೇ ಉದ್ದೇಶದಿಂದ ನಾನು ದೂರು ಸಲ್ಲಿಸಿದ್ದೇನೆ. ಪ್ರಭು ಚವ್ಹಾಣ ಹಾಗೂ ಅವರ ಬೆಂಬಲಿಗರು ನಮ್ಮ ಕುಟುಂಬಕ್ಕೆ ಹೆದರಿಸುತ್ತಿದ್ದಾರೆ. ಒಂದು ವೇಳೆ ನನಗೆ ಹಾಗೂ ನನ್ನ ಕುಟುಂಬಕ್ಕೆ ಮತ್ತು ನಮಗೆ ಸಹಕಾರ ನೀಡುತ್ತಿರುವವರಿಗೆ ಏನಾದರೂ ಆದರೆ ಅದಕ್ಕೆ ಪ್ರಭು ಚವ್ಹಾಣ ಹಾಗೂ ಅವರ ಮಗ ಪ್ರತೀಕ ಚವ್ಹಾಣ ನೇರ ಹೊಣೆ. ನಮಗೆ ನ್ಯಾಯ ಸಿಗಬೇಕು ಎಂದರಲ್ಲದೆ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ನನ್ನ ಹತ್ತಿರ ಆಡಿಯೋ, ವಿಡಿಯೋ ಮತ್ತು ಹೊಟೆಲ್ ಬಿಲ್‌ಗಳು ಸಹ ಇವೆ. ಅವುಗಳನ್ನು ಪೊಲೀಸ್ ಇಲಾಖೆಗೆ ಸಲ್ಲಿಸಿದ್ದೇನೆ ಎಂದು ಸಂಧ್ಯಾ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಸಂತ್ರಸ್ತೆ ತಾಯಿ ಸುಲೋಚನಾ ರಾಠೋಡ್ ಮಾತನಾಡಿ ನಿಮ್ಮ ಮಗನಿಗೆ ಅನ್ಯ ಮಹಿಳೆ ಜೊತೆ ಸಂಬಂಧವಿದೆ ಎಂದು ನಾನು ಪ್ರತೀಕ್ ತಾಯಿಗೆ ತಿಳಿಸಿದೆ. ಅದಕ್ಕೆ ಅವರು "ನನ್ನ ಮಗ ಗಂಡಸು, ಸಾವಿರ ಜನರ ಜೊತೆ ಸಂಬಂಧ ಬೆಳೆಸುತ್ತಾನೆ. ನೀನು ಸುಮ್ಮನಿರಮ್ಮ" ಎಂದು ನನಗೆ ಗದರಿಸಿದ್ದಾರೆ ಎಂದರು. ನಾವು ಬಡವರು. ನಮ್ಮ ಸಮಾಜದಲ್ಲಿ ಶಿಕ್ಷಣ ಕಲಿಯುವುದೇ ದುಸ್ತರ. ಅದರಲ್ಲಿ ನಾವು ಕಷ್ಟಪಟ್ಟು ಮಗಳಿಗೆ ಓದಿಸಿದ್ದೇವೆ. ಆದರೆ ಪ್ರತೀಕ ಚವ್ಹಾಣನಿಂದ ನಮಗೆ ಅನ್ಯಾಯವಾಗಿದೆ. ನಮಗೆ ನ್ಯಾಯ ದೊರಕಿಸಿಕೊಡಿ ಎಂದು ಭಾವುಕರಾಗಿ ನುಡಿದರು.

ಸಂತ್ರಸ್ತೆ ಸಹೋದರ ರಾಹುಲ್ ರಾಠೋಡ್ ಮಾತನಾಡಿ ಪ್ರಭು ಚವ್ಹಾಣ ಅವರು 2023ರ ಡಿಸೆಂಬರ್ 25 ರಂದು ನಿಶ್ಚಿತಾರ್ಥದ ದಿವಸ ನೀವು ಏನೆ ಕೊಟ್ಟರೂ ನಾನು ಸಂತೋಷದಿಂದ ಸ್ವೀಕಾರ ಮಾಡುತ್ತೇನೆ ಎಂದು ಎಲ್ಲರ ಮುಂದೆ ಹೇಳಿ, ನಂತರ ಪ್ರಭು ಚವ್ಹಾಣ ಅವರು ತಮ್ಮ ಬೆಂಬಲಿಗರಿಂದ ಒಂದು ಫಾರ್ಚುನರ್ ಕಾರು ಮತ್ತು ವೋಲ್ವೋ ನೀಡುವಂತೆ ಡಿಮ್ಯಾಂಡ್ ಮಾಡಿಸಿದ್ದಾರೆ.

ಇದಕ್ಕೆ ನಮ್ಮ ತಂದೆ ಪಿಎಫ್ ಹಣ ಮತ್ತು ಒಂದು ನಿವೇಶನ ಮಾರಾಟ ಮಾಡಿ ಬಂಗಾರ ಹೊಂದಿಸಿದ್ದಾರೆ. ಜುಲೈ 5, 2025ರಂದು ಇನ್ನೇನು ಮದುವೆ ಮಾತುಕತೆ ಆಡಬೇಕು ಜೊತೆಗೆ ಪ್ರಭು ಚವ್ಹಾಣ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಬೇಕೆಂದು ನಮ್ಮ ತಾಯಿ ಹಾಗೂ ಅವರ ಗೆಳತಿಯರು ಬೊಂತಿ ತಾಂಡಾಗೆ ನಮ್ಮ ತಂದೆ ಬಂದಾಗ ಪ್ರಭು ಚವ್ಹಾಣ ಕುಟುಂಬಸ್ಥರು ಮನಬಂದಂತೆ ಅವಾಚ್ಯ ಶಬ್ದಗಳಿಂದ ಬೈದಿದ್ದೂ ಅಲ್ಲದೆ ಹಲ್ಲೆ ಮಾಡಿದ್ದಾರೆ. ನನ್ನ ಕೊರಳಲ್ಲಿರುವ ಒಂದು ಬಂಗಾರದ ಲಾಕೆಟ್ ಕಸಿದುಕೊಂಡಿದ್ದಾರೆ. ಜೊತೆಗೆ ಮೊಬೈಲ್ ಕೂಡಾ ಕಸಿದುಕೊಂಡಿದ್ದಾರೆ. ಎಲ್ಲಾ ಸಾಕ್ಷಿಗಳು ಆ ಕಸಿದುಕೊಂಡ ಮೊಬೈಲ್‌ನಲ್ಲಿವೆ ಎಂದರು.

# ಸ್ವಾತಂತ್ರ್ಯ ಹೋರಾಟಗಾರರ ಭವನಕ್ಕೆ ಡಿ.ಸಿ. ಭೇಟಿ

## ಆ. 15ಕ್ಕೆ ಉದ್ಘಾಟಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಸೂಚನೆ



ಕಲಬುರಗಿ,ಜು.21:ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಶನಿವಾರ ರಿಂಗ್ ರಸ್ತೆಯಲ್ಲಿರುವ ಸಾಂಸ್ಕೃತಿಕ ಸಮುಚ್ಚಯ ಆವರಣದಲ್ಲಿ 5.90 ಕೋಟಿ ರೂ. ವೆಚ್ಚದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಭವನದ ನವೀಕರಣ ಕಾಮಗಾರಿ ವೀಕ್ಷಿಸಿದರು.

800 ಆಸನದ ವ್ಯವಸ್ಥೆಯ ಆಡಿಟೋರಿಯಂ ಭವನದ ಕಾಮಗಾರಿ ಅಂತಿಮ ಹಂತಕ್ಕೆ ಬಂದಿರುವುದರಿಂದ ಸುಣ್ಣ–ಬಣ್ಣ ಮಾಡಿ ಮುಂಬರುವ ಆಗಸ್ಟ್ 15 ಸ್ವಾತಂತ್ರ್ಯ ದಿನದಂದೇ ದೇಶಕ್ಕಾಗಿ ಹೋರಾಡಿದ ವೀರ ಪುತ್ರರಿಗೆ ಇದನ್ನು ಅರ್ಪಿಸಿ ಉದ್ಘಾಟಿಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಬೇಕೆಂದು ಲೋಕೋಪಯೋಗಿ ಇ.ಇ. ಸುಭಾಷ ಬಿರಾದಾರ ಅವರಿಗೆ ಸೂಚಿಸಿದರು.

ನಗರದ ಎಂ.ಎಸ್.ಮಿಲ್ ರಸ್ತೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನ ತಲಾ 100 ವಿದ್ಯಾರ್ಥಿಗಳ ಸಾಮರ್ಥ್ಯದ 11 ಕೋಟಿ ರೂ. ವೆಚ್ಚದ ಜಿ+3 ಮಾದರಿಯ ಬಾಲಕರ ಮತ್ತು ಬಾಲಕೀಯರ ವಸತಿ ನಿಲಯ ಕಾಮಗಾರಿ ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಕೆಲಸದಲ್ಲಿ ಗುಣಮಟ್ಟ ಕಾಪಾಡಬೇಕೆಂದರಲ್ಲದೆ ಕೂಡಲೆ ಇದನ್ನು ವಿದ್ಯಾರ್ಥಿಗಳಿಗೆ ಸಮರ್ಪಣೆಗೆ ಅಣಿಯಾಗುವಂತೆ ನಿರ್ದೇಶನ ನೀಡಿದರು.

ಇದಕ್ಕು ಮುನ್ನ ಕೆ,. ಆರ್.ಐ.ಡಿ.ಎಲ್. ನಿಂದ ಚಂದ್ರಶೇಖರ ಪಾಟೀಲ ಕ್ರೀಡಾಂಗಣದಲ್ಲಿ ಕ್ರೀಡಾ ವಸತಿ ನಿಲಯ ಕಾಮಗಾರಿ, ಮಹಿಳಾ ಒಳಾಂಗಣದ ಕ್ರೀಡಾಂಗಣ ಮತ್ತು ಚಂಪಾ ಕ್ರೀಡಾಂಗಣದ ಎದುರುಗಡೆ ನಿರ್ಮಿಸಲಾಗುತ್ತಿರುವ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧೀನದ ಅಂಧ ಮಕ್ಕಳ ಶಾಲೆ ಕಾಮಗಾರಿ ವೀಕ್ಷಿಸಿದರು. ಕೆ.ಆರ್.ಐ.ಡಿ.ಎಲ್. ಇ.ಇ. ಸೌರಭ ಜೊತೆಗಿದ್ದರು.


ರಂಗಮಂದಿರ ವೀಕ್ಷಣೆ: ಇದೇ ಸಂದರ್ಭದಲ್ಲಿ ಸುಮಾರು 3.15 ಕೋಟಿ ರೂ. ವೆಚ್ಚದಲ್ಲಿ ನಡೆಯುತ್ತಿರುವ ಕಲಬುರಗಿ ನಗರದ ಡಾ.ಎಸ್.ಎಂ.ಪಂಡಿತ್ ರಂಗಮಂದಿರ ನವೀಕರಣ ಕಾಮಗಾರಿ ವೀಕ್ಷಿಸಿದ ಡಿ.ಸಿ. ಅವರು, ಜಿಲ್ಲಾಡಳಿತದ ಬಹುತೇಕ ಕಾರ್ಯಕ್ರಮಗಳು ಇಲ್ಲಿಯೆ ಆಗುವುದುರಿಂದ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಪೂರಕವಾಗುವಂತೆ ರಂಗಮಂದಿರ ನವೀಕರಣ ಕಾರ್ಯ ಗುಣಮಟ್ಟದಿಂದ ಮಾಡಬೇಕು ಎಂದು ನಿರ್ಮಿತಿ ಕೇಂದ್ರದ ಅಧಿಕಾರಿಗಳಿಗೆ ಸೂಚಿಸಿದರು.

# ಸರಳ ಸಾಮೂಹಿಕ ವಿವಾಹ

ಬೀದರ. ಜು. 21 : ಮಹಾಮಾನವಯುನಿವರ್ಸಲ್ ವೆಲ್‌ಫೇರ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಕಡು ಬಡವರಿಗಾಗಿ 2025–26ನೇ ಸಾಲಿನಲ್ಲಿ ಸಾಮೂಹಿಕ ವಿವಾಹ ಅರ್ಜಿಯನ್ನು ಆಹ್ವಾನಿಸಲಾಗಿದೆ. ವಿವಾಹಕ್ಕಾಗಿ ಆಸಕ್ತಿವುಳ್ಳವರು ಅಗಸ್ಟ್ 10 ರೊಳಗೆ ತಾವು ಖುದ್ದಾಗಿ ಸಂಸ್ಥೆಯ ಕಾರ್ಯಾಲಯದಲ್ಲಿ ಅರ್ಜಿ ಸಲ್ಲಿಸಬೇಕು, ಅರ್ಜಿಯ ಜೊತೆಗೆ ವಧು–ವರರ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ರ್‍ಯಾಶನ್ ಕಾರ್ಡ್, ಓಟರ್ ಐ.ಡಿ., ವಯಸ್ಸಿನ ಪ್ರಮಾಣ ಪತ್ರ (ಟಿಸಿ., ಅಂಕಪಟ್ಟಿ, ಶಾಲಾ ದಾಖಲಾತಿ ಅನಕ್ಷರಸ್ಥರಿಗಾಗಿ ವೈದ್ಯಕೀಯ ಪ್ರಮಾಣ ಪತ್ರ), ಪಾಸಪೋರ್ಟ್ ಅಳತೆ 2 ಭಾವಚಿತ್ರಗಳು, ಎಲ್ಲಾ ದಾಖಲಾತಿಗಳೊಂದಿಗೆ ದ್ವಿಪ್ರತಿಯಲ್ಲಿ ಅರ್ಜಿಯೊಂದಿಗೆ ಸಲ್ಲಿಸಬೇಕು. ಸಂಸ್ಥೆ ವತಿಯಿಂದ ಸಮಾಜ ಕಲ್ಯಾಣ ಇಲಾಖೆಯಿಂದ ರೂ. 50000/– ಮತ್ತು ಕಾರ್ಮಿಕ ಇಲಾಖೆಯಿಂದ ರೂ. 50000/– ಮಂಜೂರು ಮಾಡಿಸಿಕೊಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಅಧ್ಯಕ್ಷರು / ಕಾರ್ಯದರ್ಶಿ 9740240358/9739417617 ಗೆ ಸಂಪರ್ಕಿಸಬಹುದು ಎಂದು ಅರುಣ ಪಟೇಲ್, ಅಶೋಕ ಮಾಳಗೆ ತಿಳಿಸಿದ್ದಾರೆ (ಸೂಚನೆ: ಹುಡಗಿಯ ವಯಸ್ಸು 18 ತುಂಬಿರಬೇಕು, ಗಂಡಿಗೆ 21 ವರ್ಷ ತುಂಬಿರಬೇಕು, ಬಾಲ್ಯ ವಿವಾಹ ನಿಷೇಧಿಸಲಾಗಿದೆ "ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ"). ಆರ್ಥಿಕ ಸಂಕಷ್ಟದಲ್ಲಿರುವವರು ಇದರ ಸದುಪಯೋಗ ಪಡೆದುಕೊಳ್ಳಬಹುದು.

# 27 ರಿಂದ ಶಿಕ್ಷಕರಿಗೆ ಕಾರ್ಯಾಗಾರ



ಬೀದರ. ಜು. 21 : ಎಸ್ಎಸ್ಎಲ್‌ಸಿ ಪರೀಕ್ಷೆ ಫಲಿತಾಂಶ ಸುಧಾರಣೆಗಾಗಿ ವಿಕಾಸ ಅಕಾಡೆಮಿ ವತಿಯಿಂದ ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಕರು ಹಾಗೂ ಉಪನ್ಯಾಸಕರಿಗೆ ಕಲಬುರಗಿಯ ವಿ.ಜಿ. ಮಹಿಳಾ ಕಾಲೇಜಿನಲ್ಲಿ ಜುಲೈ 27 ಮತ್ತು 28 ರಂದು ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ವಿಕಾಸ ಅಕಾಡೆಮಿಯ ಕಲ್ಯಾಣ ಕರ್ನಾಟಕ ಸಹ ಸಂಚಾಲಕ ರೇವಣಸಿದ್ದಪ್ಪ ಜಲಾದೆ ತಿಳಿಸಿದ್ದಾರೆ.

27 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ರ ವರೆಗೆ ಕನ್ನಡ ಮಾಧ್ಯಮ ಶಿಕ್ಷಕರು, ಉಪನ್ಯಾಸಕರಿಗೆ ಹಾಗೂ 28 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ರ ವರೆಗೆ ಸಿಬಿಎಸ್ಇ ಪಠ್ಯಕ್ರಮದ ಶಿಕ್ಷಕರು, ಉಪನ್ಯಾಸಕರಿಗೆ ಶಿಕ್ಷಣ ತಜ್ಞ ಗುರುರಾಜ ಕರಜಗಿ ಮಾರ್ಗದರ್ಶನ ಮಾಡಲಿದ್ದಾರೆ ಎಂದು ಹೇಳಿದ್ದಾರೆ. ಕಾರ್ಯಾಗಾರದಲ್ಲಿ ತರಬೇತಿ ಪಡೆಯುವ ಶಿಕ್ಷಕರು ಹಾಗೂ ಉಪನ್ಯಾಸಕರಿಂದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿಸಿ, ಕಲ್ಯಾಣ ಕರ್ನಾಟಕದ ಫಲಿತಾಂಶ ಹೆಚ್ಚಿಸುವುದು ಕಾರ್ಯಾಗಾರದ ಉದ್ದೇಶವಾಗಿದೆ. ಶಿಕ್ಷಕರು ಹಾಗೂ ಉಪನ್ಯಾಸಕರು ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಕಾರ್ಯಾಗಾರದಲ್ಲಿ ಪಾಲ್ಗೊಳ್ಳ ಬಯಸುವವರು ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9448422734 ಅಥವಾ 9480585000 ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ಜಿಡಗಾ ಸಿದ್ಧರಾಮ ಶ್ರೀಗಳಿಗೆ

## ಭಾರತ ರತ್ನ ನೀಡಿ ರಾಷ್ಟ್ರಪತಿಗೆ ಮನವಿ



ಬೀದರ. ಜು. 21 : ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಜಿಡಗಾ ಮಠದ ಸಿದ್ಧರಾಮ ಶಿವಯೋಗಿ ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಬೇಕು ಎಂದು ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಮನವಿ ಮಾಡಿದ್ದಾರೆ.

ಈ ಕುರಿತು ಅವರು ರಾಷ್ಟ್ರಪತಿ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಜನರಿಗೆ ಸಂಸ್ಕಾರ, ದಾಸೋಹ, ಧಾರ್ಮಿಕ ಕಾರ್ಯಗಳ ಮೂಲಕ ಶ್ರೀಗಳು ದೇಶದಲ್ಲಿ ಕಲ್ಯಾಣ ಕರ್ನಾಟಕದ ಕೀರ್ತಿ ಪಸರಿಸುವ ಕೆಲಸ ಮಾಡಿದ್ದಾರೆ. ಜಿಡಗಾವನ್ನು ಸುಕ್ಷೇತ್ರವಾಗಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಹೇಳಿದ್ದಾರೆ. ಶ್ರೇಷ್ಠ ಸಂತರಾಗಿದ್ದ ಅವರಿಗೆ ಭಾರತ ರತ್ನ ಪ್ರಶಸ್ತಿ ಕೊಟ್ಟು ಗೌರವಿಸಬೇಕು ಎಂದು ಹೇಳಿದ್ದಾರೆ.

## ಕೃಷಿ, ತೋಟಗಾರಿಕೆ ಉತ್ಪನ್ನಗಳ ಖರೀದಿ, ಮಾರಾಟ ಮೇಳ
## ರೈತರ ಉತ್ಪನ್ನಗಳಿಗೆ ಬ್ರ್ಯಾಂಡ್ ಅಗತ್ಯ : ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21-ರೈತರು ಉತ್ಪಾದಿಸಿದ ಉತ್ಪನ್ನಗಳಿಗೆ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಸಿಗಬೇಕಾದರೆ ಬ್ರ್ಯಾಂಡ್ ಅಗತ್ಯವಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನಗರದ ತೋಟಗಾರಿಕೆ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ, ತೋಟಗಾರಿಕೆ, ಕೆಪೆಕ್ ಮತ್ತು ತೋಟಗಾರಿಕೆ ವಿವಿಯ ಸಹಯೋಗದಲ್ಲಿ ಕೃಷಿ, ತೋಟಗಾರಿಕೆ ಉತ್ಪನ್ನಗಳ ಖರೀದಿದಾರರ ಮತ್ತು ಮಾರಾಟಗಾರರ ಸಮ್ಮೇಳನ-ಸಂವಾದ ಹಾಗೂ ಸಿರಿಧಾನ್ಯ ಮೇಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತ ಕಷ್ಟಪಟ್ಟು ಬೆಳೆ ಬೆಳೆಯುತ್ತಾನೆ. ಬೆಳೆ ಬಂದ ಮೇಲೆ ಉತ್ತಮ ಬೆಲೆ ಸಹ ಸಿಗುವುದಿಲ್ಲ. ಇದರಿಂದ ರೈತ ಸಂಕಷ್ಟಕ್ಕೆ ಒಳಗಾಗುತ್ತಿದ್ದಾರೆ. ಆಧುನಿಕ ಜಗತ್ತಿಗೆ ತಕ್ಕಂತೆ ಉತ್ಪನ್ನಗಳಿಗೆ ಬ್ರ್ಯಾಂಡ್ ರೂಪ ಕೊಟ್ಟು ಮಾರುಕಟ್ಟೆಗೆ ತಂದಲ್ಲಿ ಉತ್ತಮ ಬೆಲೆ ಸಿಗುತ್ತದೆ ಎಂದರು.

ಈಚಿನ ದಿನಗಳಲ್ಲಿ ಕೃಷಿಯಿಂದ ಯುವಕರು ಬಹಳಷ್ಟು ದೂರ ಉಳಿಯುತ್ತಿದ್ದಾರೆ. ಇದಕ್ಕೆ ಕಾರಣ ಕೃಷಿಯಲ್ಲಿ ಹೆಚ್ಚಿನ ಆದಾಯ ಪಡೆಯಲು ಸಾಧ್ಯವಾಗುವದಿಲ್ಲ. ಅದನ್ನು ಯಾವ ರೀತಿಯಲ್ಲಿ ಹೋಗಲಾಡಿಸಬೇಕು. ಉತ್ಪಾದನಾ ಕೇಂದ್ರಗಳು ಹೆಚ್ಚಿಗೆ ಆಗಬೇಕು. ಹುನಗುಂದ ತಾಲೂಕಿನ ಎಫ್‌ಪಿಓ 80 ಕೋಟಿ ರೂ.ಗಳ ವಹಿವಾಟು ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಇಂತಹ ಎಫ್‌ಪಿಓಗಳಿಗೆ ಪ್ರೋತ್ಸಾಹ ನೀಡುವ ಕೆಲಸವಾಗಬೇಕು. ಇಲ್ಲಿಯ ಬೆಳೆ ಹೆಚ್ಚಿನ ಉತ್ಪನ್ನಗಳು ರಫ್ತು ಆಗಬೇಕು. ಅದಕ್ಕಾಗಿ ಮಾರುಕಟ್ಟೆಗಳು ನಿರ್ಮಾಣವಾಗಬೇಕು ಎಂದರು.

ಬೀಳಗಿ ಶಾಸಕ ಜೆ.ಟಿ.ಪಾಟೀಲ ಮಾತನಾಡಿ, ರೈತರು ಬೆಳೆದ ಬೆಳೆಗೆ ಉತ್ತಮ ಬೆಲೆ ಸಿಗದೇ ಮದ್ಯವರ್ತಿಗಳಿಂದ ನಲುಗಿ ಹೋಗುತ್ತಿದ್ದಾರೆ. ಕೃಷಿ, ತೋಟಗಾರಿಕೆ ಬೆಳೆಗಳನ್ನು ಆಸಕ್ತಿಯಿಂದ ಬೆಳೆಯುತ್ತಾರೆ. ಬೆಳೆದ ಉತ್ಪನ್ನಗಳಿಗೆ ಒಳ್ಳೆಯ ಬೆಲೆ ಸಿಗಬೇಕಿದೆ. ಈ ನಿಟ್ಟಿನಲ್ಲಿ ಇಲಾಖೆ, ತೋಟವಿವಿಯು ಮಾರುಕಟ್ಟೆ ಕಲ್ಪಿಸುವ ವ್ಯವಸ್ಥೆ ಆಗಬೇಕು. ಅಂದಾಗ ರೈತ ಆರ್ಥಿಕವಾಗಿ ಬಲಿಷ್ಠರಾಗಲು ಸಾಧ್ಯವಾಗುತ್ತದೆ. ಅಲ್ಲದೇ ಇಂದಿನ ಬೆಳೆಗಳಲ್ಲಿ ಔಷಧಿಯ ಗುಣಗಳು ಹೆಚ್ಚಾಗುತ್ತಿವೆ. ಅಪ್ರಾಪ್ತ ವಯಸ್ಸಿನಲ್ಲಿಯೇ ಹೃದಯಾಘಾತಕ್ಕೆ ಒಳಗಾಗುತ್ತಿದ್ದಾರೆ. ರೈತರು ಮೂಲ ಕೃಷಿ ಒಲಿಯಬೇಕಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮಾತನಾಡಿ, ರೈತರ ಉತ್ಪನ್ನಗಳಿಗೆ ಪ್ರಚಾರ ಹೆಚ್ಚಾಗಬೇಕು. ಅಂದಾಗ ಮಾತ್ರ ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಾಗುತ್ತದೆ. ಪ್ರಚಾರದಲ್ಲಿ ವಿಫಲರಾಗುತ್ತಿದ್ದೇವೆ. ರೈತರಿಗೆ ಯೋಗ್ಯವಾದ ಪ್ರತಿಫಲ ಸಿಗುತ್ತಿಲ್ಲ. ಬೆಳೆದ ಉತ್ಪನ್ನಗಳ ಶ್ರಮಕ್ಕೆ ಪ್ರತಿಫಲ ಸಿಗುತ್ತಿಲ್ಲ. ಇದರಿಂದ ರೈತರ ಆತ್ಮಹತ್ಯೆಗಳು ಸಂಭವಿಸುತ್ತವೆ. ಇದಕ್ಕೆ ಕಾರಣ ಹುಡುಕಿ ಪರಿಹಾರ ಕಂಡುಕೊಳ್ಳುವ ಕೆಲಸವಾಗಬೇಕಿದೆ ಎಂದು ತಳಿಸಿದರು.

ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಮಾತನಾಡಿ, ಸಾಧನೆ ಮಾಡಿದ ರೈತರಿಗೆ ಸನ್ಮಾನ ಮಾಡಿ ಸೂಕ್ತ ಬಹುಮಾನ ನೀಡಬೇಕು. ಆತ್ಮಹತ್ಯೆಗೆ ಶರಣಾಗುತ್ತಿರುವ ರೈತರ ಸಾವಿನ ಕಾರಣಗಳನ್ನು ತಿಳಿದು ರೈತರನ್ನು ಉಳಿಸಿಕೊಳ್ಳುವ ಕಾರ್ಯವಾಗಬೇಕಿದೆ. ಜಿಲ್ಲೆಯ ಎಫ್‌ಪಿಓಗಳು ಮಧ್ಯಸ್ಥಿಕೆ ವಹಿಸಿ ಹೆಚ್ಚಿನ ಪ್ರಮಾಣದಲ್ಲಿ ಒಡಂಬಡಿಕೆ ಆಗುವಂತೆ ಮಾಡಬೇಕು ಎಂದರು.

ಜಿಲ್ಲಾಧಿಕಾರಿ ಸಂಗಪ ಅವರು ಸಮ್ಮೇಳನ ಕುರಿತು ಮಾತನಾಡಿದರು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಳೆದ 2024-25ನೇ ಸಾಲಿನ ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ ಪಡೆದ 10 ಜನ ರೈತರನ್ನು ಸನ್ಮಾನಿಸಿ ಪ್ರಶಸ್ತಿ ನೀಡಲಾಯಿತು. ಕಾರ್ಯಕ್ರಮ ಪೂರ್ವದಲ್ಲಿ ಕೃಷಿ, ತೋಟಗಾರಿಕೆ ಉತ್ಪನ್ನಗಳ ಪ್ರದರ್ಶನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಚಾಲನೆ ನೀಡಿದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಹಾಂತೇಶ ಹಟ್ಟಿ, ಹಾಪ್ ಕಾಮ್ಸ್‌ನ ಅಧ್ಯಕ್ಷ ಈರಪ್ಪ ಅರಕೇರಿ, ತೋಟಗಾರಿಕೆ ವಿವಿಯ ಕುಲಪತಿ ಡಾ.ವಿಷ್ಣುವರ್ಧನ, ಲಾಲ್‌ಬಾಗನ ತೋಟಗಾರಿಕೆ ಅಪರ ನಿರ್ದೇಶಕ ಡಾ.ಪಿ.ಎಂ.ಸೊಬರದ, ಕಪೆಕ್ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್.ಶಿವಪ್ರಕಾಶ, ಪ್ರಧಾನ ವ್ಯವಸ್ಥಾಪಕ ಎಚ್.ಕೆ.ಶಿವಕುಮಾರ, ಬೆಳಗಾವಿ ವಿಭಾಗದ ತೋಟಗಾರಿಕೆ ಜಂಟಿ ನಿರ್ದೇಶಕ ಐ.ಕೆ.ದೊಡ್ಡಮನಿ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ, ತೋಟಗಾರಿಕೆ ಉಪನಿರ್ದೇಶಕ ರವೀಂದ್ರ ಹಕಾಟಿ ಉಪಸ್ಥಿತರಿದ್ದರು.

## ಚಿತ್ತ ಚಂಚಲವಾದರೆ ಗುರಿ ಸಾಧನೆ ಅಸಾಧ್ಯ-ಡಾ.ಗಿರೀಶ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21-ವಿದ್ಯಾರ್ಥಿ ಜೀವನ ಬಂಗಾರದ ಜೀವನ. ಈ ಹಂತದಲ್ಲಿ ಒಳ್ಳೆಯ ಗುರಿ ಹೊಂದಿ ಏಕಾಗ್ರತೆಯಿಂದ ಅಧ್ಯಯನಶೀಲರಾಗಬೇಕು. ಚಿತ್ತ ಚಂಚಲವಾದರೆ ಗುರಿ ಸಾಧನೆ ಅಸಾಧ್ಯ ಎಂದು ಡಾ.ಗಿರೀಶ ಮಾಸೂರಕರ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಡಿ.ಹೆರಂಜಲ ಕಲಾ, ಎಸ್.ಸಕ್ರಿ ವಾಣಿಜ್ಯ, ಆರ್.ದೊಡ್ಡಿಹಾಳ ವಿಜ್ಞಾನ ಪದವಿಪೂರ್ವ ಕಾಲೇಜಿನಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಂಸ್ಕೃತಿ ಸಂಸ್ಕಾರವನ್ನು ಮೈಗೂಡಿಸಿಕೊಳ್ಳುವುದರಿಂದ ಸುಸಂಸ್ಕೃತರಾಗಿ ಬದುಕುಬಹುದು. ವಿದ್ಯಾರ್ಥಿಗಳು ಸಂಕುಚಿತತೆಯಿಂದ ಹೊರಬಂದು ಪಠ್ಯೇತರ ಚಟುವಟಿಕೆಯಲ್ಲಿ ಪಾಲ್ಗೊಂಡು ನಾಯಕತ್ವಗುಣ ಬೆಳಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ಸಂಜೀವಪ್ಪ ಆರ್.ಬಿ ಮಾತನಾಡಿ, ತೆಗೆದುಕೊಳ್ಳುವುದಕಿಂತ ಕೊಡುವುದರಲ್ಲಿ ತೃಪ್ತಿ ಇರುತ್ತದೆ. ವಿದ್ಯಾರ್ಥಿಗಳು ತಾವು ಪಡೆದ ಜ್ಞಾನವನ್ನು ಇನ್ನೊಬ್ಬರಿಗೆ ಹಂಚುವ ಮೂಲಕ ಧನ್ಯರಾಗಬೇಕು. ಪಡೆದುದನ್ನು ಸಮಾಜಕ್ಕೆ ಕೊಟ್ಟು ಸಮಾಜದ ಋಣ ತೀರಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ವಿದ್ಯಾ ಪ್ರಸಾರಕ ಮಂಡಳದ ಕಾರ್ಯಾಧ್ಯಕ್ಷೆ ಶ್ರೀಮತಿ ಶ್ರೀಲತಾ ಹೆರಂಜಲ್ ಮಾತನಾಡಿ, ಅಜ್ಞಾನದ ಅಂಧಕಾರದಿಂದ ಹೊರಬಂದು ಅಧ್ಯಯನದಿಂದ ಕನಸು ನನಸು ಮಾಡಿಕೊಂಡು ಈ ಸಂಸ್ಥೆಗೆ ಋಣ ತೀರಿಸಬೇಕು. ಸಕಾರಾತ್ಮಕ ಮನೋಭಾವನೆಯನ್ನು ಬೆಳೆಸಿಕೊಂಡು ಗುರಿ ಸಾಧನೆಗೆ ಸಿದ್ದರಾಗಬೇಕು. ಪರೀಕ್ಷೆಗಾಗಿ ಓದಿದರೆ ಫಲಿತಾಂಶಕ್ಕೆ ಮಾತ್ರ ಸೀಮಿತವಾಗುತ್ತದೆ ಆದರೆ ಪರಿಪೂರ್ಣ ಜ್ಞಾನವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 2024-25ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ನಗದು ಬಹುಮಾನ ನೀಡಲಾಯಿತು. ವಿ.ಪ್ರ.ಮಂಡಳದ ಕಾರ್ಯಕಾರಿ ಮಂಡಳಿಯ ಸದಸ್ಯರು, ಉಪನ್ಯಾಸಕರು ಇದ್ದರು.

ಪ್ರಾಚಾರ್ಯ ಅಶೋಕ ಕೆ. ಕಂದಗಲ್ಲ ಸ್ವಾಗತಿಸಿ ಪ್ರಾಸ್ಥಾವಿಕವಾಗಿ ಮಾತನಾಡಿದರು. ಜಿ.ಬಿ.ಕುಲಕರ್ಣಿ ವಂದಿಸಿದರು. ಆರ್.ಜೆ.ಬೊಮ್ಮಣಗಿ ನಿರೂಪಿಸಿದರು.

## ಜು.23 ಸ್ಮಾರ್ಟ್ ಕಾರ್ಡ ವಿತರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21-ಕಾರ್ಮಿಕ ಇಲಾಖೆ, ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾ ಆಡಳಿತ ಮತ್ತು ಜಿಲ್ಲಾ ಪಂಚಾಯತ ಸಹಯೋಗದಲ್ಲಿ ಜುಲೈ 23 ರಂದು ಮಧ್ಯಾಹ್ನ 3 ಗಂಟೆಗೆ ನವನಗರದ ಕಲಾಭವನದಲ್ಲಿ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ ವಿತರಣೆ ಮತ್ತು ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಮಿಕ ಇಲಾಖೆ ಸಚಿವ ಸಂತೋಷ್ ಲಾಡ್ ಕಾರ್ಯಕ್ರಮ ಉದ್ಘಾಟಿಸುವರು. ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಉಪಸ್ಥಿತರಿರುವರು. ಅಧ್ಯಕ್ಷತೆಯನ್ನು ಶಾಸಕ ಎಚ್.ವಾಯ್.ಮೇಟಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

## ನಾಳೆ ಬಾಗಲಕೋಟೆ ಜಿಲ್ಲೆಗೆ ಸಚಿವ ಸಂತೋಷ್ ಲಾಡ್


ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21-ಕಾರ್ಮಿಕ ಇಲಾಖೆ ಸಚಿವ ಸಂತೋಷ್ ಎಸ್. ಲಾಡ್ ಅವರು ಜುಲೈ 23 ರಂದು ಬಾಗಲಕೋಟೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಬುಧವಾರ ಮಧ್ಯಾಹ್ನ 2.30ಕ್ಕೆ ನವನಗರದ ಕಲಾಭವನದಲ್ಲಿ ಜಿಲ್ಲೆಯ ವಿವಿಧ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ ವಿತರಣೆ ಮತ್ತು ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಾಯಂಕಾಲ 4.30ಕ್ಕೆ ಹುಬ್ಬಳ್ಳಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಗಡಿ ಭಾಗದ ಮುಸ್ಲೇಪಲ್ಲಿ ಅಂಗನವಾಡಿ ಶಾಲೆಗೆ ಹಿಡಿದ ಗ್ರಹಣ.

## ಶಿಶು ಅಭಿವೃದ್ಧಿ ಯೋಜನಾಧಿಕಾರಿಯವರ ಕರ್ತವ್ಯ ಲೋಪ ಸ್ಪಷ್ಟವಾಗಿ ಕಾಣುತ್ತಿದೆ - ಶರಣಬಸಪ್ಪ ಎಲ್ಹೇರಿ.




ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್/ಮಿನಸಪೂರ್: ಜುಲೈ 21. ಗುರುಮಠಕಲ್ ತಾಲೂಕಿನ ಮಿನಸಪೂರ್ ಗ್ರಾಮ ಪಂಚಾಯತಿಯಲ್ಲಿ ವ್ಯಾಪ್ತಿಯಲ್ಲಿ ಬರುವ ಮುಸ್ಲೇಪಲ್ಲಿ ಗ್ರಾಮದ ಅಂಗನವಾಡಿ ಕೇಂದ್ರ ಕಳೆದ ಒಂದು ವಾರದಿಂದ ಗ್ರಾಮಸ್ಥರು ಅಂಗನವಾಡಿ ಕಾರ್ಯಕರ್ತೆಯರ ನೇಮಕಾತಿ ಗೊಂದಲದಿಂದ ಬೇಸತ್ತ ಗ್ರಾಮಸ್ಥರು ಒಂದು ವಾರದಿಂದ ಅಂಗನವಾಡಿ ಬೀಗ ಹಾಕಿರುವದು ಈಗ ಚರ್ಚೆಗೆ ಕಾರಣವಾಗಿದೆ. ಗಂಡ ಹೆಂಡಿರ ಜಗಳದ ನಡುವೆ ಬಡವಾದ ಕೂಸು ಈ ಗಾದೆ ಮುಸ್ಲೇಪಲ್ಲಿ ಅಂಗನವಾಡಿ ಕಾರ್ಯಕರ್ತೆಯರ ವಿಚಾರವಾಗಿ ಮಕ್ಕಳಿಗೆ ತೊಂದರೆ ಆಗುವಂತೆ ಆಗಿದೆ. ಅಂಗನವಾಡಿ ಕೇಂದ್ರ ಹಾಗೂ ಕಾರ್ಯಕರ್ತೆಯವರ ಮುಖ್ಯ ಕಾರ್ಯಗಳಾದ ಚಿಕ್ಕ ಮಕ್ಕಳ ಆರೈಕೆ ಮಾಡುವುದು, ಅವರಿಗೆ ಆಟದ ಮೂಲಕ ಕಲಿಕೆ ಮತ್ತು ಬೆಳವಣಿಗೆಗೆ ಸಹಾಯ ಮಾಡುವುದು, ಮತ್ತು ಶಾಲಾಪೂರ್ವ ಶಿಕ್ಷಣ ನೀಡುವುದು, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಪೌಷ್ಟಿಕ ಆಹಾರ ಮತ್ತು ಪೂರಕ ಆಹಾರಗಳನ್ನು ಒದಗಿಸುವುದು, ಮತ್ತು ಮಕ್ಕಳಲ್ಲಿ ಅಪೌಷ್ಟಿಕತೆಯನ್ನು ತಡೆಗಟ್ಟುವುದು. ಆರೋಗ್ಯ ಸೇವೆಯಾಗಿರುವ ಲಸಿಕೆ ಹಾಕುವ ಕಾರ್ಯಕ್ರಮಗಳನ್ನು ಆಯೋಜಿಸುವುದು, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಆರೋಗ್ಯ ತಪಾಸಣೆಗಳನ್ನು ಮಾಡುವುದು, ಮತ್ತು ಅಗತ್ಯವಿದ್ದಾಗ ವೈದ್ಯಕೀಯ ಚಿಕಿತ್ಸೆಗಾಗಿ ಉಲ್ಲೇಖಿಸುವುದು. ಸಮುದಾಯದಲ್ಲಿ ಆರೋಗ್ಯ ಮತ್ತು ನೈರ್ಮಲ್ಯದ ಬಗ್ಗೆ ಅರಿವು ಮೂಡಿಸುವುದು, ಸರ್ಕಾರದ ಯೋಜನೆಗಳು ಮತ್ತು ಸೇವೆಗಳನ್ನು ಪಡೆಯಲು ಜನರಿಗೆ ಸಹಾಯ ಮಾಡುವುದರ ಮುಖಾಂತರ ಜಾಗೃತಿ ಮೂಡಿಸುವದು. ಪ್ರತಿ ಮನೆಯವರ ವಿವರಗಳನ್ನು ದಾಖಲಿಸುವುದು, ಜನನ, ಮರಣ ಮತ್ತು ಆರೋಗ್ಯಸ್ಥಿತಿಯ ದಾಖಲೆಗಳನ್ನು ಇಟ್ಟುಕೊಳ್ಳುವುದು ಮುಖ್ಯ ಉದ್ದೇಶವಾಗಿದೆ.

ಆದರೆ ಮುಸ್ಲೇಪಲ್ಲಿ ಅಂಗನವಾಡಿ ಕೇಂದ್ರದಲ್ಲಿ ಈಗ ನೇಮಕವಾಗಿರುವ ಚೌಡಮ್ಮ ಅವರಿಗೆ ಕರ್ತವ್ಯ ನಿರ್ವಹಿಸಲು ಅಲ್ಲಿ ಉಸ್ತುವಾರಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಮಮತ ಎನ್ನುವವರು ಹಸ್ತಾಂತರ ಮಾಡದೇ ಇರುವ ಕಾರಣ ಕಳೆದ 12 ನೇಯ ತಾರೀಖಿನಿಂದ ಗ್ರಾಮದ ಸಾರ್ವಜನಿಕರು ಬೀಗ ಹಾಕಿದ್ದಾರೆ.

> ಒಂದು ವಾರದಿಂದ ಬೀಗ ಹಾಕಿದ್ದರು, ಸಮಸ್ಯೆ ಬಗೆಹರಿಸುವ ಪ್ರಯತ್ನ ಮಾಡದೇ ಇರುವದು ಶಿಶು ಅಭಿವೃದ್ಧಿ ಯೋಜನಾಧಿಕಾರಿಯವರ ಕರ್ತವ್ಯ ಲೋಪ ಎದ್ದು ಕಾಣುತ್ತಿದೆ
> **- ಶರಣಬಸಪ್ಪ ಎಲ್ಹೇರಿ ಕ.ರ.ಕರವೇ ಗುರುಮಠಕಲ್**

> ಮೊಬೈಲ್ ಹಾಗೂ ಅಂಗನವಾಡಿ ಸೀಲ್ ನೀಡದೆ, ದೈನಂದಿನ ಚಟುವಟಿಕೆಗಳಾದ ಎಫ್, ಆರ್,ಎಸ್ ಮಾಡುವದು, ಮಾತೃ ವಂದನಾ, ಮಾತಾಶ್ರೀ ಅರ್ಜಿ ಹಾಕಲು ಸಾಧ್ಯವಾಗುತ್ತಿಲ್ಲ ದಯವಿಟ್ಟು ಮೇಲಾಧಿಕಾರಿಗಳು ತ್ವರಿತ ಗತಿಯಲ್ಲಿ ಸಮಸ್ಯೆ ಬಗೆಹರಿಸಲು ಚೌಡಮ್ಮ ಕಾರ್ಯಕರ್ತೆಯ ಅಳಲು.

> ಮಕ್ಕಳು, ಗರ್ಭಿಣಿ ಮಹಿಳೆಯರಿಗೆ ಉಪಯೋಗವಾಗಬೇಕಿದ್ದ ಅಂಗನವಾಡಿ ಕೇಂದ್ರ ಆದಷ್ಟು ಬೇಗ ಪ್ರಾರಂಭವಾಗಿ ಕಾರ್ಯನಿರ್ವಹಿಸಬೇಕು ಎನ್ನುವದು ನಮ್ಮ ಆಶಯ.

## ಕಳಪೆ ರಸ್ತೆ ಕಾಮಗಾರಿ ಕುರಿತು ಮಲ್ಲಮ್ಮ ನುಡಿ ಪತ್ರಿಕೆ ವರದಿ ಫಲದಾಯಕ: ದುರಸ್ತಿ ಕಾರ್ಯ ಆರಂಭಿಸಿದ ಅಧಿಕಾರಿಗಳು

(ಎಂ.ರಫೀಕ್)






ಯಾದಗಿರಿ : ಕೋಟಗೆರೆ ಗ್ರಾಮದಿಂದ ಕೆ ಹೊಸಳ್ಳಿ. ಮಲ್ಲಮ್ಮ ನುಡಿ ಪತ್ರಿಕೆಯಲ್ಲಿ "ಕಳಪೆ ರಸ್ತೆಯ ಕಾಮಗಾರಿಗೆ ಅಧಿಕಾರಿಗಳ ನಿರ್ಲಕ್ಷ್ಯ!" ಎಂಬ ಶೀರ್ಷಿಕೆಯಲ್ಲಿ ಪ್ರಕಟಿತ ಸುದ್ದಿಗೆ ಆಡಳಿತ ತಕ್ಷಣ ಸ್ಪಂದಿಸಿದ್ದು, ಈಗ ಅವರು ದುರಸ್ತಿ ಕಾರ್ಯವನ್ನು ಆರಂಭಿಸಿದ್ದಾರೆ.

ಕೊಟ್ಗೇರಾ ಗ್ರಾಮದ ಹತ್ತಿರದ ಮುಖ್ಯ ರಸ್ತೆಯಲ್ಲಿ ಕಳೆದ ಕೆಲವು ದಿನಗಳಿಂದ ನಡೆಯುತ್ತಿದ್ದ ಕಾಮಗಾರಿ ಬಗ್ಗೆ ಪತ್ರಿಕೆವೊಂದರಲ್ಲಿ ವರದಿ ಪ್ರಕಟವಾದ ಬೆನ್ನಲ್ಲೇ ಸ್ಥಳಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ನಂತರ ತಕ್ಷಣವೇ ರಸ್ತೆಯ ದುರಸ್ತಿ ಕಾರ್ಯಕ್ಕೆ ಚಾಲನೆ ನೀಡಲಾಗಿದೆ.

### ಫಲಶ್ರುತಿ

ಜುಲೈ 18 ರಂದು ನಡೆದ ಈ ಕಾರ್ಯದಲ್ಲಿ ಜೆಸಿಬಿ ಯಂತ್ರದ ಸಹಾಯದಿಂದ ರಸ್ತೆ ಉಗುರು ತೆಗೆಯುವ ಹಾಗೂ ಹೊಸದಾಗಿ ಜಲ್ಲಿಕಲ್ಲು ಹಾಕುವ ಕೆಲಸಗಳು ನಡೆಯುತ್ತಿದ್ದು, ಸ್ಥಳೀಯ ಕಾರ್ಮಿಕರೂ ಕೈಜೋಡಿಸಿದ್ದಾರೆ. ಸ್ಥಳೀಯರು ಈ ತ್ವರಿತ ಕ್ರಮವನ್ನು ಮೆಚ್ಚಿದ್ದಾರೆ.

> **ಪತ್ರಿಕೆಯ ಬಗ್ಗೆ ಮೆಚ್ಚುಗೆ**
> ಸ್ಥಳೀಯರು ಹೇಳುವಂತೆ: "ಪತ್ರಿಕೆಯಲ್ಲಿ ಸುದ್ದಿ ಬರುವವರೆಗೆ ನಮ್ಮ ದೂರುಗಳಿಗೆ ಸ್ಪಂದನೆ ಆಗಿಲ್ಲ. ಇದೀಗ ಕೆಲಸ ಆರಂಭವಾಗಿದೆ ಎಂಬುದು ಸಂತಸದ ವಿಷಯ."

### ಅಮೃತ ಯೋಜನೆ ಮೂರು ಪುರಸಭೆಗಳಿಗೆ ವರದಾನ

## ಕಾಮಗಾರಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಶಾಸಕ ಪಾಟೀಲ್ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:- ಚಿಟಗುಪ್ಪ ಮತ್ತು ಹಳ್ಳಿಖೇಡ (ಬಿ) ಪುರಸಭೆ ವ್ಯಾಪ್ತಿಯ ನಗರಾಭಿವೃದ್ಧಿ ಇಲಾಖೆಯ ಮತ್ತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧಿಕಾರಿಗಳೊಂದಿಗೆ ಕ್ಷೇತ್ರದ ಶಾಸಕ ಡಾ. ಸಿದು ಪಾಟೀಲ ರವರು ಇಲ್ಲಿಯ ತಾಲೂಕ ಪಂಚಾಯತ್ ಸಭಾಂಗಣದಲ್ಲಿ ಯೋಜನೆ ಪ್ರಗತಿ ಪರಿಶೀಲನೆ ಮಾಡಿದರು. ಮೂರು ಪುರಸಭೆಯ ಪಟ್ಟಣಗಳಲ್ಲಿ ಪ್ರಗತಿಯಲ್ಲಿರುವ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿರುವ " ಅಮೃತ ಯೋಜನೆ .02 " ಯೋಜನೆಯ ಕಾಮಗಾರಿಯಯನ್ನು ಪರಿಶೀಲನೆ ಮಾಡಿ ಬಹುಬೇಗ ಪೂರ್ಣಗೊಳಿಸಲು ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚಿಸಿದರು. ಕಾಮಗಾರಿಯನ್ನು ಕಾಲಮಿತಿ ಒಳಗಾಗಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಗುಣಮಟ್ಟದ ನೀರನ್ನು ಒದಗಿಸಲು ಮಹತ್ವದ ಜವಾಬ್ದಾರಿ ತಮ್ಮೆಲರ ಹೊಣೆಯಾಗಿದೆ ಎಂದರು. ಅಧಿಕಾರಿಗಳೊಂದಿಗೆ ಚರ್ಚಿಸಿ, ಕೇಂದ್ರ ಸರ್ಕಾರದ ಈ ಯೋಜನೆಯ ತ್ವರಿತ ಅನುಷ್ಠಾನಕ್ಕೆ ಸೂಚನೆ ನೀಡಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಕಾರ್ಯನಿರ್ವಾಹಕ ಅಭಿಯಂತರ ನರಸಿಂಹ ರೆಡ್ಡಿ , ಸಹಾಯಕ ಕಾರ್ಯ ನಿರ್ವಾಹಕ ಅಧಿಕಾರಿ ವಿಜಯ ಕುಮಾರ, ಜ್ಯೋತಿ ಪಾಟೀಲ, ಸಂದೀಪ, ಶ್ರೀನಿವಾಸ , ಪುರಸಭೆಯ ಮುಖ್ಯಾಧಿಕಾರಿಗಳಾದ ವನಿತಾ, ಹುಸಾಮುದ್ದೀನ್ ಬಾಬಾ, ನಿಂಗಪ್ಪ ,ಪುರಸಭೆಯ ಸದಸ್ಯರಾದ ಸುನೀಲ ಪಾಟೀಲ , ವಿಜಯಕುಮಾರ ದುರ್ಗಾ, ರಮೇಶ ಕಲ್ಲೂರ, ಧನಲಕ್ಷ್ಮೀ ಗೋರಪಾಡೆ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

### ರಕ್ತದಾನ ಮಾಡಿ ಜೀವ ಉಳಿಸಿ : ಪಂಪನಗೌಡ ಕರೆ

## ಜಿಲ್ಲಾ ಕಾಂಗ್ರೆಸ್ ಕಚೇರಿ ಖರ್ಗೆ ಜನುಮ ದಿನ - ರಕ್ತದಾನ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ರಕ್ತದಾನ ಮಾಡುವ ಮೂಲಕ ಅಮೂಲ್ಯ ಜೀವಗಳನ್ನು ಉಳಿಸಬೇಕೆಂದು

ಕಾಂಗ್ರೆಸ್ ಪಕ್ಷದ ಯುವ ಮುಖಂಡ ಪಂಪನಗೌಡ ಚನ್ನಾರಡ್ಡಿ ಪಾಟೀಲ್ ತುನ್ನೂರು ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಸೋಮವಾರ ಎಐಸಿಸಿ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ ಅವರ ಜನುಮ ದಿನವನ್ನು ಆಚರಿಸಿ, ರಕ್ತದಾನ ಶಿಬಿರ-ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.


ಇಂದು ರಕ್ತಹಿನತೆಯಿಂದ ಬಳಲುವವರ ಸಂಖ್ಯೆ ಅಧಿಕವಾಗಿದೆ. ಅನಾರೋಗ್ಯದಿಂದ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಾದ ರೋಗಿಗಳಿಗೂ ರಕ್ತದ ಕೊರತೆ ಇದ್ದು, ಈ ಮೂಲಕ ರಕ್ತದಾನ ಶಿಬಿರ ಆಯೋಜಿಸಿ ಅನುಕೂಲ ಮಾಡಿಕೊಡಲಾಗುವುದೆಂದರು.

ರಕ್ತ ನೀಡುವುದರಿಂದ ಹೊಸ ರಕ್ತ ಉತ್ಪತ್ತಿಯಾಗಿ ಮನುಷ್ಯನಿಗೆ ಹೊಸ ಚೈತನ್ಯ ಬರುತ್ತದೆ. ಹೀಗಾಗಿ ರಕ್ತ ನೀಡಲು ಹಿಂಜರಿಕೆ ಮಾಡಬಾರದೆಂದು ಪಂಪನಗೌಡ ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಬಸ್ಸುಗೌಡ ಬಿಳ್ಹಾರ್, ಮಲ್ಲಣ್ಣ ದಾಸನಕೇರಿ, ಅನೀಲ್ ಹೆಡಗಿಮದ್ರಿ, ಮರೆಪ್ಪ ಬಿಳ್ಹಾರ್, ಮಲ್ಲಿಕಾರ್ಜುನ ಈಟೆ, ಸುರೇಶ ಮಡ್ಡಿ, ತಿಮ್ಮಣ್ಣ ನಾಯಕ, ಸಾಬಣ್ಣ ಬಾಡಿಯಾಳ್, ಮಲ್ಲಯ್ಯ ಕಸಬಿ, ಬಸವರಾಜ ಬುಡಯಿ, ಗುರುನಾಥ ರೆಡ್ಡಿ, ಬಾಪು ಗೌಡ ಮಾಚನೂರ್, ಮೈನುದ್ದೀನ್ ಮಿರ್ಚಿ, ಸೋಮಶೇಖರ ಮಸಕನಳ್ಳಿ ಶರಣಗೌಡ ಮಾಲಿಪಾಟೀಲ್. ಅಮರೇಶ ಜಾಕಾ, ಜಿಲ್ಲಾ ಕ್ಷಯ-ರೋಗ ನಿಯಂತ್ರಣಾಧಿಕಾರಿ ಡಾ. ಸಂಜೀವಕುಮಾರ ರಾಯಚೂರಕರ್, ತಾಲೂಕು ಆರೋಗ್ಯ ಅಧಿಕಾರಿ ಡಾ. ಹಣಮಂತರೆಡ್ಡಿ ಸೇರಿದಂತೆ ಮತ್ತಿತರರು ಇದ್ದರು.

ಸುಮಾರು 25 ಕ್ಕೂ ಹೆಚ್ಚು ಜನರು ರಕ್ತದಾನ ಮಾಡಿದರು.

## 1.48 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.21-ಮಗಳ ಮದುವೆಗೆಂದು ಮನೆಯಲ್ಲಿ ಇರಿಸಿದ್ದ 1.48 ಲಕ್ಷ ರೂ.ಮೌಲ್ಯದ ನಗನಾಣ್ಯವನ್ನು ಕಳ್ಳರು ಕಳವು ಮಾಡಿರುವ ಘಟನೆ ಇಲ್ಲಿನ ಕಮಲ ನಗರದಲ್ಲಿ ನಡೆದಿದೆ.

ಬಸವರಾಜ ಪಾಟೀಲ ಎಂಬುವವರ ಮನೆ ಬೀಗ ಮುರಿದು ಕಳ್ಳರು 40 ಸಾವಿರ ರೂ.ಮೌಲ್ಯದ 8 ಗ್ರಾಂ.ಬಂಗಾರದ ಬ್ರಾಸಲೆಟ್, 35 ಸಾವಿರ ರೂ.ಮೌಲ್ಯದ 7 ಗ್ರಾಂ.ಬಂಗಾರದ ಝುಮಕಿ, 20 ಸಾವಿರ ರೂ.ಮೌಲ್ಯದ 4 ಗ್ರಾಂ.ಬಂಗಾರದ ಉಂಗುರ, 53 ಸಾವಿರ ರೂ.ನಗದು ಸೇರಿ 1.48 ಲಕ್ಷ ರೂ. ಮೌಲ್ಯದ ನಗನಾಣ್ಯವನ್ನು ಕಳವು ಮಾಡಿದ್ದಾರೆ.

ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:8971850542

# ಮಾಧ್ಯಮ ಅಕಾಡೆಮಿಯಿಂದ ಫೆಲೋಷಿಪ್‌ಗೆ : ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.21–ಕರ್ನಾಟಕ ಮಾಧ್ಯಮ ಅಕಾಡೆಮಿಯ ವತಿಯಿಂದ ಪತ್ರಕರ್ತರಿಗೆ ಆರು ವಿಷಯಗಳ ಕುರಿತ ಫೆಲೋಷಿಪ್‌ಗೆ ಅರ್ಜಿ ಆಹ್ವಾನಿಸಲಾಗಿದೆ.

ಅಕಾಡೆಮಿಯ ಸಾಮಾನ್ಯ ಆಯವ್ಯಯದಡಿ ಎರಡು, ಮಹಿಳಾ ಆಯವ್ಯಯದಡಿ ಎರಡು ಹಾಗೂ ಪರಿಶಿಷ್ಟ ಜಾತಿ ಉಪಯೋಜನೆಯಡಿ ಒಂದು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ ಒಂದು ಫೆಲೋಷಿಪ್ ನೀಡಲಾಗುವುದು.

ಕನಿಷ್ಠ ಐದು ವರ್ಷ ಸೇವಾನುಭವ ಹೊಂದಿರುವ, ಕನಿಷ್ಠ 30 ವರ್ಷದಿಂದ 50 ವರ್ಷ ವಯೋಮಿತಿಯ ಪತ್ರಕರ್ತರು ಫೆಲೋಷಿಪ್‌ಗೆ ಅರ್ಜಿ ಸಲ್ಲಿಸಬಹುದು.

ಪತ್ರಕರ್ತರು ಪದವೀಧರರಾಗಿರಬೇಕು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳು ಹಾಗೂ ಉಪಗ್ರಹ ಸುದ್ದಿವಾಹಿನಿಗಳಲ್ಲಿ ಕಾರ್ಯನಿರ್ವಹಿಸುತ್ತಿರಬೇಕು. ಈ ಕುರಿತು ಸಂಪಾದಕರ ದೃಢೀಕರಣ ಪತ್ರ ಸಲ್ಲಿಸಬೇಕು.

*ಫೆಲೋಷಿಪ್‌ನ ವಿಷಯಗಳು:

ಬಾಲ್ಯವಿವಾಹ, ಪೋಕ್ಸೋ, ಮರ್ಯಾದೆಗೇಡು ಹತ್ಯೆ–ಮಾಧ್ಯಮ ದೃಷ್ಟಿಕೋನ. ಕೃಷಿ ಸಂವಹನ–ಒಂದು ಅಧ್ಯಯನ. ಕಲ್ಯಾಣ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿಯಲ್ಲಿ ಮಾಧ್ಯಮಗಳ ಪಾತ್ರ. ಬುಡಕಟ್ಟು ಕಾಯ್ದೆಗಳು ಹಾಗೂ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ–ಮಾಧ್ಯಮ ನೋಟ. Role of Media in creating awareness on cybercrime and digital safety (ಇಂಗ್ಲಿಷ್‌ನಲ್ಲಿ ಅಧ್ಯಯನ ವರದಿ ಸಲ್ಲಿಸುವುದು). ಮಾಧ್ಯಮ ಶಿಕ್ಷಣ ಮತ್ತು ವೃತ್ತಿ ನಡುವಿನ ಅಂತರ: ಕಾರಣಗಳು, ಪರಿಣಾಮ ಹಾಗೂ ಪರಿಹಾರ.

ಫೆಲೋಷಿಪ್ ಅವಧಿ ಆರು ತಿಂಗಳು. ಅರ್ಜಿ ಸ್ವೀಕರಿಸಲು ಆಗಸ್ಟ್ 2 ಕೊನೆಯ ದಿನವಾಗಿದ್ದು, ವಿಜೇತರ ಆಯ್ಕೆಯಲ್ಲಿ ಅಕಾಡೆಮಿಯ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ಅರ್ಜಿ ನಮೂನೆಯನ್ನು ಅಕಾಡೆಮಿಯ ವೆಬ್‌ಸೈಟ್ mediaacademy.karnataka.gov.in ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಪೂರಕ ದಾಖಲೆಗಳು ಹಾಗೂ ಅಧ್ಯಯನ ಕುರಿತ ಟಿಪ್ಪಣಿಯೊಂದಿಗೆ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು 560001 ಇವರಿಗೆ ಕಳುಹಿಸಬಹುದು ಅಥವಾ kmafellowship2025@gmail.com ಗೆ ಇ–ಮೇಲ್ ಮೂಲಕ ಕಳಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರಗಳ ಬಳಕೆ ಮಾಡಿ : ಗುಳಪ್ಪ ಕೊಳಜಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ತಾಲೂಕಿನ ಮುಂಗಾರು ಹಂಗಾಮಿನ ಹೆಸರು, ಮೆಕ್ಕೆಜೋಳ, ತೊಗರಿ, ಶೇಂಗಾ, ಅಲಸಂಧಿ, ನವಣೆ ಸೂರ್ಯಕಾಂತಿ ಬೀತನೆಯಾಗಿದು

ಕುಕನೂರ ಹೋಬಳಿ ವ್ಯಾಪ್ತಿಯ ಮಸಹಂಚಿನಾಳ, ತಳಕಲ್ಲ, ಕುಕನೂರ, ಮಂಡಲಗೇರಿ, ಇಟಗಿ, ಭಾನಾಪುರ, ಬೆಣಕಲ್ಲ , ಯರೇಹಂಚಿನಾಳ, ವೀರಾಪುರ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೆಸರು, ಮೆಕ್ಕೆಜೋಳ, ತೊಗರಿ, ಅಲಸಂಧಿಯಲ್ಲಿ ಕಂಡುಬರುವ ಪ್ರಮುಖ ಕೀಟ ಮತ್ತು ರೋಗಭಾಧೆ ಕುರಿತು ಮುಂಜಾಗೃತೆ ಕ್ರಮದ ಬಗ್ಗೆ ನಾನೋ ಯೂರಿಯಾ ರಸಗೊಬ್ಬರದ ಮಹತ್ವದ ಬಗ್ಗೆ ಮತ್ತು ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರಗಳ ಬಳಕೆಯ ಬಗ್ಗೆ ರೈತ ಸಂಪರ್ಕ ಕೇಂದ್ರ ಕುಕನೂರ ಕೃಷಿ ಸಂಜೀವಿನಿ ವಾಹನದ ಮೂಲಕ ಪ್ರಚಾರ ಮಾಡಿದರು.

ರೈತ ಸಂಪರ್ಕ ಕೇಂದ್ರದ ಸಿಬ್ಬಂದಿ ಗೂಳಪ್ಪ ಕೊಳಜಿ ಮಾತನಾಡುತ್ತಾ ಸಂಯುಕ್ತ ರಸಗೊಬ್ಬರ ಬಳಕೆ ಬಗ್ಗೆ ಮಾಹಿತಿ ನೀಡಿ ಮಾತನಾಡಿ ನ್ಯಾನೊ ಯೂರಿಯಾ ಒಂದು ದ್ರವ ರೂಪದ ರಸಗೊಬ್ಬರವಾಗಿದೆ. ಇದು ಸಾಂಪ್ರದಾಯಿಕ ಯೂರಿಯಾ ಗೊಬ್ಬರಕ್ಕಿಂತ 8 ರಿಂದ 10 ಪಟ್ಟು ಪರಿಣಾಮಕಾರಿಯಾಗಿದ್ದು ಬೆಳೆಗಳಿಗೆ ತ್ವರಿತ ಪೋಷಕಾಂಶ ನೀಡುತ್ತದೆ. ನ್ಯಾನೋ ಯೂರಿಯಾ ಬಳಸಿದರೆ ಸಾಂಪ್ರದಾಯಿಕ ಗ್ರಾನುಲರ್ ಯೂರಿಯಾ ಬಳಕೆ 50 ರಷ್ಟು ಕಡಿಮೆ ಮಾಡಬಹುದು. ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರಗಳನ್ನು ಬಳಕೆಮಾಡಬಹುದು.

ಸಸ್ಯಗಳ ಬೆಳವಣಿಗೆಗೆ ಮತ್ತು ಅಭಿವೃದ್ಧಿಗೆ 17 ಪೋಷಕಾಂಶಗಳ ಅಗತ್ಯವಿರುತ್ತದೆ. ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶಗಳ ಒದಗಿಸುವ ಯೂರಿಯಾ ಹಾಗೂ ಡಿಎಪಿ ಯನ್ನು ರೂಢಿಗತವಾಗಿ ಬಳಸುತ್ತಿದ್ದು ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರ ಇರುತ್ತದೆ

ಆದರೆ ಬೆಳೆಗಳಿಗೆ ಬರಿ ರೋಗನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಂಶ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ರೀತಿಯ ಸಾರಜನಕ, ರಂಜಕ ಮತ್ತು ಪೋಟ್ಯಾಶಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು ಶೀಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ

ಬಳಸಬಹುದಾಗಿದೆ ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ ಡಿಎಪಿ ರಸಗೊಬ್ಬರಕ್ಕೆ ಪರ್ಯಾಯವಾಗಿಗಂಧಕೊದಗಿಸುವ 20–20–0–13 ಮತ್ತು ಪೋಟ್ಯಾಷ್ ಒದಗಿಸುವ 15–15–15,10–26–26 ಇತ್ಯಾದಿ ರಸಗೊಬ್ಬರಗಳನ್ನು ಸಹ ಬಳಸಬಹುದಾಗಿದೆ ಎಂದರು. ಈ ಸಂದರ್ಭದಲ್ಲಿ ರೈತ ಸಂಪರ್ಕ ಕೇಂದ್ರದ ಸಿಬ್ಬಂದಿ , ಕೃಷಿ ಸಂಜೀವಿನಿ ಸಿಬ್ಬಂದಿ ಹನುಮವ್ವ, ಸೇರಿದಂತೆ ವಿವಿಧ ಗ್ರಾಮಗಳ ರೈತರು ಇದ್ದರು.

## ಇಎಸ್‌ಇ ದಲ್ಲಿ ನೋಂದಣಿಯಾಗದ ಉದ್ಯೋಗದಾತರು,

# ಉದ್ಯೋಗಿಗಳಿಗೆ ನೋಂದಣಿಗೆ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 21– ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ಮತ್ತು ಕ್ರೀಡಾ ಸಚಿವರಾದ ಡಾ. ಮನ್ಸುಖ್ ಮಾಂಡವೀಯ ಅವರ ಅಧ್ಯಕ್ಷತೆಯಲ್ಲಿ ಹಿಮಾಚಲಪ್ರದೇಶದ ಶಿಮ್ಲಾದಲ್ಲಿ ನಡೆದ ಕಾರ್ಮಿಕರ ರಾಜ್ಯ ವಿಮಾ ನಿಗಮದ 196ನೇ ಸಭೆಯಲ್ಲಿ ಕಾರ್ಮಿಕರ ರಾಜ್ಯ ವಿಮಾ ನಿಗಮವು (ಇಎಸ್‌ಐಸಿ) ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ–2025ರ ಎಂಬ ನವೀಕೃತ ಯೋಜನೆಯನ್ನು ಇತ್ತೀಚೆಗೆ ಅನುಮೋದಿಸಲಾಯಿತು.

ಕಾರ್ಮಿಕರ ರಾಜ್ಯ ವಿಮಾ ನಿಗಮವು ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಅನುಮೋದಿಸಿದ ಒಂದು ವಿಶೇಷ ಉಪಕ್ರಮವಾಗಿದೆ. 2025ರ ಜುಲೈ 1ರಿಂದ 2025ರ ಡಿಸೆಂಬರ್ 31ರವರೆಗೆ ಸಕ್ರಿಯವಾಗಿದ್ದು, ಗುತ್ತಿಗೆ ಹಾಗೂ ತಾತ್ಕಾಲಿಕ ಕಾರ್ಮಿಕರು ಸೇರಿದಂತೆ ಇಎಸ್‌ಇ ಅಡಿಯಲ್ಲಿ ಇನ್ನೂ ನೋಂದಾವಣೆಯಾಗದ ಉದ್ಯೋಗದಾತರು ಮತ್ತು ಉದ್ಯೋಗಿಗಳು ಯಾವುದೇ ಪರಿಶೀಲನೆ ಅಥವಾ ಹಿಂದಿನ ಅವಧಿಯ ಯಾವುದೇ ಬಾಕಿಯ ಬೇಡಿಕೆ ಇಲ್ಲದೇ ನೋಂದಾಯಿಸಿಕೊಳ್ಳಲು ಒಂದು ಬಾರಿಯ ಅವಕಾಶವನ್ನು ಒದಗಿಸಲಾಗಿದೆ.

ಎಸ್‌ಪಿಆರ್‌ಇಇ 2025ರ ಅಡಿಯಲ್ಲಿ: ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮ್ ಸುವಿಧಾ, ಮತ್ತು ಎಂಸಿಎ ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು. ಉದ್ಯೋಗದಾತರು ತಾವು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಪರಿಗಣಿಸಲಾಗುತ್ತದೆ. ನೋಂದಣಿಯ ಪೂರ್ವ ಅವಧಿಗೆ ಯಾವುದೇ ವಂತಿಗೆ ಮತ್ತು ಸೌಲಭ್ಯವನ್ನು ಅನ್ವಯಿಸುವುದಿಲ್ಲ. ನೋಂದಣಿಯ ಪೂರ್ವ ಅವಧಿಯ ಯಾವುದೇ ದಾಖಲೆಗಳ ಪರಿಶೀಲನೆ ಅಥವಾ ಬೇಡಿಕೆ ಇರುವುದಿಲ್ಲ.

ಈ ಯೋಜನೆಯು ಸ್ವಯಂಪ್ರೇರಿತವಾದ ಅನುಸರಣೆಯನ್ನು ಪ್ರೋತ್ಸಾಹಿಸಿ ಹಿಂದಿನ ಅವಧಿಗೆ ದಂಡ ಪಾವತಿಸಬೇಕಾದ ಭಯವನ್ನು ಹೋಗಲಾಡಿಸಿ ನೋಂದಾವಣೆಯ ಪ್ರಕ್ರಿಯೆಯನ್ನು ಸರಳೀಕರಿಸಲಾಗಿದೆ. ಎಸ್‌ಪಿಆರ್‌ಇಇ 2025ನ್ನು ಅನುಮೋದಿಸುವ ಮೊದಲು ನಿಗಧಿತ ಅವಧಿಯಲ್ಲಿ ನೋಂದಾವಣೆ ಮಾಡದಿದ್ದಲ್ಲಿ ಕಾನೂನು ಕ್ರಮ ಹಾಗೂ ಹಿಂದಿನ ಅವಧಿಯ ಬಾಕಿ ಬೇಡಿಕೆಗೆ ಕಾರಣವಾಗುತ್ತಿತ್ತು. ಎಸ್‌ಪಿಆರ್‌ಇಇ 2025 ಈ ಅಡೆತಡೆಗಳನ್ನು ನಿವಾರಿಸಿ ನೋಂದಾವಣೆಯಿಂದ ಬಿಟ್ಟುಹೋದ ಘಟಕಗಳು ಮತ್ತು ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿಯೊಳಗೆ ಸೇರಿಸಿ ಸಾಮಾಜಿಕ ಭದ್ರತೆಯನ್ನು ಖಚಿತಪಡಿಸುತ್ತದೆ.

ಎಸ್‌ಪಿಆರ್‌ಇಇ 2025ರ ಪ್ರಾರಂಭವು ಕಾರ್ಮಿಕರ ರಾಜ್ಯ ವಿಮಾ ನಿಗಮದ ಒಂದು ಪ್ರಗತಿಪರ ಹೆಜ್ಜೆಯಾಗಿದ್ದು, ಸರಳ ಮತ್ತು ಹಿಂದಿನ ಅವಧಿಯ ಬಾಕಿಯ ಬೇಡಿಕೆಯಿಲ್ಲದೆ ನೋಂದಾವಣೆಯಾಗಿ ಸುಲಭವಾಗಿ ಸಾಮಾಜಿಕ ಭದ್ರತೆಗೆ ಒಳಪಡುವ ಯೋಜನೆಯಾಗಿದೆ. ಈ ಯೋಜನೆಯು ಉದ್ಯೋಗದಾತರು ಕೇವಲ ತಮ್ಮ ಕಾರ್ಯಪಡೆಯ ಕ್ರಮಬದ್ಧಗೊಳಿಸುವಿಕೆಯನ್ನು ಪ್ರೋತ್ಸಾಹಿಸುವುದಲ್ಲದೆ, ಇನ್ನೂ ಹೆಚ್ಚಿನ ಕಾರ್ಮಿಕರನ್ನು ವಿಶೇಷವಾಗಿ ಗುತ್ತಿಗೆ ವಲಯದ ಕಾರ್ಮಿಕರು ಇಎಸ್‌ಐ ಕಾಯ್ದೆಯಡಿಯಲ್ಲಿ ದೊರೆಯುವ ಅಗತ್ಯ ಆರೋಗ್ಯ ರಕ್ಷಣೆ ಹಾಗೂ ಸಾಮಾಜಿಕ ಸೌಲಭ್ಯಗಳನ್ನು ಪಡೆಯುವುದನ್ನು ಉತ್ತೇಜಿಸುತ್ತದೆ. ಇದರೊಂದಿಗೆ ಇಎಸ್‌ಐಸಿಯು ಅಗತ್ಯ ಆರೋಗ್ಯ ರಕ್ಷಣೆ ಮತ್ತು ಸಾಮಾಜಿಕ ಭದ್ರತೆಯನ್ನು ತಲುಪಿಸುವ ತನ್ನ ಬದ್ಧತೆಯನ್ನು ಉಳಿಸಿಕೊಂಡು ಭಾರತದ ಕಾರ್ಮಿಕ ಕಲ್ಯಾಣ ಕೇಂದ್ರಿತ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಕಾರ್ಮಿಕರ ರಾಜ್ಯ ವಿಮಾ ನಿಗಮದ ಜಿಲ್ಲಾ ಶಾಖಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ ತಾಲೂಕಿನ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :–ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳು ಸಮರ್ಪಕವಾಗಿ ಅನುಷ್ಠಾನಿಸಲು ಕೊಪ್ಪಳ ತಾಲೂಕ ಮಟ್ಟದ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯು ಬಾಲಚಂದ್ರನ್ ಎಸ್ ರವರ ಅಧ್ಯಕ್ಷತೆಯಲ್ಲಿ ಇಂದು ತಾಲೂಕ ಪಂಚಾಯತಿಯ ಸಭಾಂಗಣದಲ್ಲಿ ಜರುಗಿತು.

ಪ್ರತಿ ನ್ಯಾಯಬೆಲೆ ಅಂಗಡಿಯಲ್ಲಿ ಪ್ರಧಾನಮಂತ್ರಿ ಹಾಗು ಮುಖ್ಯಮಂತ್ರಿಗಳ ಭಾವಚಿತ್ರ ಅಳವಡಿಸುವದರ ಜೊತೆಗೆ ಪಂಚ ಗ್ಯಾರಂಟಿ ಸಮಿತಿ ಸದಸ್ಯರ ಬ್ಯಾನರ್ ಅಳವಡಿಸುವಂತೆ ಸದಸ್ಯರಾದ ದೇವರಾಜ ನಡುವಿನಮನಿ, ಜ್ಯೋತಿ ಗೊಂಡಬಾಳ ಸಭೆಯಲ್ಲಿ ತಿಳಿಸಿದರು. ಆಹಾರ ನಿರೀಕ್ಷಕರು ಪಡಿತರ ಹಂಚುವಾಗ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡಿ ಆಹಾರ ಧಾನ್ಯ ಪರಿವೀಕ್ಷಿಸಿ ಜಿಪಿಎಸ್ ಫೋಟೊ ವಾಟ್ಸಪ್ ಗ್ರುಪ್ ನಲ್ಲಿ ಹಾಕುವಂತೆ ತಿಳಿಸಿದರು. ಆಹಾರ ಧಾನ್ಯ ವಿತರಿಸುವಾಗ ಸ್ಥಳಿಯರಿಗೆ ಮೊದಲ ಆದ್ಯತೆ ನೀಡಿ ವಿತರಣೆ ಮಾಡಬೇಕೆಂದು ಸಭೆಯಲ್ಲಿ ಅಧಿಕಾರಿಗಳಿಗೆ ತಿಳಿಸಿದರು.

ಫೆಬ್ರುವರಿ, ಮಾರ್ಚ ಮಾಹೆಯ ಗೃಹಲಕ್ಷ್ಮಿ ಹಣ ಜಮೆಯಾಗಿರುವದಿಲ್ಲ ಬಗ್ಗೆ ಜಿಲ್ಲಾ ಸಮಿತಿ ಸಭೆಯಲ್ಲಿ ಚರ್ಚಿಸುವಂತೆ ಸದಸ್ಯರಾದ ಮಾನ್ವಿಪಾಶಾ ಅಧ್ಯಕ್ಷರ ಗಮನಕ್ಕೆ ತಂದರು. ಮತ್ತು ಮೇ ತಿಂಗಳಿನ ಹಣ ಜಮೆಯಾಗಿದೆಂದು ಇಲಾಖಾಧಿಕಾರಿಗಳು ಸಭೆಯಲ್ಲಿ ಗಮನಕ್ಕೆ ತಂದರು. ಗೃಹಲಕ್ಷ್ಮೀ ಯೋಜನೆಯ ಕುರಿತು ವ್ಯಾಪಕವಾಗಿ ಪ್ರಚಾರ ಕೈಗೊಳ್ಳುವಂತೆ ಎಲ್ಲಾ ಸದಸ್ಯರು ತಿಳಿಸಿದರು.

ಕುಷ್ಟಗಿ–ಕೊಪ್ಪಳ ತಡೆ ರಹಿತ ಬಸ್ ವಾಹನಗಳಿದ್ದು ಇರಕಲ್ಲಗಡಾ ಗ್ರಾಮಕ್ಕೆ ನಿಲುಗಡೆಗೊಳಿಸುವಂತೆ ಕಳೆದ ಸಭೆಯಲ್ಲಿ ಚರ್ಚಿಸಲಾಗಿದ್ದು ಈ ಬಗ್ಗೆ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಮನವಿ ಸಲ್ಲಿಸುವಂತೆ ವ್ಯವಸ್ಥಾಪಕರು ಸಭೆಯಲ್ಲಿ ಮಾಹಿತಿ ನೀಡಿದರು.

ಸಭೆಯಲ್ಲಿ ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಶೀಲ್ದಾರ ವಿಠ್ಠಲ್ ಚೌಗಲಾ, ಸಮಿತಿ ಸದಸ್ಯರಾದ ದೇವರಾಜ ನಡುವಿನಮನಿ, ರಾಮಣ್ಣ ಚೌಡ್ಕಿ, ಜ್ಯೋತಿ ಗೊಂಡಬಾಳ, ಸವಿತಾ ಗೊರಂಟ್ಲ, ಅನ್ನದಾನಯ್ಯಸ್ವಾಮಿ, ಮೆಹಬೂಬಪಾಷಾ ಮಾನ್ವಿ, ಅನ್ವರ್ ಹುಸೇನ್ ಗಡಾದ, ಪರಶುರಾಮ ಕೊರವರ, ಆನಂದ ಕಿನ್ನಾಳ, ಲಕ್ಷ್ಮಣ ಡೊಳ್ಳಿನ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳ ಇಲಾಖಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

## ಮುನಿರಾಬಾದ್ ಡ್ಯಾಂ ಗ್ರಾಮದಲ್ಲಿ ಗಿಡ ಬಿದ್ದು ಅಪಾಯದಿಂದ ಪಾರಾದ ಗ್ರಾಮಸ್ಥ!

# ರಾತ್ರಿ ಮಳೆ ವೇಳೆ ಸಂಭವಿಸಿದ ಘಟನೆ ಗ್ರಾಮಸ್ಥರಲ್ಲಿ ಆತಂಕದ ಶಾಖ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲೂಕಿನ ಮುನಿರಾಬಾದ್ ಡ್ಯಾಂ ಗ್ರಾಮದಲ್ಲಿ ಕಳೆದ ಎರಡು ದಿನಗಳಿಂದ ಮಳೆಯ ಅಬ್ಬರ ಹೆಚ್ಚಾಗಿದ್ದು, ಈ ಪ್ರದೇಶ ಸಂಪೂರ್ಣ ಹಸಿರಿನಿಂದ ಆವೃತವಾಗಿದೆ. ಆದರೆ ಈ ಮಳೆ ಕೆಲವು ಅಪಾಯಗಳಿಗೂ ಕಾರಣವಾಗುತ್ತಿದೆ. ಹಳೆಯ ಮತ್ತು ಒಣಗಿದ ಮರಗಳು ರಸ್ತೆಗಳ ಪಕ್ಕದಲ್ಲಿ ನಿಂತು ಅಪಾಯವನ್ನು ಆಹ್ವಾನಿಸುತ್ತಿವೆ.

ಜುಲೈ 19ರಂದು ರಾತ್ರಿ 11 ಗಂಟೆ ಸುಮಾರಿಗೆ, ಪಿಳ್ಳೆ ಹೋಟೆಲ್ ಸರ್ಕಲ್ ಹತ್ತಿರ ಬಸ್ ನಿಲ್ದಾಣದ ಎದುರುಗಡೆ ನಿಂತಿದ್ದ ಒಂದು ಒಣಗಿದ ದೊಡ್ಡ ಮರ ಅಲ್ಪಕಾಲದಲ್ಲಿ ಬಿದ್ದು ಬಿಟ್ಟಿದೆ. ಈ ವೇಳೆ ಕೇವಲ ಕ್ಷಣಗಳ ವ್ಯತ್ಯಾಸದಲ್ಲಿ ಅಲ್ಲಿ ದ್ವಿಚಕ್ರ ವಾಹನ ಸವಾರನೊಬ್ಬ ಸಾಗುತ್ತಿದ್ದ. ಆದರೆ ಅದೃಷ್ಟವಶಾತ್ ಗಿಡ ಬಿದ್ದ ಮೊದಲು ಆತ ಅಲ್ಲಿಂದ ದೂರ ಸರಿದಿದ್ದರಿಂದ ಪ್ರಾಣಾಪಾಯದಿಂದ ಪಾರಾಗಿದ್ದಾನೆ. ತಕ್ಷಣವೇ ಆತನು ಭಯದಿಂದ ಮನೆಗೆ ತೆರಳಿದನು.

ಘಟನೆಯ ಮಾಹಿತಿ ಸಿಕ್ಕಕೂಡಲೆ ಮುನಿರಾಬಾದ್ ಡ್ಯಾಂ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಯೂಬ್ ಖಾನ್ ಅವರು ಸ್ಥಳಕ್ಕೆ ತುರ್ತು ಧಾವಿಸಿ, ಗ್ರಾಮಸ್ಥರ ಸಹಾಯದಿಂದ ಬಿದ್ದ ಮರವನ್ನು ತೆರವುಗೊಳಿಸಿ ರಸ್ತೆಯನ್ನು ಸ್ವಚ್ಛಗೊಳಿಸುವ ವ್ಯವಸ್ಥೆ ಮಾಡಿದರು. ತಡರಾತ್ರಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗದಂತೆ ಮುಂಜಾಗ್ರತೆಯ ಕ್ರಮ ಕೈಗೊಳ್ಳಲಾಯಿತು.

ಈ ಸಂದರ್ಭ ಮಾತನಾಡಿದ ಅಧ್ಯಕ್ಷರು, "ಇಂತಹ ಅಪಾಯಕಾರಿಯ ಮರಗಳನ್ನು ಕೂಡಲೇ ಗುರುತಿಸಿ ರಸ್ತೆಯ ಪಕ್ಕದಿಂದ ತೆರವುಗೊಳಿಸುವುದು ಅತ್ಯಂತ ಅಗತ್ಯ. ಕೆಲವು ತಿಂಗಳ ಹಿಂದೆ ಇಂತಹ ಘಟನೆ ಒಂದರಲ್ಲಿ ವ್ಯಕ್ತಿಯೊಬ್ಬರ ಮೇಲೆ ಮರ ಬಿದ್ದು ಆಸ್ಪತ್ರೆಗೆ ದಾಖಲಾಗಿ ಸುಮಾರು 4–5 ಲಕ್ಷ ರೂ. ವೆಚ್ಚವಾಗಿ, ಆ ಕುಟುಂಬ ಆರ್ಥಿಕ ಸಂಕಷ್ಟಕ್ಕೆ ಒಳಗಾಯಿತು. ಬಡ ಜನರ ಪರಿಸ್ಥಿತಿಯನ್ನು ನಾವು ಗಮನದಲ್ಲಿಟ್ಟುಕೊಳ್ಳಬೇಕು. ಸಾರ್ವಜನಿಕರ ಸುರಕ್ಷತೆ ನಮ್ಮ ಮೊತ್ತ ಮೊದಲ ಆದ್ಯತೆ ಆಗಬೇಕು," ಎಂದು ಬೇಸರ ವ್ಯಕ್ತಪಡಿಸಿದರು.

ಗ್ರಾಮಸ್ಥರು ಗ್ರಾಮ ಪಂಚಾಯಿತಿ ತ್ವರಿತ ಪ್ರತಿಕ್ರಿಯೆಗೆ ಮೆಚ್ಚುಗೆ ವ್ಯಕ್ತಪಡಿಸಿ, ಮುಂದಿನ ದಿನಗಳಲ್ಲಿ ಇಂತಹ ದುರ್ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು..

# ಶಿವಲಿಂಗೇಶ್ವರ ಶಿವಯೋಗಿಗಳ 101ನೇ ಪುಣ್ಯ ಸ್ಮರಣೋತ್ಸವದ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ : ತಾಲೂಕಿನ ಮುಧೋಳ(ಬಿ)ಗ್ರಾಮದಲ್ಲಿ ಚರಮೂರ್ತಿ ಶಿವಲಿಂಗೇಶ್ವರ ಶಿವಯೋಗಿಗಳ 101ನೇ ಪುಣ್ಯ ಸ್ಮರಣೋತ್ಸವದ ನಿಮಿತ್ತ ಶಿವಲಿಂಗೇಶ್ವರ ಅವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತ್ತು. ಹೂವುಗಳಿಂದ ಅಲಂಕೃತ ಟೆಂಪೋದಲ್ಲಿ ಚರಮೂರ್ತಿ ಶಿವಲಿಂಗೇಶ್ವರ ಅವರ ಭಾವಚಿತ್ರವನ್ನು ಇಟ್ಟು ಅದ್ದೂರಿ ಯಾಗಿ ಮೆರವಣಿಗೆ ಮಾಡಲಾಯಿತು.

ಶ್ರೀಮಠದ ಪೀಠಾಧಿಪತಿ ವೈಜಿನಾಥ ಶಿವಲಿಂಗ ಶಿವಾಚಾರ್ಯರು ಮೆರವಣಿಗೆಗೆ ಚಾಲನೆ ನೀಡಿದರು. ಗ್ರಾಮದಲ್ಲಿ ಹಬ್ಬದ ವಾತಾವರಣ ಸ್ರಷ್ಟಿಯಾಗಿತ್ತು, ಶಿವಲಿಂಗೇಶ್ವರ ಮಠದಿಂದ ಹೊರಟು ವಿಠ್ಠಲ ಮಂದಿರ, ಕಾಶಿ ವಿಶ್ವನಾಥ ಮಂದಿರ, ಬಸವೇಶ್ವರ ವೃತ್ತದ ಮೂಲಕ ಮಹಾದೇವ ಮಂದಿರದಿಂದ ಸಾಗಿ ಶಿವಲಿಂಗೇಶ್ವರ ಮಠಕ್ಕೆ ಬಂದು ತಲುಪಿತು. ಮೆರವಣಿಗೆಯಲ್ಲಿ ಪೂರ್ಣ ಕುಂಭ ಕಳಸ ಹೊತ್ತ ಮಹಿಳೆಯರು, ಕಾಶಿ ವಿಶ್ವನಾಥ ಮಹಿಳಾ ಕೋಲಾಟ ತಂಡ, ಹನುಮಾನ ಕೋಲಾಟ ತಂಡ, ಭಜನೆ ಕಾರ್ಯಕ್ರಮಗಳು ನಡೆದವು. ಗ್ರಾಮದ ಗಣ್ಯರಾದ ಶಿವಾನಂದ ಬಿಚಕುಂದೆ, ಅಮೃತರಾವ ವಟಗೆ, ಗುರುನಾಥ ವಟಗೆ, ಗಜಾನಂದ ವಟಗೆ, ಸಂಗಯ್ಯಾ ಸ್ವಾಮಿ, ವಿಜಯಕುಮಾರ ಹೊಸಖಂಡೆ, ಸುನೀಲ ಬಿಚಕುಂದೆ, ಉದಯ ಸೋಲಾಪೂರೆ, ಸೋಮನಾಥ ಜಯರಾಮ, ರಾಜಕುಮಾ ಹೊಸಖಂಡೆ, ಶಿವಪ್ಪ ಖೇಳಗೆ, ಗುಂಡಪ್ಪ ಸ್ವಾಮಿ, ಪ್ರಭುಲಿಂಗ ಸ್ವಾಮಿ, ಸಂಗೀತಾ ಗುಡ್ಡಾ, ಬಸಮ್ಮ ಸೋಲಾಪೂರೆ, ಮಹಾದೇವಿ ಖಡಕೆ, ಸೋಮನಾಥ ಖಡ–ಕೆ ಹಾಗೂ ಮಹಿಳೆ ಹಾಗೂ ಯುವಕರು ಸಂಭ್ರಮದಿಂದ ಪಾಲ್ಗೊಂಡರು.

## ಢಣಾಪುರದಲ್ಲಿ ಅಂಗನವಾಡಿ ,ಕುಡಿಯುವ ನೀರು ಘಟಕದ

# ಬಳಿ ಹೇರ್ ಕಟಿಂಗ್ ಸಲೂನ್ ಸಾರ್ವಜನಿಕರ ಆಕ್ಷೇಪ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಗಂಗಾವತಿ ತಾಲೂಕಿನ ಢಣಾಪುರ ಗ್ರಾಮದ ಗ್ರಾಮ ಪಂಚಾಯತಿ ಬಳಿ ಸ್ಥಳೀಯ ಆಡಳಿತವು ಸರ್ಕಾರಿ ಜಾಗೆಯಲ್ಲಿ ಹೇರ್ ಕಟಿಂಗ್ ಸಲೂನ್ ಒಂದನ್ನು ಪ್ರಾರಂಭಿಸಲು, ಕೆಲವು ವರ್ಷಗಳ ಹಿಂದೆ ಸರ್ಕಾರಿ ಕಟ್ಟಡದ ಕಂಪೌಂಡ್ ಒಡೆದು ಸರ್ಕಾರಿ ಜಾಗೆ ನೀಡಿದೆ. ಇದ–ರಿಂದಾಗಿ ಎದುರಿನಲ್ಲಿಯೇ ಇರುವ ಅಂಗನವಾಡಿ ಕೇಂದ್ರ, ಶುದ್ಧ ಕುಡಿಯುವ ನೀರಿನ ಘಟಕ ಹಾಗೂ ಗ್ರಾಮಸ್ಥರು ತೊಂದರೆ ಅನುಭವಿಸುವಂತಾಗಿದೆ.

ಢಣಾಪುರ ಗ್ರಾಮದ ಜನತಾ ಓಣಿಯ ರಸ್ತೆಯಲ್ಲಿರುವ ಗ್ರಾಮ ಪಂಚಾಯತಿ ಆವರಣದಲ್ಲಿಯೇ ಹೇರ್ ಕಟಿಂಗ್ ಸಲೂನ್ ತೆರೆಯಲು ,ಸರ್ಕಾರಿ ಕಟ್ಟಡದ ಕಂಪೌಂಡ್ ಒಡೆದು ಸರ್ಕಾರದ ಜಾಗೆಯಲ್ಲಿ ಅವಕಾಶ ನೀಡಲಾಗಿದೆ. ಈ ಘಟನೆ ನಡೆದು ಕೆಲವು ವರ್ಷಗಳಾಗಿದ್ದು, ಹೇರ್ ಕಟಿಂಗ್ ಸಲೂನ್ ನಿಂದ ಹಾರಿ ಬರುವ ಕೂದಲು ಮತ್ತಿತರ ತ್ಯಾಜ್ಯಗಳಿಂದ ಎದುರಿನಲ್ಲಿರುವ ಅಂಗನವಾಡಿ ಕೇಂದ್ರದ ಮಕ್ಕಳು ಹಾಗೂ ಶುದ್ಧ ಕುಡಿಯುವ ನೀರಿನ ಘಟಕದಿಂದ ನೀರು ಪಡೆಯುವ ಗ್ರಾಮಸ್ಥರು ಪ್ರತಿನಿತ್ಯ ತೊಂದರೆ ಅನುಭವಿಸುವಂತಾಗಿದೆ.

ಜನತಾ ಓಣಿಯಲ್ಲಿ ನೂರಾರು ಮನೆಗಳಿದ್ದು ಅಲ್ಲಿಗೆ ತೆರಳುವ ಸ್ಥಳೀಯರಿಗೂ ಸಹ ಇದ–ರಿಂದಾಗಿ ತೊಂದರೆಯಾಗುತ್ತಿದೆ. ಅಂಗನವಾಡಿ ಕೇಂದ್ರದಲ್ಲಿ ಅಡುಗೆ ತಯಾರಿಸುವ ಹಾಗೂ ಶುದ್ಧ ನೀರಿನ ಘಟಕದ ಸಂಸ್ಕರಣ ಘಟಕಕ್ಕೂ ಹೇರ್ ಕಟಿಂಗ್ ತ್ಯಾಜ್ಯ ಗಾಳಿಯಲ್ಲಿ ಬಂದು ಸೇರುವ, ಅದರಿಂದ ಶ್ವಾಸಕೋಶ ಸಂಬಂಧಿ ಖಾಯಿಲೆಗಳಿಗೆ ಕಾರಣವಾಗಬಹುದು ಎಂಬ ಆತಂಕದಲ್ಲಿಯೇ ಗ್ರಾಮಸ್ಥರು ದಿನ ದೂಡುವಂತಾಗಿದೆ.

ಸ್ಥಳೀಯ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತ, ಜಿಲ್ಲಾ ಪಂಚಾಯತ ಅಧಿಕಾರಿಗಳು ಸರ್ಕಾರಿ ಕಟ್ಟಡದ ಆವರಣದಲ್ಲಿ ಇರುವ ಹೇರ್ ಕಟಿಂಗ್ ಸಲೂನ್ ಬೇರೆಡೆ ಸ್ಥಳಾಂತರ ಮಾಡಿ ಗ್ರಾಮಸ್ಥರ ಆರೋಗ್ಯ ರಕ್ಷಣೆಗೆ ಕ್ರಮವಹಿಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

## ಕೂಸಿನ ಮನೆ ಕಾರ್ಯನಿರ್ವಹಣೆ ಕುರಿತು ಮೊಬೈಲ್ ಕ್ರಷ್ ಸಂಸ್ಥೆಯಿಂದ ಪರಿಶೀಲನೆ

# ಕೊಪ್ಪಳ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಿಗೆ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :–ತಾಲೂಕಿನಲ್ಲಿ ನಡೆಯುತ್ತಿರುವ ಕೂಸಿನ ಮನೆ ಪರಿಶೀಲನೆಗಾಗಿ ಮೊಬೈಲ್ ಕ್ರಷ್ ಸಂಸ್ಥೆಯ ಸಿಬ್ಬಂದಿಗಳಾದ ವಿಜಯಲಕ್ಷ್ಮೀ, ಚಿದಾನಂದ ಸ್ವಾಮಿ ಕೊಪ್ಪಳ ತಾಲೂಕಿನ ಅಳವಂಡಿ, ಹಟ್ಟಿ, ಬೋಚನಹಳ್ಳಿ, ಕವಲೂರು, ಹಿಟ್ನಾಳ, ಬೇವಿನಹಳ್ಳಿ, ಬಂಡಿಹರ್ಲಾಪುರ, ಹುಲಿಗಿ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಕೂಸಿನ ಮನೆಯ ಕಾರ್ಯನಿರ್ವಹಣೆ, ಮಕ್ಕಳಿಗೆ ಆಹಾರ ವಿತರಣೆ, ಅರೋಗ್ಯ ತಪಾಸಣೆ, ಕೇರ್ ಟೇಕರ್ ಗಳಿಗೆ ವೇತನ ಪಾವತಿಯಾಗಿರುವ ಕುರಿತು ಪರಿಶೀಲಿಸಿ ಅಗತ್ಯ ಸಲಹೆ ನೀಡಿದರು.

ಕೂಸಿನ ಮನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೇರ್ ಟೇಕರ್ಗಳು ಅಗತ್ಯ ದಾಖಲಾತಿಗಳನ್ನು ಪ್ರತಿ ದಿನ ಅಪಡೇಟ್ ಮಾಡುವಂತೆ ತಿಳಿಸಿದರು. ಮಕ್ಕಳಿಗೆ ಪ್ರತಿ ತಿಂಗಳಿಗೊಮ್ಮೆ ಕಡ್ಡಾಯವಾಗಿ ಆರೋಗ್ಯ ತಪಾಸಣೆ ಜರುಗಿಸಲು ಪ್ರಾಥಮಿಕ ಆರೋಗ್ಯ ಕೇಂದ್ರದವರಿಗೆ ಮಾಹಿತಿ ನೀಡಲು ಸಂಬಂಧಿಸಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ವಿಷಯ ನಿರ್ವಾಹಕ ಬಸವರಾಜ ಬಳಿಗಾರ, ರಾಜೀವಗಾಂಧಿ ಫೆಲೋ ಸೌಜನ್ಯ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಸಂ–ಜಯ, ರತ್ನಾ, ಅನಿತಾ ಕಿಲ್ಲೆದ, ರವಾಸಾಹೇಬ, ಗುರುದೇವಮ್ಮ, ಕೃಷ್ಣಮೂರ್ತಿ, ಗೀತಾ ಕುಮಾರಿ, ಕೊಟ್ರಪ್ಪ ಅಂಗಡಿ, ಕಾರ್ಯದರ್ಶಿ ಮಂಜುನಾಥಯ್ಯ, ಸಣ್ಣಜಂಬಣ್ಣ, ಕೇರ್ ಟೇಕರ್‌ಗಳು, ಗ್ರಾಮ ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

## ಬಿಸಿಎಂ ಇಲಾಖೆಯಿಂದ ಮೆಟ್ರಿಕ್ ನಂತರದ

# ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 21– ಇಲ್ಲಿನ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರ ಬಾಲಕ, ಬಾಲಕಿಯರ ವಸತಿ ನಿಲಯಕ್ಕೆ ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಸತಿ ನಿಲಯಗಳಿಗೆ ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಂದ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, ಎಎಸ್.ಸಿ & ಎಸ್,ಟಿ 2.50 ಲಕ್ಷಹಾಗೂ ಪ್ರವರ್ಗ–2ಎ, 2ಬಿ, 3ಎ 3ಬಿ ಇತರೇ ಹಿಂದುಳಿದ ವರ್ಗ ವಿದ್ಯಾರ್ಥಿಗಳ ವಾರ್ಷಿಕ ಆದಾಯವು 1 ಲಕ್ಷ ರೂ.ಗಳುಯೊಳಗೆ ಇರಬೇಕು.

ಆಸಕ್ತರು https://shp.karnataka.gov.in ನಲ್ಲಿ ಆಗಸ್ಟ್ 14 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ತಾಲೂಕುವಾರು ವಿದ್ಯಾರ್ಥಿಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://shp.karnataka.gov.in ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ: bcw.hostels@karnataka.gov.in ಗೆ ಇ–ಮೇಲ್ ಮುಂಖಾಂತರ ಅಥವಾ ತಾಲೂಕ ಕಲ್ಯಾಣಾಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರಾಯಚೂರು ದೂರವಾಣಿ ಸಂ: 08532–221072ಗೆ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲೂಕ ಕಲ್ಯಾಣಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿ.ಜಿ ಕುಲ್ಕರ್ಣಿ ಅಸ್ಪತ್ರೆ ಹತ್ತಿರ ಅನೀರಿಕ್ಷಿತ ಮನೆ ಅಜಾದ್ ನಗರ ಕಾಲೋನಿ ರಾಯಚೂರು ದೂರವಾಣಿ ಸಂಖ್ಯೆ :08532–221072ಗೆ ಸಂಪರ್ಕ ಮಾಡಬಹುದಾಗಿದೆ ಎಂದು ತಾಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರೌಢ ಸಾಹಿತ್ಯಕ್ಕಿಂತ ಮಕ್ಕಳ ಸಾಹಿತ್ಯ ಪರಿಪೂರ್ಣ: ಸಿದ್ದಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.20–ಪ್ರೌಢ ಸಾಹಿತ್ಯದಲ್ಲಿ ಇರುವ ಎಲ್ಲ ವಿಷಯಗಳು ಮಕ್ಕಳ ಸಾಹಿತ್ಯದಲ್ಲಿ ಇರುವುದರಿಂದ ಪ್ರೌಢ ಸಾಹಿತ್ಯಕ್ಕಿಂತ ಮಕ್ಕಳ ಸಾಹಿತ್ಯ ಪರಿಪೂರ್ಣವಾಗಿರುತ್ತದೆ ಎಂದು ವಿಜಯಪುರದ ಮಕ್ಕಳ ಸಾಹಿತಿ ಫ.ಗು.ಸಿದ್ದಾಪೂರ ಹೇಳಿದರು.

ರವಿವಾರ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕ ಬಾಗಲಕೋಟೆ ಮತ್ತು ಕರ್ನಾಟಕ ಜಾನಪದ ಪರಿಷತ್ತು ಬಾಗಲಕೋಟೆ ಇವರ ಸಂಯುಕ್ತ ಆಶ್ರಯದಲ್ಲಿ ಪದ್ಮಶ್ರೀ ಡಾ.ವೆಂಕಪ್ಪ ಸುಗತೇಕರಗೆ ಸನ್ಮಾನ, ಆರ್.ಸಿ.ಚಿತ್ತವಾಡಗಿ ಅವರ 'ಬೆದರು ಬೊಂಬೆ' ಕೃತಿ ಲೋಕಾರ್ಪಣೆ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಕೃತಿ ಬಿಡುಗಡೆ ಮಾಡಿ ಅವರು ಮಾತನಾಡಿದರು. ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಕಳಸಪ್ರಾಯವಾದ ಸಾಕಷ್ಟು ಸಾಹಿತ್ಯ ಕೃತಿಗಳು ಇವೆ. ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಕೃತಿಗಳು, ರಾಮಾಯಣ, ಮಹಾಭಾರತ ಸೇರಿದಂತೆ ಇನ್ನೂ ಅನೇಕ ಪ್ರೌಢ ಕೃತಿಗಳು ಇವೆ. ಇವುಗಳು ಮಕ್ಕಳಿಗೆ ಸರಳವಾಗಿ ಅರ್ಥವಾಗದಿರಬಹುದು. ಆದರೆ ಮಕ್ಕಳ ಸಾಹಿತ್ಯ ಮಾತ್ರ ಮಕ್ಕಳಿಗೆ ಸರಳವಾಗಿ ಅರ್ಥವಾಗುವುದರಿಂದ ಹಾಗೂ ಆ ಸಾಹಿತ್ಯವನ್ನು ಅನುಭವಿಸಿ, ಹಾಡಿ, ಕುಣಿದು ಆನಂದಪಡುವುದರಿಂದಾಗಿ ಮಕ್ಕಳ ಸಾಹಿತ್ಯವೇ ಪರಿಪೂರ್ಣ ಸಾಹಿತ್ಯವಾಗಿದೆ ಎಂದ ಸಿದ್ದಾಪೂರ, ಆರ್.ಸಿ.ಚಿತ್ತವಾಡಗಿ ಅವರ ಶಿಶು ಗೀತೆಗಳಿರುವ ಬೆದರು ಬೊಂಬೆ ಕೃತಿಯೂ ಮಕ್ಕಳ ಮೆಚ್ಚಿನ ಕೃತಿಯಾಗಿದೆ ಎಂದರು.

ಉಪನ್ಯಾಸಕಿ ಸುಮಂಗಲಾ ಮೇಟಿ ಕೃತಿ ಅವಲೋಕನ ಮಾಡಿ ಮಾತನಾಡಿ, ಶಿಶು ಗೀತೆಗಳನ್ನು ಒಳಗೊಂಡಿರುವ ಬೆದರುಬೊಂಬೆ ಕೃತಿಯು ಈಗಾಗಲೇ ಶಾಲಾ ಮಕ್ಕಳಿಗೆ ಹಾಡಿಸಿ ಮೆಚ್ಚುಗೆಗೆ ಪಾತ್ರವಾಗಿರುವ ಗೀತೆಗಳಾಗಿವೆ. ಮಕ್ಕಳನ್ನು ಪ್ರೀತಿಸುವ ಗುಣವಿರುವ ಚಿತ್ತವಾಡಗಿ ಅವರು ತಮ್ಮ ಭೋದನಾ ಸಂದರ್ಭದಲ್ಲಿ ಕಂಡ ಮಕ್ಕಳ ಮನಸ್ಸಿನ ಅಂತಶಕ್ತಿಯನ್ನು ಅರಿತು ಗೀತೆ ಬರೆದಿದ್ದಾರೆ ಎಂದು ಹೇಳಿದರು.

ಡಿಡಿಪಿಐ ಎಚ್.ಜಿ.ಮಿರ್ಜಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಶಿಕ್ಷಕನಾದವನು ಮಕ್ಕಳಿಗೆ ಪಾಠ ಭೋದನೆ ಮಾಡುವುದರ ಜೊತೆಗೆ ಅವರ ಬದುಕನ್ನು ಸುಂದರವಾಗಿ ಕಟ್ಟಿಕೊಡುವ ಕೌಶಲ ಹೊಂದಿರಬೇಕು. ಮಕ್ಕಳಲ್ಲಿ ಉತ್ತಮ ಕನಸುಗಳನ್ನು ಬಿತ್ತಬೇಕು. ಅಂದಾಗ ವೃತ್ತಿ ಸಾರ್ಥಕತೆ–ಯಾಗುತ್ತದೆ. ಶಿಕ್ಷಕನಿಗೂ ಗೌರವ ಸಿಗುತ್ತದೆ. ಚಿತ್ತವಾಡಗಿ ಅವರ ಪರಿಶ್ರಮದ ಬೋಧನೆಯಿಂದ ಮಕ್ಕಳ ಬದುಕು ಸಾರ್ಥಕವಾಗಿದೆ. ಅವರ ನಿವೃತ್ತಿ ಬದುಕು ಇದೇ ರೀತಿ ಸಮಾಜಮುಖಿಯಾಗಿ ಮುಂದುವರೆಯಲಿ ಎಂದು ಹಾರೈಸಿದರು.

ಕಸಾಪ ಜಿಲ್ಲಾ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಅಧ್ಯಕ್ಷತೆ ವಹಿಸಿ ವಹಿಸಿದ್ದರು. ಶಿರೂರ ಶಿವಯೋಗಾಶ್ರಮದ ಅಭಿನವ ಸಿದ್ಧಲಿಂಗ ಶ್ರೀಗಳು ಸಾನಿಧ್ಯವಹಿಸಿ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಪದ್ಮಶ್ರೀ ಪುರಸ್ಕೃತ ಬಾಗಲಕೋಟೆಯ ಡಾ.ವೆಂಕಪ್ಪ ಸುಗತೇಕರ ಅವರಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಲ್ಲಿಕಾರ್ಜುನ ಶೆಲ್ಲಿಕೇರಿ, ಎನ್.ಬಿ.ಗೊರವರ, ಮಹಾದೇವ ಕಂಬಾಗಿ, ಡಾ.ಬಸವರಾಜ ಕಟಗೇರಿ, ವೈ.ಎಚ್.ಕಾತರಕಿ, ಡಾ.ಗಿರೀಶ ಮಾಸೂರಕರ್, ಎಸ್.ಬಿ.ಮಾಚಾ, ಮಹಾಬಳೇಶ್ವರ ಗುಡಗುಂಟಿ, ಬಸವರಾಜ ಮಠದ ಸೇರಿದಂತೆ ಇನ್ನೂ ಅನೇಕ ಸಾಧಕರಿಗೆ ಸನ್ಮಾನ ಮಾಡಲಾಯಿತು. ಡಾ.ಸಿ.ಎಂ. ಜೋಶಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಗಮೇಶ ಸಣ್ಣತಂಗಿ ಅಭಿನಂದನಾಪರ ನುಡಿಗಳನ್ನಾಡಿದರು. ಡಾ.ಪ್ರಕಾಶ ಖಾಡೆ ನಿರೂಪಿಸಿದರು. ಎಂ.ಎಸ್. ಕಲಗುಡಿ ಪ್ರಾರ್ಥಿಸಿದರು. ಆನಂದ ಹಲಕುರ್ಕಿ ವಂದಿಸಿದರು.

ಬಿಜೆಪಿ ಪದಾಧಿಕಾರಿಗಳ ಪದಗ್ರಹಣ

# ದೇಶದ ಭದ್ರತೆ, ಅಭಿವೃದ್ಧಿಗೆ ಬಿಜೆಪಿ ಅಗತ್ಯ :ಡಾ.ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21–ದೇಶದ ಭದ್ರತೆಗೆ ಭಾರತೀಯ ಜನತಾ ಪಾರ್ಟಿಯ ಅಗತ್ಯತೆಯಿದ್ದು, ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶ ಅಭಿವೃದ್ಧಿ ಹೊಂದಿದೆ. ನಾಡಿನ ಅಭಿವೃದ್ಧಿಗೂ ಸಹ ಬಿಜೆಪಿ ಅವಶ್ಯಕತೆಯಿದೆ. ರಾಜ್ಯಕ್ಕೆ ಯೋಗಿ ಮಾದರಿ ಸರಕಾರ ಬೇಕಾಗಿದೆ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಿವಿವಿ ಸಂಘದ ನೂತನ ಸಭಾ ಭವನದಲ್ಲಿ ರವಿವಾರ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತ ಕ್ಷೇತ್ರದಿಂದ ಹಮ್ಮಿಕೊಂಡ ನಗರ ಮಂಡಲ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ದೇಶದಲ್ಲಿ ಭದ್ರತೆ ಹಾಗೂ ಅಭಿವೃದ್ಧಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಕಾರ್ಯ ಅರ್ಥಪೂರ್ಣವಾಗಿ ಸಾಗಿದೆ ಎಂದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರದ ಆಡಳಿತಕ್ಕೆ ಜನರು ಬೇಸತ್ತಿದ್ದಾರೆ. ರಾಜ್ಯದಲ್ಲೂ ಮತ್ತೊಮ್ಮೆ ಭಾರತೀಯ ಜನತಾ ಪಕ್ಷದ ಅಧಿಕಾರಕ್ಕೆ ಬರುವ ಎಲ್ಲ ಲಕ್ಷಣಗಳು ಇದ್ದು ಆ ನಿಟ್ಟಿನಲ್ಲಿ ಪಕ್ಷವನ್ನು ಸಂಘಟಿಸುವ ಅವಶ್ಯಕತೆಯಿದೆ. ಪಕ್ಷ ಯಾರ ಸೊತ್ತೂ ಅಲ್ಲ, ಲಕ್ಷಾಂತರ ಕಾರ್ಯಕರ್ತರ ಶ್ರಮದ ಫಲ ಅದು. ಪಕ್ಷ ಬಿಟ್ಟು ಹೋದವರು ತಪ್ಪನ್ನು ಒಪ್ಪಿಕೊಂಡು ಬರುವವರಿಗೆ ಸ್ವಾಗತವಿದೆ. ಎಲ್ಲ ಪದಾಧಿಕಾರಿಗಳು ದಿನನಿತ್ಯ ತಮ್ಮ ಕೆಲಸದ ಜವಾಬ್ದಾರಿಗಳ ಜೊತೆಗೆ ದಿನಕ್ಕೆ ಒಂದು ಗಂಟೆ ಪಕ್ಷಕ್ಕೆ ಮೀಸಲಿಟ್ಟು ಸಂಘಟನೆಯಲ್ಲಿ ತೊಡಗಿಕೊಳ್ಳಿ ಎಂದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ, ಪದಾಧಿಕಾರಿಗಳ ನೇಮಕಾತಿಯಲ್ಲಿ ನಗರದ ಮೂಲೆ ಮೂಲೆಗಳನ್ನು ಸಂಪರ್ಕಿಸಿ, ಪ್ರತಿ ಸಮಾಜಕ್ಕೂ ಜವಾಬ್ದಾರಿಯನ್ನು ಕೊಟ್ಟಿರುವುದು ಶ್ಲಾಘನೀಯ. ರಾಜ್ಯಕ್ಕೆ ಬಾಗಲಕೋಟೆ ಆದರ್ಶವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಾಗೌಡ ಪಾಟೀಲ, ಪಕ್ಷವನ್ನು ಸಂಘಟಿಸುವ ಕಾರ್ಯ ನೂತನ ಪದಾಧಿಕಾರಿಗಳ ಮೇಲಿದೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯ ಎಲ್ಲ ಕ್ಷೇತ್ರಗಳಲ್ಲೂ ಬಿಜೆಪಿಗೆ ಗೆಲುವು ಆಗಲಿದೆ. ರಾಜ್ಯದಲ್ಲಿ ಪಕ್ಷ ಅಧಿಕಾರಕ್ಕೆ ಬರಲಿದೆ ಎಂದು ಹೇಳಿದರು.

ನಗರ ಮಂಡಲ, ಮಹಾಶಕ್ತಿ ಕೇಂದ್ರ, ಶಕ್ತಿಕೇಂದ್ರ, ಬೂತ ಅಧ್ಯಕ್ಷರ, ಹಾಗೂ ವಿವಿಧ ಪ್ರಕೋಷ್ಠಗಳ ಮತ್ತು ನಗರ ಮಂಡಲದಿಂದ ಜಿಲ್ಲೆಗೆ ನಿಯುಕ್ತಗೊಂಡ ಪದಾಧಿಕಾರಿಗಳು ಸೇರಿದಂತೆ 200ಕ್ಕೂ ಹೆಚ್ಚು ಪದಾಧಿಕಾರಿಗಳಿಗೆ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಪಕ್ಷದ ಶಾಲು ಹಾಕಿ ಜವಾಬ್ದಾರಿಗಳನ್ನು ನೀಡಲಾಯಿತು.

ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಜಿಲ್ಲಾ ಉಪಾಧ್ಯಕ್ಷ ಲಕ್ಷ್ಮೀ ನಾರಾಯಣ ಕಾಸಟ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ, ಬಸವರಾಜ ಯಂಕಂಚಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಸತ್ಯನಾರಾಯಣ ಹೇಮಾದ್ರಿ, ಸುರೇಶ ಮಜ್ಜಗಿ, ಹೇಮಂತ ಸಿಮೀಕೇರಿ, ಗಣೇಶ ಲಗಳಿ ಇದ್ದರು.

# ಸಾಧಿಸುವ ಮನಸ್ಥಿತಿ ಬೆಳೆಸಿಕೊಳ್ಳಿ–ಪ್ರೊ.ಕುಂಬಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21–ಚಿಕ್ಕ ವಯಸ್ಸಿನಲ್ಲೇ ದೊಡ್ಡ ಸಾಧನೆ ಮಾಡಿದ ನಾಡಿನ ಹಲವು ಸಾಧಕರ ಬದುಕು–ಬರಹದಿಂದ ಪ್ರೇರಣೆ ಪಡೆದು ಜೀವನದಲ್ಲಿ ಗುರಿ ಸಾಧಿಸುವ ಮನಸ್ಥಿತಿಯನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದು ಬಸವೇಶ್ವರ ಕಲಾ ಕಾಲೇಜಿನ ಸ್ನಾತಕೋತ್ತರ ವಿಭಾಗದ ಕನ್ನಡ ಪ್ರಾಧ್ಯಾಪಕ ಡಾ.ಬಸವರಾಜ ಕುಂಬಾರ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಇತಿಹಾಸ ಮತ್ತು ಪ್ರಾಚ್ಯಶಾಸ್ತ್ರ ವಿಭಾಗವು ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಬೀಳ್ಕೊಡುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವ್ಯಕ್ತಿ ಅಳಿದು ಹೋಗುತ್ತಾನೆ. ಆದರೆ ವ್ಯಕ್ತಿತ್ವ ಮಾತ್ರ ಶಾಶ್ವತವಾಗಿ ಉಳಿಯುತ್ತದೆ. ನಿರ್ದಿಷ್ಟ ಶಕ್ತಿಯನ್ನು ಬಳಸಿಕೊಂಡು ವಿಶ್ವ ಮಾನವ ಆಗುವ ರೀತಿಯಲ್ಲಿ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು. ಮೊಬೈಲ್‌ಗೆ ದಾಸರಾಗದೇ ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಕೇವಲ ಪರೀಕ್ಷಾ ದೃಷ್ಟಿಯಿಂದ ಅಭ್ಯಾಸ ಮಾಡದೇ ಭಾವೀ ಭವಿಷ್ಯತ್ತಿಗೆ ಓದಬೇಕು ಎಂದು ಕುಂಬಾರ ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ಪ್ರತಿಯೊಬ್ಬ ವ್ಯಕ್ತಿಗೂ ವ್ಯಕ್ತಿತ್ವವಿದೆ. ಅದನ್ನು ವಿಕಾಸಗೊಳಿಸುವ ಅವಕಾಶವೂ ಇದೆ. ಆದರೆ ಅದ–ಕ್ಕೆ ಮನಸ್ಸು ಬೇಕು. ಮನುಷ್ಯನ ಎಲ್ಲ ಪ್ರಯತ್ನಗಳ ಅಂತಿಮ ಗುರಿ ವ್ಯಕ್ತಿತ್ವದ ವಿಕಾಸವೇ ಆಗಿದೆ ಎಂದರು.

ಕಲಿಕೆ ನಿರಂತರ ಪ್ರಕ್ರಿಯೆಯಾಗಿದ್ದು ಅದು ಜ್ಞಾನದ ಕ್ಷಿತಿಜವನ್ನು ವಿಸ್ತರಿಸುತ್ತದೆ. ಇಂತಹ ಜ್ಞಾನವನ್ನು ವಿದ್ಯಾರ್ಥಿಗಳು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳಬೇಕು. ಪದವಿ ನಂತರದ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿ ಜೀವನದಲ್ಲಿ ಯಶ ಪಡೆಯಬೇಕು ಎಂದು ಅವರು ಹೇಳಿದರು.

ಮಲ್ಲಿಕಾರ್ಜುನ ಶಿವಪುರ, ಶ್ರುತಿ ನಾಯಕ ಅನಿಸಿಕೆ ಹೇಳಿದರು. ಸಹನಾ ನರೇಗಲ್ ಹಾಗೂ ಸರಸ್ವತಿ ತಳವಾರ ಪ್ರಾರ್ಥಿಸಿದರು. ಮಂಜುಳಾ ಚಿಂಚಲಿ ಸ್ವಾಗತಿಸಿದರು. ಯಶೋಧಾ ಸಂಶಿ ವಂದಿಸಿದರು. ಜ್ಯೋತಿ ಬಿಳಿಜಾಡರ ನಿರೂಪಿಸಿದರು. ಸಂಯೋಜಕ ಎಂ.ಡಿ.ಕೋರವಾರ ಇದ್ದರು.

ಬೆನಕಟ್ಟಿಯಲ್ಲಿ ಬಡ ವಿದ್ಯಾರ್ಥಿಗಳ ದತ್ತು ಸ್ವೀಕಾರ

# ಸಮೃದ್ಧಿ ಹೆಚ್ಚಾದಂತೆ ಸಂಸ್ಕೃತಿ ಕ್ಷೀಣಿಸಬಾರದು–ಗೌಡಪ್ಪಗೋಳ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21–ಸಮೃದ್ಧಿ ಹೆಚ್ಚಾದಂತೆ ಸಂಸ್ಕೃತಿ ಕ್ಷೀಣಿಸಬಾರದು. ಇವೆರಡೂ ಸಂತುಲನವಾದಾಗ ಉತ್ತಮ ಸಮಾಜ ನಿರ್ಮಾಣಗೊಳ್ಳಲು ಸಾಧ್ಯ ಎಂದು ವಾಣಿಜ್ಯ ತೆರಿಗೆ ಇಲಾಖೆಯ ಉಪ ಆಯುಕ್ತ ಜಿ.ಬಿ.ಗೌಡಪ್ಪಗೋಳ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಸ್ಥಳೀಯ ಹೇಮ ವೇಮನ ಸದ್ಬೋಧನ ಪೀಠ ರವಿವಾರ ಹಮ್ಮಿಕೊಂಡಿದ್ದ ಸದ್ಬೋಧನ ಪೀಠದ ವಾರ್ಷಿಕೋತ್ಸವ, ಪ್ರತಿಭಾವಂತ ಬಡ ವಿದ್ಯಾರ್ಥಿಗಳ ಶೈಕ್ಷಣಿಕ ದತ್ತು ಸ್ವೀಕಾರ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಧ್ಯಾತ್ಮಿಕ ತಳಹದಿಯ ಮೇಲೆ ಸಾಮಾಜಿಕ ವ್ಯವಸ್ಥೆ ರೂಪುಗೊಳ್ಳಬೇಕು. ಇಂತಹ ವ್ಯವಸ್ಥೆಯಲ್ಲಿ ಶ್ರೇಷ್ಠ ಸಂಸ್ಕಾರ ಹಾಗೂ ಸಂಸ್ಕೃತಿಯ ಗಟ್ಟಿತನವಿರುತ್ತದೆ ಎಂದ ಗೌಡಪ್ಪಗೋಳ, ಮಹಾತ್ಮರು, ಶರಣರ ಶ್ರೇಷ್ಠತೆಗಳನ್ನು ಧಾರಣೆ ಮಾಡಿಕೊಂಡು ಸಮರ್ಪಣಾ ಭಾವದಿಂದ ಬದುಕಿದರೆ ಮನುಷ್ಯ ಜೀವನಕ್ಕೆ ಸಾರ್ಥಕತೆ ಬರುತ್ತದೆ ಎಂದರು.

ಮುಖ್ಯ ಅತಿಥಿ ಧಾರವಾಡ ಕರ್ನಾಟಕ ವಿಶ್ವ ವಿದ್ಯಾಲಯದ ವೇಮನ ಪೀಠದ ಸಂಯೋಜಕ ಡಾ.ಹೇಮರಡ್ಡಿ ನೀಲಗುಂದ ಮಾತನಾಡಿ, ಸಂಪತ್ತು ಗಳಿಸುವುದೇ ಜೀವನವಲ್ಲ. ಗಳಿಸಿದ ಸಂಪತ್ತು ಜೀವನದಲ್ಲಿ ಪ್ರಸನ್ನತೆ ಮೂಡಿಸುವಂತಿರಬೇಕು. ನೆಮ್ಮದಿಯ ಬದುಕು ಕಾಣಲು ಗಳಿಸಿದ ಸಂಪತ್ತು ಸದ್ವಿನಿಯೋಗವಾಗಬೇಕು. ಪರೋಪಕಾರದ ಜೀವನದಿಂದ ದೈವತ್ವ ಪಡೆಯುವ ಪ್ರಯತ್ನ ನಮ್ಮದಾಗಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಹಿರಿಯ ನ್ಯಾಯವಾದಿ ಎಸ್.ಕೆ.ಯಡಹಳ್ಳಿ, ಹೇಮರಡ್ಡಿ ಮಲ್ಲಮ್ಮ, ಮಹಾಯೋಗಿ ವೇಮನರನ್ನು ನಾಡಿಗೆ ಪರಿಚಯಿಸುವ ಮೂಲಕ ಹೆಸರು ತಂದುಕೊಂಡಿರುವ ಬೆನಕಟ್ಟಿ ಗ್ರಾಮದ ಹೇಮ ವೇಮನ ಸದ್ಬೋಧನ ಪೀಠದ ಬಡ ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ದತ್ತು ಪಡೆದುಕೊಳ್ಳುವ ಕಾರ್ಯ ಮಾದರಿಯಾಗಿದೆ ಎಂದರು.

ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ಹಾಗೂ ಅಮಲಝರಿಯ ಶರೀಫ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷ ಪಂಡಿತ ಮಾಚಾ, ಸದ್ಬೋಧನ ಪೀಠದ ನಿರ್ದೇಶಕ ರಂಗಣ್ಣ ಕಟಗೇರಿ, ಆಶ್ರಯದಾತರಾದ ಶಂಕರ ಯಡಹಳ್ಳಿ ಹಾಗೂ ಹೇಮಾ ಎಸ್.ಯಡಹಳ್ಳಿ ಅತಿಥಿಗಳಾಗಿದ್ದರು.

6 ಜನ ಬಡ ಪ್ರತಿಭಾವಂತ ವಿದ್ಯಾರ್ಥಿಗಳನ್ನು ದಾನಿಗಳು ದತ್ತು ಸ್ವೀಕರಿಸಿದರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಯಿತಲ್ಲದೇ ಸಾಧಕ ವಿದ್ಯಾರ್ಥಿಗಳು, ದಾನಿಗಳು ಮತ್ತು ಕೃಷಿಯಲ್ಲಿ ಸಾಧನೆ ಮಾಡಿದ ಅಶೋಕ ಮೆಳ್ಳಿ ಅವರನ್ನು ಸನ್ಮಾನಿಸಲಾಯಿತು.

ಹೇಮರಡ್ಡಿ ಮಲ್ಲಮಾಂಬೆ ಭಜನಾ ತಂಡದವರು ಪ್ರಾರ್ಥಿಸಿದರು. ಪಾಂಡು ಸನ್ನಪ್ಪನವರ ಸ್ವಾಗತಿಸಿದರು. ಅಜೀತಗೌಡ ಪಾಟೀಲ, ಸಂ–ಜಯ ನಡುವಿನಮನಿ, ಶ್ರೀನಿವಾಸ ಬೆನಕಟ್ಟಿ ನಿರೂಪಿಸಿದರು. ಗಂಗಾ ಅಮಾತೆಪ್ಪನವರ ವಂದಿಸಿದರು.

# ಛಲವಾದಿ ಮಹಾಸಭಾದಿಂದ ಖರ್ಗೆ ಜನ್ಮ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21–ನಗರದಲ್ಲಿ ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾದಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು.

ನವನಗರದ ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲ, ಬ್ರೆಡ್, ಹಾಲು ನೀಡುವ ಮೂಲಕ ಖರ್ಗೆ ಅವರಿಗೆ ಹಾರ್ದಿಕ ಶುಭಾಶಯ ಸಲ್ಲಿಸಲಾಯಿತು.

ಜಿಲ್ಲಾಧ್ಯಕ್ಷ ಪ್ರೇಮನಾಥ ಗರಸಂಗಿ ಅವರ ನೇತ್ರತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸದಾಶಿವ ಕೊಡಬಾಗಿ, ಎನ್.ಬಿ.ಗಸ್ತಿ, ಮನೋಹರ ಗರಸಂಗಿ, ಮಹೇಶ ಬೀಳಗಿ, ವಿಜಯಕಾಂತ ನೀಲನಾಯಕ, ಶ್ರೀಧರ ನೀಲನಾಯಕ, ಬ್ರಹ್ಮಾನಂದ ಕಾಂಬಳೆ, ಶ್ರೀಮತಿ ಶೀಲಾ ಗೆಜ್ಜಿಗಟ್ಟಿ, ಶ್ರೀಮತಿ ಕಲಾವತಿ ಬನಸೋಡೆ, ಪರಸುರಾಮ ನಾರಾಯಣಿ, ಶ್ರೀಮತಿ ಬಾಯಕ್ಕ ಮೇಟಿ, ಮಲ್ಲಿಕಾರ್ಜುನ ಮೇಟಿ, ಮನೋಹರ ಕದಂ, ರಾಜು ನಾರಾಯಣಕರ, ಸಂಗಪ್ಪ ಚಲವಾದಿ, ರಾಜು ಚಲವಾದಿ, ಶಫೀಕ ಜಮಾದಾರ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

# ಇಂದು ಮರಗಮ್ಮದೇವಿ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21–ನವನಗರದ ಸೆಕ್ಟರ್ ನಂ.29 ರಲ್ಲಿರುವ ಗೌಳಿ ಸಮಾಜದ ಶ್ರೀ ಮರಗಮ್ಮದೇವಿ ಜಾತ್ರಾ ಮಹೋತ್ಸವ ಜು.22 ರಂದು ಜರುಗಲಿದೆ.

ಮಂಗಳವಾರ ಮುಂಜಾನೆ ದೇವಿಯ ದೇವಸ್ಥಾನದಲ್ಲಿ ವಿವಿಧ ಪೂಜಾ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು, ದೇವಿಗೆ ವಿಶೇಷ ಪೂಜೆ, ಅಭಿಷೇಕ, ಉಡಿ ತುಂಬುವ ಕಾರ್ಯಕ್ರಮಗಳು ಜರುಗಲಿವೆ.

ಮಧ್ಯಾಹ್ನ ಅನ್ನ ಸಂತರ್ಪಣೆ ನಡೆಯಲಿದ್ದು, ಭಕ್ತರು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ದೇವಿ ಕೃಪೆಗೆ ಪಾತ್ರರಾಗಬೇಕೆಂದು ಗೌಳಿ ಸಮಾಜದ ಮುಖಂಡರು ಕೋರಿದ್ದಾರೆ.

# ಪ್ರಾಮಾಣಿಕ ಅಧ್ಯಯನದಿಂದ ಯಶಸ್ಸು ಸಾಧ್ಯ: ಪ್ರೊ.ಸಂಪತ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21–ವಿದ್ಯಾರ್ಥಿಗಳು ಇಂದಿನ ತಂತ್ರಜ್ಞಾನದ ಕೌಶಲ್ಯಗಳನ್ನು ಬಳಸಿಕೊಳ್ಳಬೇಕು. ಪರಿಶ್ರಮದ ಅಧ್ಯಯನದಿಂದ ಶಿಸ್ತು ಮತ್ತು ಪ್ರಾಮಾಣಿಕ ವ್ಯಕ್ತಿತ್ವ ಬೆಳೆಯುತ್ತದೆ ಎಂದು ಬೀಳಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರೊ.ಸಂಪತ್ ಲಮಾಣಿ ಹೇಳಿದರು.

ಸೋಮವಾರ ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ 2025–26 ಸಾಲಿನ ಪ್ರಥಮ ವರ್ಷದ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಬಿ.ಸಿ.ಎ ಮತ್ತು ಬಿಬಿಎ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ರಾಜ್ಯಕ್ಕೆ ಮಾದರಿಯಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪದವಿ ಓದುತ್ತಿರುವ ವಿದ್ಯಾರ್ಥಿಗಳು ಭಾಗ್ಯವಂತರು. ಇಲ್ಲಿ ಗುಣಮಟ್ಟದ ಬೋಧನೆ, ಗ್ರಂಥಾಲಯ, ಕ್ರೀಡಾ ಚಟುವಟಿಕೆಗಳು, ಎನ್.ಸಿ.ಸಿ, ಎನ್.ಎಸ್.ಎಸ್, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ ಸೌಲಭ್ಯಗಳಿವೆ. ಇವುಗಳ ಸದುಪಯೋಗ ಪಡೆದುಕೊಂಡು, ಕ್ರಿಯಾಶೀಲವಾದ ವ್ಯಕ್ತಿತ್ವವನ್ನು ಕಟ್ಟಿಕೊಳ್ಳಬೇಕು. ಕಾಲೇಜಿನಲ್ಲಿ ಉತ್ತಮ ಪರಿಸರವಿದೆ ನಿರಂತರ ಓದುವ ಹವ್ಯಾಸ ರೂಢಿಸಿಕೊಂಡು ಸಾಧಕರಾಗಲು ಸಾಧ್ಯವಿದೆ ಎಂದು ಪ್ರೊ.ಸಂಪತ್ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಮಾತನಾಡಿ, ವಿದ್ಯಾರ್ಥಿಗಳು ಕಾಲೇಜಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕಾಲೇಜಿನ ವೇಳಾಪಟ್ಟಿಯಂತೆ ತಪ್ಪದೇ ತರಗತಿಗಳಿಗೆ ಹಾಜರಾಗಬೇಕು. ತಂದೆ, ತಾಯಿ ಮತ್ತು ಮನೆತನದ ಪರಿಸ್ಥಿತಿಗನುಗುಣವಾಗಿ ಹೊಂದಿಕೊಂಡು ಅಭ್ಯಾಸ ಮಾಡಬೇಕು. ಕಾಲೇಜಿನಲ್ಲಿರುವ ಸೌಲಭ್ಯಗಳನ್ನು ಪಡೆದುಕೊಂಡು ಕಾಲೇಜಿನ ಕೀರ್ತಿ, ಗೌರವ ತರುವ ವಿದ್ಯಾರ್ಥಿಗಳಾಗಿ ಬೆಳೆಯಬೇಕು ಎಂದರು.

ಡಾ.ಚಂದ್ರಶೇಖರ ಕಾಳನ್ನವರ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಕ್ರೀಡಾ ನಿರ್ದೇಶಕ ನೀಲಪ್ಪ ಕುರಿ ವಂದಿಸಿದರು. ಕಾಲೇಜಿನ ಬೋಧಕರು, ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ವಿದ್ಯಾರ್ಥಿನಿಲಯದ ಕಟ್ಟಡ ಕಾಮಗಾರಿಗೆ ಭೂಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.21–ನವನಗರದ ಸೆಕ್ಟರ ನಂ.7ರಲ್ಲಿ ನೂತನವಾಗಿ ನಿರ್ಮಿಸಲಾಗುತ್ತಿರುವ ಮೆಟ್ರಿಕ್ ನಂತರದ ಇಂಜಿನೀಯರಿಂಗ್ ಮತ್ತು ಮೆಡಿಕಲ್ ಬಾಲಕಿಯರ ವಿದ್ಯಾರ್ಥಿನಿಲಯದ ನೂತನ ಕಟ್ಟಡ ಕಾಮಗಾರಿಗೆ ಸೋಮವಾರ ಶಾಸಕ ಎಚ್.ವಾಯ್.ಮೇಟಿ ಭೂಮಿ ಪೂಜೆ ನೆರವೇರಿಸಿದರು.

ಜಿಲ್ಲಾ ಪಂಚಾಯತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ನಡೆದ ವಸತಿ ನಿಲಯದ ನೂತನ ಕಟ್ಟಡ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಆರ್.ಐ.ಡಿ.ಎಫ್ ಟ್ರಾಂಜ್–30 ಕಾರ್ಯಕ್ರಮದಡಿ ಯೋಜನಾ ವೆಚ್ಚ 500 ಲಕ್ಷಗಳು ಇದ್ದು, ಅಂದಾಜು ಮೊತ್ತ 378.70 ಲಕ್ಷ ರೂ.ಗಳಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ಕಟ್ಟಡ ಕಾಮಗಾರಿ 11 ತಿಂಗಳ ಅವಧಿ ಇದ್ದು, ಇದಕ್ಕೂ ಪೂರ್ವದಲ್ಲಿ ಪೂರ್ಣಗೊಳಿಸುವಂತೆ ನಿರ್ಮಾಣ ಸಂಸ್ಥೆಗೆ ಸೂಚನೆ ನೀಡಿದರು.

ಕಟ್ಟಡ ಒಟ್ಟು 13551 ಚದುರ ಅಡಿಗಳಷ್ಟು ವಿಸ್ತೀರ್ಣ ಹೊಂದಿದ್ದು, ಅದರಲ್ಲಿ ನೆಲಮಹಡಿ 463.41 ಚ.ಮೀ ವಿಸ್ತೀರ್ಣ ಹೊಂದಿದ್ದು, ಮೊದಲನೇ ಮತ್ತು ಎರಡನೇ ಮಹಡಿ 397 ಚ.ಮೀ ವಿಸ್ತರ್ಣ ಹೊಂದಿದೆ ನೆಲ ಮಹಡಿಯಲ್ಲಿ ವಿಶ್ರಾಂತಿ ಕೊಠಡಿ , ಊಟದ ಕೋಣೆ, ಅಡುಗೆ ಕೋಣೆ, ಮೇಲ್ವಿಚಾರಕರ, ಕಚೇರಿ, ಸ್ನಾನದ ಕೋಣೆಗಳು, ಶೌಚಾಲಯ, ಉಗ್ರಾಣ ಕೊಠಡಿ, ವಿದ್ಯಾರ್ಥಿಗಳ ಕೊಠಡಿಗಳು ಇರುವುದಾಗಿ ಹೇಳಿದರು. ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು ಎಂದು ತಿಳಿಸಿದರು.

ಕಾರ್ಯಕ್ರಮಲ್ಲಿ ಜಿ.ಪಂ ಮಾಜಿ ಅಧ್ಯಕ್ಷೆ ಬಾಯಕ್ಕ ಮೇಟಿ, ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ತಾಲೂಕಾ ಅಧ್ಯಕ್ಷ ಎಸ್.ಎನ್.ರಾಂಪೂರ, ದ್ಯಾಮಣ್ಣ ಗಾಳಿ, ನಾಗರಾಜ ಹದ್ಲಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಆಶಾಪೂರ, ಕರ್ನಾಟಕ ಗೃಹ ಮಂಡಳಿಯ ಕಾರ್ಯನಿರ್ವಾಹಕ ಅಭಿಯಂತರ ವಿಜಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

# 79ನೇ ಸ್ವಾತಂತ್ರ ದಿನಾಚರಣೆ; ಜು.23 ರಂದು ಪೂರ್ವಭಾವಿ ಸಭೆ

ಬಳ್ಳಾರಿ,ಜು.21–

ಇದೇ ಆಗಸ್ಟ್ 15 ರಂದು 79ನೇ ಸ್ವಾತಂತ್ರ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಕೇಂದ್ರದಲ್ಲಿ ಆಚರಣೆ ಕುರಿತಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಜುಲೈ 23 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ. ಸಭೆಗೆ ಯಾವುದೇ ಪ್ರತಿನಿಧಿಯನ್ನು ನಿಯೋಜಿಸದೇ ಜಿಲ್ಲಾ ಮಟ್ಟದ ಅಧಿಕಾರಿಗಳು ನಿಗದಿಪಡಿಸಿದ ಸಮಯಕ್ಕೆ ಸರಿಯಾಗಿ ಹಾಜರಿರಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.21–ಕುಡಿತಿನಿಯ ಪೊಲೀಸ್ ಠಾಣೆ ವ್ಯಾಪ್ತಿಯ ಸಿದ್ದಮ್ಮನಹಳ್ಳಿ ಗ್ರಾಮದ ನಿವಾಸಿಯಾದ ಜನಾರ್ಧನ ವೈ.ಎನ್ನುವ 23 ವರ್ಷದ ವ್ಯಕ್ತಿ 2025 ರ ಏ.09 ರಂದು ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಕುಡಿತಿನಿ ಪೊಲೀಸ್ ಠಾಣೆಯ ಠಾಣಾಧಿಕಾರಿ ಮನವಿ ಮಾಡಿದ್ದಾರೆ. ವ್ಯಕ್ತಿಯ ಚಹರೆ: ಎತ್ತರ 5.4 ಅಡಿ, ಕಪ್ಪು ಮೈ ಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಗಡ್ಡ ಬಿಟ್ಟಿರುತ್ತಾನೆ. ಕಾಣೆಯಾದ ಸಂರ್ದಭದಲ್ಲಿ ಬಿಳಿ ಬಣ್ಣದ ಅಂಗಿ, ನೀಲಿ ಬಣ್ಣ ಪ್ಯಾಂಟ್ ಧರಿಸಿರುತ್ತಾನೆ, ಕನ್ನಡ ಭಾಷೆ ಮಾತನಾಡುತ್ತಾನೆ. ಈ ಮೇಲ್ಕಂಡ ಚಹರೆ ಗುರುತುಳ್ಳ ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಕುಡುತಿನಿ ಪೊಲೀಸ್ ಠಾಣೆಯ ದೂ.08393263433, ಪಿಎಸ್ಐದೂ. 08392258400, ಬಳ್ಳಾರಿ ಪೊಲೀಸ್ ಕಟ್ರೋಲ್ ರೂಂ ದೂ:08392–258100 ಗೆ ಸಂಪರ್ಕಿಸಬಹುದು ಅವರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನರೇಗಾ ಕೂಲಿಕಾರರ ವಿಮೆ ಮಾಡಿಸಿ ಅವರ ಆಪತ್ತಿನ ಕಾಲದಲ್ಲಿ ನೆರವಾಗಿ:ಡಾ. ಗಿರೀಶ ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.21 : ಕೇಂದ್ರ ಸರಕಾರವು ನರೇಗಾ ಯೋಜನೆ ಸೇರಿದಂತೆ ವಿವಿಧ ಯೋಜನೆಗಳಡಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ವಿಮೆ ಮಾಡಿಸಲು ಅವಕಾಶ ಮಾಡಿರುವುದರಿಂದ ನರೇಗಾ ಕೂಲಿಕಾರರ ವಿಮೆ ಮಾಡಿಸಿ ಅವರ ಆಪತ್ತಿನ ಕಾಲದಲ್ಲಿ ನೆರವಾಗಿ ಎಂದು ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ ತಿಳಿಸಿದರು.

ಅವರು ಸೋಮವಾರ ಬೀದರ ಜಿಲ್ಲಾ ಪಂಚಾಯತಿಯಲ್ಲಿ ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ಎಇಇಗಳು, ಎಡಿಗಳು, ಪಿಡಿಒಗಳ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಮಾತನಾಡುತ್ತಿದ್ದರು.

ಬೀದರ ಜಿಲ್ಲೆಯ ಮನರೇಗಾ ಕೂಲಿಕಾರರ ವಿಮೆ ಮಾಡಿಸಲು ಜಿಲ್ಲಾ ಪಂಚಾಯತಿಯಿಂದ ಅಭಿಯಾನ ಹಮ್ಮಿಕೊಂಡು ಪ್ರಗತಿ ಸಾಧಿಸಲು ಸೂಚಿಸಲಾಗಿದೆ. ಜುಲೈ.18 ರಿಂದ ಅಗಸ್ಟ್.18 ರವರೆಗೆ ಒಂದು ತಿಂಗಳ ಕಾಲ ಮನರೇಗಾ ಕೂಲಿಕಾರರ ವಿಮೆ ಮಾಡಿಸಲು ಅಭಿಯಾನ ಕೈಗೊಂಡಿದ್ದು ಈ ಅಭಿಯಾನದ ಅವಧಿಯಲ್ಲಿ ಜಿಲ್ಲೆಯ ಎಲ್ಲಾ 504890 ಗ್ರಾಮೀಣ ಕೂಲಿಕಾರರ ವಿಮಾ ಯೋಜನೆಗಳಲ್ಲಿ ಕೂಲಿಕಾರರನ್ನು ಕಡ್ಡಾಯವಾಗಿ ನೊಂದಣಿ ಮಾಡಿಸತಕ್ಕದ್ದು. ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಹಾಯಕ ನಿರ್ದೇಶಕರುಗಳು ವಿಶೇಷ ಆಸಕ್ತಿ ವಹಿಸಿ ನರೇಗಾ ಕೂಲಿಕಾರರ ಪ್ರತಿಶತ 100 ವಿಮೆ ಮಾಡಿಸಬೇಕು" ಎಂದು ಅವರು ಸೂಚಿಸಿದರು.

ನರೇಗಾ ಕೂಲಿಕಾರರಾಗಿ ಕೆಲಸ ಮಾಡುತ್ತಿರುವ ಗ್ರಾಮೀಣ ಕೂಲಿಕಾರರನ್ನು ಪ್ರಧಾನ ಮಂತ್ರಿ ಜೀವನ್ ಬಿಮಾ ಯೋಜನೆ (ಕಒ-ಎಎಃಜ) ಪ್ರಧಾನ ಮಂತ್ರಿ ಜೀವನ್ ಬಿಮಾ ಯೋಜನೆಯಡಿ ವಾರ್ಷಿಕ ರೂ 436 ಗಳ ವಿಮಾ ಕಂತು ಪಾವತಿಸಿದರೆ ರೂ 2.00 ಲಕ್ಷಗಳ ಜೀವವಿಮೆ ಪಡೆಯಬಹುದು. ಗ್ರಾಮೀಣ ಪ್ರದೇಶದ 18 ರಿಂದ 50 ವಯೋಮಾನದ,ಬ್ಯಾಂಕ್ ಖಾತೆ ಹೊಂದಿರುವ ಫಲಾನುಭವಿಗಳು ಈ ಸೌಲಭ್ಯ ಪಡೆಯಲು ಅರ್ಹರಿದ್ದಾರೆ. ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ (ಕಒಎಎಃಜ) ವಾರ್ಷಿಕ 20 ರೂಪಾಯಿಗಳ ವಿಮಾ ಕಂತು ಪಾವತಿಸುವ 18 ರಿಂದ 70 ವಯೋಮಾನದವರು ಈ ಯೋಜನೆಯಡಿ ನೊಂದಾಯಿಸಿಕೊಳ್ಳಬಹುದು.ಅಪಘಾತದ ಸಂದರ್ಭದಲ್ಲಿ 2.00 ಲಕ್ಷಗಳವರೆಗೆ ವಿಮೆ ಪಡೆಯಬಹುದಾಗಿದೆಂದರು.

ಪ್ರಧಾನ ಮಂತ್ರಿ ಆರೋಗ್ಯ ಯೋಜನೆಯಡಿ ಸರಕಾರದಿಂದ ಗುರುತಿಸಲ್ಪಟ್ಟ ಸಾರ್ವಜನಿಕ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಈ ಯೋಜನೆಯಡಿ ನೊಂದಾಯಿತ ಕುಟುಂಬಗಳಿಗೆ ವಾರ್ಷಿಕ ರೂ 5.00 ಲಕ್ಷಗಳವರೆಗೆ ನಗದುರಹಿತ ವೈದ್ಯಕೀಯ ಸೌಲಭ್ಯ ನೀಡಲಾಗುವುದು.ನರೇಗಾ ಯೋಜನೆಯು ಗ್ರಾಮೀಣ ಕೂಲಿಕಾರರಿಗೆ ವರ್ಷದಲ್ಲಿ ಒಂದು ನೂರು ದಿನಗಳ ಉದ್ಯೋಗ ಖಾತ್ರಿ ನೀಡುವುದರ ಜೊತೆಗೆ ಹಲವಾರು ಮಾನವೀಯ ಅಂಶಗಳನ್ನು ಹೊಂದಿದ್ದು ಕೇಂದ್ರ ಸರಕಾರದ ಈ 3 ವಿಮಾ ಯೋಜನೆಗಳು ನರೇಗಾ ಕೂಲಿಕಾರರು ಕೆಲಸದಲ್ಲಿ ಮೃತಪಟ್ಟಾಗ ಇಲ್ಲವೆ ಗಾಯಗೊಂಡಾಗ ಅವರಿಗೆ ನೆರವು ಆಗುವ ಯೋಜನೆಗಳಾಗಿದ್ದು ಕಾರ್ಯನಿರ್ವಾಹಕ ಅಧಿಕಾರಿಗಳು,ಎಡಿಗಳು ಮತ್ತು ಪಿಡಿಒಗಳು ಕೂಲಿಕಾರರ ಬದುಕಿಗೆ ಭದ್ರತೆ ಒದಗಿಸುವ ಈ ಯೋಜನೆಗಳ ಬಗ್ಗೆ ವೈಯಕ್ತಿಕ ಆಸಕ್ತಿ ವಹಿಸಿ ಎಲ್ಲಾ ಕೂಲಿಕಾರರನ್ನು ನೊಂದಾಯಿಸಬೇಕು ಎಂದು ಡಾ.ಗಿರೀಶ ದಿಲೀಪ್ ಬದೋಲೆಯವರು ಕಾರ್ಯನಿರ್ವಾಹಕ ಅಧಿಕಾರಿಗಳು,ಎಡಿಗಳು ಮತ್ತು ಪಿಡಿಒಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.ನರೇಗಾ ಕೂಲಿಕಾರರ ಬದುಕಿಗೆ ಭದ್ರತೆ ಒದಗಿಸುವ ವಿಮಾ ಯೋಜನೆಗಳ ಬಗ್ಗೆ ಬೀದರ ಜಿಲ್ಲೆಯಲ್ಲಿ ಅಭಿಯಾನ ಕೈಗೊಂಡಿರುವುದು ವಿಶೇಷವಾಗಿದೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ್ ಬದೋಲೆಯವರ ಕೂಲಿಕಾರರ ಬಗೆಗಿನ ಕಾಳಜಿ ಮತ್ತು ಮಾನವೀಯ ಕಳಕಳಿಯಿಂದ ಬೀದರ ಜಿಲ್ಲೆಯಲ್ಲಿ ಈ ಅಭಿಯಾನ ನಡೆಯುತ್ತಿದೆ ಎಂದರು.

ಈ ಸಂದರ್ಭದಲ್ಲಿ ಉಪಕಾರ್ಯದರ್ಶಿ ಮುಕ್ಕಣ್ಣ ಕರಿಗಾರ, ಯೋಜನಾ ನಿರ್ದೇಶಕ ಜಗನ್ನಾಥ ಮೂರ್ತಿ, ಸಹಾಯಕ ಕಾರ್ಯದರ್ಶಿ ಬೀರೇಂದ್ರಸಿಂಗ್, ಸಹಾಯಕ ನಿರ್ದೇಶಕ ಜಯಪ್ರಕಾಶ ಚೌಹಾಣ, ಪಿ ಆರ ಇ ಡಿ ಯ ಕಾರ್ಯಪಾಲ ಅಭಿಯಂತರರಾದ ಶಿವಾಜಿ ಡೋಣಿ, ಸಹಾಯಕ ಕಾರ್ಯಪಾಲಕ ಅಭಿಯಂತರ ಖಲೀಮುದ್ದೀನ್, ಗ್ರಾಮೀಣ ಕುಡಿಯುವ ನೀರ, ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಮಾಣಿಕರಾವ್ ಕೆರೂರ,

ಅಧೀಕ್ಷಕ ಮಹ್ಮದ್ ಬಶೀರ, ಡಿ ಪಿ ಎಂ ವಾಸೀಮ್ ಪರ್ವೇಜ್ ,ಎಡಿಪಿಸಿ ದೀಪಕ್ ಕಡಿಮನಿ, ಸಾಮಾಜಿಕ ಲೆಕ್ಕ ಪರಿಶೋಧನೆ ಜಿಲ್ಲಾ ವ್ಯವಸ್ಥಾಪಕ ದೇವಿದಾಸ್, ಗುರುರಾಜ,ಲೋಕೇಶ,ರಜನಿಕಾಂತ, ಅಂಬಿಕಾ, ಕೋಮಲ್, ಧನರಾಜ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗುಂಡಿ ಮುಚ್ಚಲು ಮುಂದಾದ ಜನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 21 : ಔರಾದ್ ಹದಗೆಟ್ಟ ರಸ್ತೆಯಿಂದ ಬೇಸತ್ತ ಖಾನಾಪೂರ ಗ್ರಾಮಸ್ಥರು ತಾವೇ ರಸ್ತೆ ಮೇಲಿನ ಗುಂಡಿ ಮುಚ್ಚಲು ಮುಂದಾಗಿದ್ದಾರೆ.

ಬೀದರ್ ಜಿಲ್ಲಾ ಕೇಂದ್ರದಿಂದ ವಡಗಾಂವ್ ಹಾಗೂ ಹತ್ತಾರು ಗಡಿ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ, ಚಂಬೋಳದಿಂದ ಕಂದಗೂಳ ಸೇತುವೆ ವರೆಗಿನ 2 ಕಿ.ಮೀ. ರಸ್ತೆ ತೀರಾ ಹದಗೆಟ್ಟಿದೆ. ರಸ್ತೆ ಮೇಲೆ ದೊಡ್ಡ ದೊಡ್ಡ ಗುಂಡಿಗಳು ಬಿದ್ದು ಸುಗಮ ಸಂಚಾರಕ್ಕೆ ಕುತ್ತು ಬಂದಿದೆ. ಅನೇಕ ಬೈಕ್ ಸವಾರರು ಕೈಕಾಲು ಮುರಿದುಕೊಂಡಿದ್ದಾರೆ. ಆಸ್ಪತ್ರೆಗೆ ಹೋಗುವ ರೋಗಿಗಳು ಪರದಾಡುತ್ತಿದ್ದಾರೆ.

'ಈ ಕೆಟ್ಟ ರಸ್ತೆ ದುರಸ್ತಿ ಮಾಡುವಂತೆ ಜಿಲ್ಲಾಡಳಿತ, ಲೋಕೋಪಯೋಗಿ ಇಲಾಖೆ ಹಾಗೂ ಸ್ಥಳೀಯ ಶಾಸಕರಿಗೆ ಅನೇಕ ಬಾರಿ ಮನವಿ ಮಾಡಿದ್ದೇವೆ. ಆದರೂ ಅವರು ಕನಿಷ್ಠ ಗುಂಡಿ ಮುಚ್ಚಲು ಮುಂದಾಗುತ್ತಿಲ್ಲ. ಈ ಕಾರಣ ನಾವೇ ಗುಂಡಿ ಮುಚ್ಚಲು ಮುಂದಾಗಿದ್ದೇವೆ' ಎಂದು ಸಾಮಾಜಿಕ ಕಾರ್ಯಕರ್ತ ಕಾಶಿನಾಥ ತಿಳಿಸಿದ್ದಾರೆ.

'ಎರಡು ದಿನಗಳ ಹಿಂದೆ ಓಮ್ನಿ ವ್ಯಾನ್‌ನಲ್ಲಿ ಸಿಮೆಂಟ್, ಮರಳು, ಕಾಂಕ್ರಿಟ್ ತಂದು ಕಂದಗೂಳ ಸೇತುವೆ ಬಳಿ ಇರುವ ದೊಡ್ಡ ದೊಡ್ಡ ಗುಂಡಿ ಮುಚ್ಚಿದ್ದೇವೆ. ಈ ಕಾರ್ಯಕ್ಕೆ ನಮ್ಮ ಗೆಳೆಯರಾದ ದತ್ತಾತ್ರಿ, ದಯಾನಂದ, ನಾಗೇಶ, ರಾಜಕುಮಾರ, ಹುಸೇನಸಾಬ್ ಸಹಕಾರ ನೀಡಿದ್ದಾರೆ. ವಾರದೊಳಗೆ ಈ ರಸ್ತೆ ಮೇಲಿನ ಎಲ್ಲ ಗುಂಡಿ ಮುಚ್ಚದಿದ್ದರೆ ನಾವು ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ' ಎಂದು ಎಚ್ಚರಿಸಿದ್ದಾರೆ.

'ಚಾಂಬೋಳದಿಂದ ಕಂದಗಳೂರವರೆಗಿನ ರಸ್ತೆ ಕೆಟ್ಟಿರುವುದು ನಮ್ಮ ಗಮನಕ್ಕೂ ಇದೆ. ಈ ರಸ್ತೆ ಅಭಿವೃದ್ಧಿಗಾಗಿ ಕ್ರಿಯಾ ಯೋಜನೆ ಮಾಡಲಾಗಿದೆ. ಅನುದಾನ ಬಂದ ಬಳಿಕ ಕೆಲಸ ಶುರು ಮಾಡುತ್ತೇವೆ' ಎಂದು ಲೋಕೋಪಯೋಗಿ ಇಲಾಖೆ ಎಇಇ ಪ್ರೇಮಸಾಗರ ತಿಳಿಸಿದ್ದಾರೆ.

# ಪತ್ರಕರ್ತರಿಗೆ ಸರಕಾರದ ಸವಲತ್ತು ಸಿಗಲಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.21: ಗ್ರಾಮೀಣ ಭಾಗದಲ್ಲಿ ಸೇವೆಯಲ್ಲಿರುವ ಅರೆಕಾಲಿಕ ಪತ್ರಕರ್ತರಿಗೆ ಸರಕಾರ ವಿವಿಧ ಸವಲತ್ತು ಕಲ್ಪಿಸಬೇಕು ಎಂದು ಮೆಹಕರ್-ತಡೋಳಾದ ರಾಜೇಶ್ವರ ಶಿವಾಚಾರ್ಯ ಅಭಿಮತ ವ್ಯಕಪಡಿಸಿದರು.

ಪಟ್ಟಣದ ಭಾಲ್ಕೇಶ್ವರ ಶಿಶು ವಿಹಾರ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಜಗದ್ಗುರು ರೇಣುಕಾಚಾರ್ಯ ಜನ ಕಲ್ಯಾಣ ಟ್ರಸ್ಟ್ ಸಹಯೋಗದಲ್ಲಿ ಭಾನುವಾರ ಆಯೋಜಿಸಿದ್ದ 2025ನೆಯ ಸಾಲಿನ ಪತ್ರಕರ್ತರ ದಿನಾಚರಣೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಪತ್ರಕರ್ತರು ಜೀವದ ಹಂಗು ತೊರೆದು ಸಮಾಜದ ಅಂಕು ಡೊಂಕು ತಿದ್ದುವ ಪ್ರಯತ್ನ ಮಾಡುತ್ತಿದ್ದಾರೆ. ಆದರೆ ಅಂತಹ ಪತ್ರಕರ್ತರಿಗೆ ಸರಕಾರ ಇದು ವರೆಗೂ ಸೂಕ್ತ ಸೌಲಭ್ಯ ಕಲ್ಪಿಸದಿರುವುದು ದುರ್ದೈವದ ಸಂಗತಿ. ಸರಕಾರ ಯಾವುದೇ ಸೌಲಭ್ಯ ನೀಡದ ಹಿನ್ನಲೆಯಲ್ಲಿ ಪತ್ರಕರ್ತರು ಸಂಕಷ್ಟದ ನಡುವೆ ಬದುಕು ಸಾಗಿಸುತ್ತಿದ್ದಾರೆ.

ಸರಕಾರ ವಿವಿಧ ಯೋಜನೆ ಅನುಷ್ಠಾನಕ್ಕೆ ಸಾವಿರಾರು ಕೋಟಿ ರೂ ಅನುದಾನ ನೀಡುತ್ತದೆ. ಆದ-ರೆ ಸಮಾಜದ ಸೇವೆಯಲ್ಲಿರುವ ಪತ್ರಕರ್ತರಿಗೆ ಯಾಕೆ ಸೌಲಭ್ಯ ಕಲ್ಪಿಸುತ್ತಿಲ್ಲ ಎಂದು ಪ್ರಶ್ನಿಸಿದರು. ಸರಕಾರ ಇನ್ನಾದರೂ ಎಚ್ಚೆತ್ತುಕೊಂಡು ಪತ್ರಕರ್ತರಿಗೆ ಸೂಕ್ತ ಸಂಭಾವನೆ, ಭತ್ಯ, ನಿವೇಶನ, ವಾಹನದ ವ್ಯವಸ್ಥೆ ಸೇರಿ ವಿವಿಧ ಸವಲತ್ತು ಕಲ್ಪಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಯುವ ಮುಖಂಡ ಚೆನ್ನಬಸವಣ್ಣ ಬಳತೆ ಮಾತನಾಡಿ, ಇಂದಿನ ಡಿಜಿಟಲ್ ಯುಗದಲ್ಲಿಯು ಪ್ರಿಂಟ್ ಮಿಡಿಯಾ ವಸ್ತುನಿಷ್ಠ ಸುದ್ದಿಗಳನ್ನು ನೀಡುವ ತನ್ನದೆ ಆದ ಗೌರವ ಘನತೆ ಇಟ್ಟು-ಕೊಂಡಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಅಧ್ಯಕ್ಷ ಸಿದ್ರಾಮಯ್ಯ ಮಾತನಾಡಿ, ಪತ್ರಕರ್ತರು ದಿನದ 24 ಗಂಟೆ ಸಮಾಜದಲ್ಲಿ ಸೇವೆಯಲ್ಲಿದ್ದು ಜನರ ಕುಂದು ಕೊರತೆಗಳನ್ನು ಬಗೆಹರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟೆ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ತಾಲೂಕು ಪತ್ರಕರ್ತರ ಸಂಘದ ಕಾರ್ಯದರ್ಶಿ ಗಣಪತಿ ಬೋಚ-ರೆ, ಸಂಸ್ಥೆಯ ನಿರ್ದೇಶಕರಾದ ಗುರಯ್ಯ ಸ್ವಾಮಿ, ವಿಜಯಕುಮಾರ ಭುಸಗುಂಡೆ, ಡಾ.ಪ್ರಭುಲಿಂಗ ಸ್ವಾಮಿ, ಸತೀಶ ಮಠ ಸೇರಿದಂತೆ ಹಲವರು ಇದ್ದರು. ಮುಖ್ಯಗುರು ಬಾಲಾಜಿ ಬಿರಾದಾರ್ ಸ್ವಾಗತಿಸಿದರು. ಸುನಿತಾ ಸಂಗೋಳಗೆ ನಿರೂಪಿಸಿದರು. ಸೋಪಾನ ವಂದಿಸಿದರು.

**ಸನ್ಮಾನ :**

ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ತಾಲೂಕಿನಲ್ಲಿ ಸೇವೆ ಸಲ್ಲಿಸುತ್ತಿರುವ ಪತ್ರಕರ್ತರಿಗೆ ಸನ್ಮಾನಿಸಲಾಯಿತು. ರಾಜೇಶ್ವರ ಶಿವಾಚಾರ್ಯರು ಪತ್ರಕರ್ತರಿಗೆ ಸನ್ಮಾನಿಸಿ, ಆಶೀರ್ವದಿಸಿದರು.

# ಎಲೆಕ್ಟ್ರಿಕ್ ಆಟೋಗಳು ಪರ್ಮಿಟ್ ಪಡೆಯುವುದು ಕಡ್ಡಾಯ:ಡಿ.ಸಿ ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.21: ಜಿಲ್ಲೆಯಲ್ಲಿ ಈಗಾಗಲೆ ಸಾರಿಗೆ ಕಚೇರಿಯಿಂದ ನೋಂದಣಿಯಾಗಿರುವ ಮತ್ತು ಮುಂದೆ ನೊಂದಣಿಯಾಗುವ ಎಲ್ಲಾ ಎಲೆಕ್ಟ್ರಿಕ್ ಆಟೋಗಳು ಆರ್.ಟಿ.ಓ ಕಚೇರಿಯಿಂದ ಕಲಬುರಗಿ ನಗರದಲ್ಲಿ ಸಂಚಾರಕ್ಕೆ ಪರ್ಮಿಟ್ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದರು.

ಶನಿವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಮತ್ತು ಜಿಲ್ಲಾ ಜೀವ ರಕ್ಷಕ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇದೂವರೆಗೆ ಬಯೋ ಇಂಧನದ ವಾಹನಗಳಿಗೆ ಪ್ರೋತ್ಸಾಹಿಸಲು ಪರ್ಮಿಟ್ ದಿಂದ ವಿನಾಯಿತಿ ನೀಡಲಾಗಿತ್ತು. ಇದೀಗ ಸರ್ಕಾರದ ನಿರ್ದೇಶನಾಸಾರ ಎಲೆಕ್ಟ್ರಿಕ್ ಆಟೋ ಮಾಲೀಕರು ಪರ್ಮಿಟ್ ಪಡೆಯಬೇಕಾಗಿದೆ ಎಂದರು.

ಇನ್ನು ರಸ್ತೆ ಅಪಘಾತ ಪ್ರಕರಣದಲ್ಲಿ ಗಾಯಾಳುಗಳಿಗೆ ಮತ್ತು ಸಾವು-ಮರಣ ಹೋರಾಟದಲ್ಲಿದ್ದವರಿಗೆ ಗೋಲ್ಡನ್ ಹವರ್ ನಲ್ಲಿ ನೆರವು ನೀಡಿದವರಿಗೆ ಪ್ರೋತ್ಸಾದಾಯಕ 5,000 ರೂ. ಮೊತ್ತ ಕೂಡಲೆ ಬಿಡುಗಡೆ ಮಾಡಬೇಕು ಎಂದ ಜಿಲ್ಲಾಧಿಕಾರಿಗಳು, ಎಸ್.ಪಿ. ಕಚೇರಿಯಿಂದ 8 ಪ್ರಸ್ತಾವನೆಗಳು ಬಂದಿದ್ದು, ಕೂಡಲೆ ಸಹಾಯ ಹಸ್ತ ಚಾಚಿದ ಸಾರ್ವಜನಿಕರಿಗೆ ಪ್ರೋತ್ಸಾಹ ಧನ ಬಿಡುಗಡೆ ಮಾಡುವಂತೆ ನಿರ್ದೇಶನ ನೀಡಿದರು.

ಹಿಟ್ & ರನ್, ಪರಿಹಾರಕ್ಕೆ ಪ್ರಸ್ತಾವನೆ ಸಲ್ಲಿಸಿ: ಜಿಲ್ಲೆಯಾದ್ಯಂತ ಹಿಟ್ & ರನ್ ಪ್ರಕರಣಗಳಲ್ಲಿ ವಿಮೆ ಮಾಡಿಸಿಕೊಳ್ಳದ ಪಾದಚಾರಿಗಳಿಗೆ ಮರಣ ಪ್ರಕರಣ ಮತ್ತು ರಸ್ತೆ ಅಫಘಾತದಲ್ಲಿ ಗಾಯಾಳು ಪ್ರಕರಣಗಳ ಪೈಕಿ ಬಾಕಿ ಪ್ರಕರಣಗಳಲ್ಲಿ ತ್ವರಿತವಾಗಿ ಪರಿಹಾರ ನೀಡಲು ವಿಚಾರಣಾಧಿಕಾರಿಗಳಾಗಿರುವ ಕಂದಾಯ ಉಪ ವಿಭಾಗದ ಸಹಾಯಕ ಆಯುಕ್ತರು ಕೂಡಲೆ ಜಿಲ್ಲಾ ಸಮಿತಿಗೆ ವರದಿ ಸಲ್ಲಿಸಬೇಕೆಂದು ಹಿಟ್ & ರನ್ ಅಪಘಾತದಲ್ಲಿ ಮರಣ ಹೊಂದಿದವರಿಗೆ ಮತ್ತು ಗಾಯಾಳುಗಳಿಗೆ ಪರಿಹಾರ ಧನ ಮಂಜೂರಾತಿ ನೀಡುವ ಜಿಲ್ಲಾ ಸಮಿತಿ ಸಭೆಯಲ್ಲಿ ಡಿ.ಸಿ. ಬಿ.ಫೌ-ಜಿಯಾ ತರನ್ನುಮ್ ಸೂಚಿಸಿದರು.

ಹಿಟ್ & ರನ್ ಪ್ರಕರಣಗಳಲ್ಲಿ ಮರಣ ಹೊಂದಿದ್ದವರಿಗೆ 32 ಲಕ್ಷ ರೂ. ಮತ್ತು ಗಾಯಾಳುಗಳಿಗೆ 50 ಸಾವಿರ ರೂ. ನೆರವು ನೀಡಲಾಗುತ್ತಿದ್ದು, ಪೊಲೀಸ್ ಇಲಾಖೆಯು ವೈದ್ಯಕೀಯ ವರದಿಯೊಂದಿಗೆ ಎ.ಸಿ.ಗಳಿಗೆ ಸಲ್ಲಿಸಬೇಕು. ಎ.ಸಿ. ಅವರು ಪರಾಮರ್ಶಿಸಿ ಪರಿಹಾರಕ್ಕೆ ಶಿಫಾರಸ್ಸು ಮಾಡಬೇಕೆಂದ ಅವರು, ಅರ್ಹರೆಲ್ಲರಿಗೂ ತಕ್ಷಣವೇ ಪರಿಹಾರ ಬಿಡುಗಡೆಗೆ ಕ್ರಮ ವಹಿಸುವಂತೆ ಎ.ಸಿ.ಗಳಿಗೆ ಸೂಚಿಸಲಾಯಿತು.

ರಸ್ತೆ ಸುರಕ್ಷತಾ ಸಭೆ: ಇದೇ ಸಂದರ್ಭದಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಸಭೆ ಸಹ ನಡೆಸಿದ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಜಿಲ್ಲೆಯಾದ್ಯಂತ ಈಗಾಗಲೆ ಗುರುತಿಸಿರುವ ಬ್ಲ್ಯಾಕ್ ಸ್ಪಾಟ್‌ಗಳಲ್ಲಿ, ರಸ್ತೆ ತಿರುವುಗಳಲ್ಲಿ ಸೈನೇಜ್ ಬೋರ್ಡ್ ಅಳವಡಿಕೆ, ರಸ್ತೆ ಗುಂಡಿ ಮುಚ್ಚುವುದು ಬೀದಿ ದೀಪ ಅಳವಡಿಕೆ ಸೇರಿದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚಿಸಿದ ಅವರು,

ಪೊಲೀಸ್, ಸಂಚಾರಿ ಪೊಲೀಸ್, ಆರ್.ಟಿ.ಓ, ಡಿ.ಡಿ.ಪಿ.ಐ ಸೇರಿದಂತೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳು ಸುಗಮ ಮತ್ತು ಸುರಕ್ಷತೆಯ ಸಂಚಾರ ನಿಟ್ಟಿನಲ್ಲಿ ಸಾರ್ವಜನಿಕರಿಗೆ ರಸ್ತೆ ನಿಯಮಗಳು


ಕುರಿತು ವ್ಯಾಪಕ ಪ್ರಚಾರ ಮತ್ತು ಅರಿವು ಕಾರ್ಯಕ್ರಮ ಆಯೋಜಿಸಬೇಕು ಎಂದರು.ಸಭೆಯಲ್ಲಿ ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಹೆಚ್ಚುವರಿ

ಎಸ್.ಪಿ.ಮಹೇಶ ಮೇಘಣ್ಣನವರ್, ಡಿ.ಸಿ.ಪಿ ಪ್ರವೀಣ ನಾಯಕ್, ಆರ್.ಟಿ.ಓ ಆನಂಧ ಪಾರ್ತನಳ್ಳಿ, ಲೊಕೋಪಯೋಗಿ ಇಲಾಖೆಯ ಇ.ಇ. ಸುಭಾಷ ಬಿರಾದಾರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನಾವರ ದೌಲಾ ಸೇರಿದಂತೆ ಸಮಿತಿಗಳ ಸದಸ್ಯರು ಭಾಗವಹಿಸಿದ್ದರು.



ಕರ್ನಾಟಕ ರೆಡ್ಡಿ ಜನಸಂಘದ 100 ನೇ ವರ್ಷದ ಶತಮಾನೋತ್ಸವ ಸಮಾರಂಭವನ್ನು ದಿನಾಂಕ: 24-09-2025 ರಂದು ಪ್ಯಾಲೇಸ್ ಗ್ರೌಂಡ್ ನ ಗಾಯತ್ರಿ ವಿಹಾರ ದಲ್ಲಿ ನಡೆಸುವ ಸಂಬಂಧ ಪೂರ್ವಭಾವಿ ಸಭೆಯನ್ನು ಶತಮಾನೋತ್ಸವ ಸಮಿತಿಯ ಅಧ್ಯಕ್ಷರಾದ ಶ್ರೀಯುತ ರಾಮಲಿಂಗಾರೆಡ್ಡಿ ರವರ ಅಧ್ಯಕ್ಷತೆಯಲ್ಲಿ ದಿ: 21-07-2025 ರಂದು ನಡೆಸಲಾಯಿತು. ಸಭೆಯಲ್ಲಿ ಶ್ರೀಯುತ ಕುಪೇಂದ್ರರೆಡ್ಡಿರವರು, ಸಿಕೆ ರಾಮಮೂರ್ತಿರವರು, ಸತೀಶ್ ರೆಡ್ಡಿರವರು ಹಾಗೂ ಸಂಘದ ಅಧ್ಯಕ್ಷರಾದ ಜಯರಾಮರೆಡ್ಡಿ ರವರು ಹಾಗೂ ಸದಸ್ಯರು ಹಾಜರಿದ್ದರು.

# ನುಡಿ ನಮನ ಕಾರ್ಯಕ್ರಮ ಇಂದು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.21: ಇಲ್ಲಿಯ ಚನ್ನಬಸವಾಶ್ರಮ ಪರಿಸರದಲ್ಲಿ ಮಂಗಳವಾರ ಸಾಯಂಕಾಲ 5.30 ಗಂಟೆಗೆ 313ನೆಯ ಮಾಸಿಕ ಶರಣ ಸಂಗಮ ಕಾರ್ಯಕ್ರಮ ಮತ್ತು ಹಿರಿಯ ಸಾಹಿತಿ ವೀರಣ್ಣ ಕುಂಬಾರ ಅವರ ನುಡಿ ನಮನ ಕಾರ್ಯಕ್ರಮ ಜರುಗಲಿದೆ.ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ನಿರಂಜನ ಸ್ವಾಮೀಜಿ ಅನುಭಾವ ನೀಡಲಿದ್ದಾರೆ. ಶಿವಾನಂದ ಸ್ವಾಮೀಜಿ, ಮಹಾಲಿಂಗ ಸ್ವಾಮೀಜಿ, ಬಸವಲಿಂಗ ಸ್ವಾಮೀಜಿ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಆ. 7 ರಂದು ಮೇಯರ್ ಹಾಗೂ ಉಪ ಮೇಯರ್ ಸ್ಥಾನಕ್ಕೆ ಚುನಾವಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.21-ಕಲಬುರಗಿ ಮಹಾನಗರ ಪಾಲಿಕೆಯ 23ನೇ ಅವಧಿಯ ಮೇಯರ್ ಮತ್ತು ಉಪಮೇಯರ್ ಸ್ಥಾನಗಳಿಗೆ ಹಾಗೂ ನಾಲ್ಕು ಸ್ಥಾಯಿ ಸಮಿತಿಗಳಿಗೆ ಚುನಾವಣೆಯು 2025ರ ಆಗಸ್ಟ್ 7 ರಂದು ಮಧ್ಯಾಹ್ನ 12.30 ಗಂಟೆಗೆ ಕಲಬುರಗಿ ಮಹಾನಗರಪಾಲಿಕೆಯ ಇಂದಿರಾ ಸ್ಮಾರಕ ಭವನ (ಟೌನ್‌ಹಾಲ್) ದಲ್ಲಿ ಜರುಗಲಿದೆ ಎಂದು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು



ತಿಳಿಸಿದ್ದಾರೆ.

ಮಹಾನಗರ ಪಾಲಿಕೆಯ ಮೇಯರ್ ಸ್ಥಾನವು "ಸಾಮಾನ್ಯ (ಮಹಿಳೆ)" ವರ್ಗಕ್ಕೆ ಹಾಗೂ ಉಪ ಮೇಯರ್ ಸ್ಥಾನವು "ಹಿಂದುಳಿದ ವರ್ಗ (ಬ)"ಕ್ಕೆ ಮೀಸಲಿಡಲಾಗಿದೆ. ನಾಲ್ಕು ಸ್ಥಾಯಿ ಸಮಿತಿಗಳಾದ ತೆರಿಗೆ ನಿರ್ಧರಣೆ ಹಣಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿ, ಸಾರ್ವಜನಿಕ ಆರೋಗ್ಯ ಶಿಕ್ಷಣ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ, ನಗರ ಯೋಜನೆ ಮತ್ತು ಸುಧಾರಣೆ ಸ್ಥಾಯಿ ಸಮಿತಿ ಹಾಗೂ ಲೆಕ್ಕಪತ್ರ ಸ್ಥಾಯಿ ಸಮಿತಿ ಸದಸ್ಯರ ಆಯ್ಕೆಗಾಗಿಯೂ ಇದೇ ಸಂದರ್ಭದಲ್ಲಿ ಚುನಾವಣೆ ಜರುಗಲಿದೆ.

# ಹಾಸನ - ಸೋಲಾಪುರ ರೈಲಿನಲ್ಲಿ ಹೊಗೆ: ಪ್ರಯಾಣಿಕರಲ್ಲಿ ಆತಂಕ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.21: ಸೋಲಾಪುರ ಎಕ್ಸ್‌ಪ್ರೆಸ್ ರೈಲಿನಲ್ಲಿ ಬ್ರೇಕ್ ಬೈಡಿಂಗ್ ದೋಷದಿಂದ ದಟ್ಟ ಹೊಗೆ ಕಾಣಿಸಿಕೊಂಡಿದೆ. ಸೋಮವಾರ ಬೆಳಿಗ್ಗೆ ಶಹಾಬಾದ್ ತಾಲ್ಲೂಕಿನ ಮರತೂರ್ ಬಳಿ ಘಟನೆ ಸಂಭವಿಸಿದೆ.

ಬ್ರೇಕ್ ಬೈಡಿಂಗ್ ತಾಂತ್ರಿಕ ದೋಷದಿಂದ ದಟ್ಟ ಹೊಗೆ ಕಾಣಿಸಿಕೊಂಡಿದೆ. ಕೂಡಲೇ, ಪಾಯಿಂಟ್ ಮ್ಯಾನ್ ಇದನ್ನು ಗಮನಿಸಿ ರೇಡ್ ಹ್ಯಾಂಡ್ ಸಿಗ್ನಲ್ ತೋರಿಸಿ ರೈಲು ನಿಲ್ಲಿಸಿದ್ದಾರೆ. ಬಳಿಕ ಪರಿಶೀಲಿಸಿ, 4ನೇ ಕೋಚ್‌ನಲ್ಲಿ ಕಾಣಿಸಿಕೊಂಡಿದ್ದ ಬ್ರೇಕ್

ಬೈಂಡಿಂಗ್ ದೋಷ ಸರಿಪಡಿಸಲಾಗಿದೆ. ಘಟನೆಯಿಂದ ಪ್ರಯಾಣಿಕರಲ್ಲಿ ಕೆಲಕಾಲ ಆತಂಕ ಉಂಟಾಗಿ-ತ್ತು. ಬ್ರೇಕ್ ಬೈಡಿಂಗ್ ದೋಷ ಸರಿಪಡಿಸಿದ ಬಳಿಕ ಪುನಃ ರೈಲು ಸಂಚರಿಸಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.